ಸಂಪುಟ: 21, ಸಂಚಿಕೆ: 330, ಪುಟಗಳು: 8, ಶುಕ್ರವಾರ, 6 ಸೆಪ್ಟೆಂಬರ್ 2024 RNI NO. KARKAN/2002/08054
epaper: www.sanjemugilu.com



ವೇಣು ಸಾರಥ್ಯದಲ್ಲಿ...

ಸುದ್ದಿಗಳ ಹೊನಲು

# ಸಂಜೆ ಮುಗಿಲು

ಕನ್ನಡ ಪ್ರಾದೇಶಿಕ ಸಂಜೆ ದಿನಪತ್ರಿಕೆ

ಬೆಂಗಳೂರು। ಬೆಂಗಳೂರು ಗ್ರಾಮಾಂತರ। ಕೋಲಾರ। ಚಿಕ್ಕಬಳ್ಳಾಪುರ। ರಾಮನಗರ। ಮಂಡ್ಯ। ಮೈಸೂರು। ಚಾಮರಾಜನಗರ

₹3

### ಸುಭಾಷಿತ

ಒಳ್ಳೆ ಸಂಸ್ಕಾರ ಇದ್ರೆ, ಜಗತ್ತನ್ನೇ ಗೆಲ್ಲಬಹುದು. ಅದೇ ಅಹಂಕಾರ ತುಂಬಿ ತುಳುಕುತ್ತಿದ್ದರೆ ಗೆದ್ದ ಸಾಮ್ರಾಜ್ಯವನ್ನು ಕಳೆದುಕೊಳ್ಳಬಹುದು.

ಶ್ರೀ ಕೃಷ್ಣ ಪರಮಾತ್ಮ

### ಪಂಚಾಂಗ

(ಶುಕ್ರವಾರ 6, ಸೆಪ್ಟೆಂಬರ್-2024)

- ಶ್ರೀ ಕ್ರೋಧಿ ನಾಮ ಸಂವತ್ಸರ,
- ದಕ್ಷಿಣಾಯಣ, ವರ್ಷ ಋತು,
- ಭಾದ್ರಪದಮಾಸ, ಶುಕ್ಲ ಪಕ್ಷ,
- ತೃತೀಯ/ಚತುರ್ಥಿ, ಶುಕ್ರವಾರ,
- ಹಸ್ತ ನಕ್ಷತ್ರ/ಚಿತ್ತ ನಕ್ಷತ್ರ
- ರಾಹುಕಾಲ: 10:49 ರಿಂದ 12:21
- ಗುಳಿಕಕಾಲ: 07:45 ರಿಂದ 09:17
- ಯಮಗಂಡಕಾಲ: 03:25 ರಿಂದ 04:57



ಸಂಜೆ ಮುಗಿಲು ಸಮಸ್ತ ಓದುಗರು, ಏಜೆಂಟರು, ಜಾಹೀರಾತುದಾರರಿಗೆ ಗೌರಿ-ಗಣೇಶ ಹಬ್ಬದ ಶುಭಾಷಯಗಳು

-ಸಂಪಾದಕರು



ದಶಪ್ರಮತಿ ಮುದ್ರಣಾಲಯ
dashapramathi mudranalaya
PRE-PRESS PRINTERS
Contact: +91 9483589085 | e-mail: dashapramathimudranalaya@gmail.com
We Undertake Printing of Newspapers | Tabloids | Magazines



## ಗೌರಿ-ಗಣೇಶ ಹಬ್ಬಕ್ಕೆ ಭರ್ಜರಿ ತಯಾರಿ, ಖರೀದಿ ಜೋರು

# ಹೂ, ಹಣ್ಣು ತುಸು ದುಬಾರಿ

**ಬೆಂಗಳೂರು:** ಬೆಂಗಳೂರು ನಗರವಾಸಿಗಳು ಗೌರಿ ಗಣೇಶ ಹಬ್ಬ ಸ್ವಾಗತಿಸಲು ತುದಿಗಾಲಿನಲ್ಲಿ ನಿಂತಿದ್ದಾರೆ. ಭಾದ್ರಪದ ಶುಕ್ಲ ಚೌತಿಯಂದು ಬರುವ ಗೌರಿ-ಗಣೇಶನನ್ನ ಸ್ವಾಗತಿಸಲು ಸಿಟಿ ಮಂದಿ ಸಜ್ಜಾಗಿದ್ದು, ಗುರುವಾರವೇ ಕೆಆರ್ ಮಾರ್ಕೆಟ್‌ನಲ್ಲಿ ಖರೀದಿ ಜೋರಾಗಿತ್ತು. ಹೂವು, ಹಣ್ಣು, ಗರಿಕೆ, ಎಕ್ಕದ ಹಾರದ ಜೊತೆಗೆ ಹಬ್ಬಕ್ಕೆ ಬೇಕಾದ ವಸ್ತುಗಳ ಖರೀದಿಯಲ್ಲಿ ಗ್ರಾಹಕರು ವ್ಯಸ್ತರಾಗಿದ್ದರು. ಇತ್ತ ಪ್ರತಿ ಬಾರಿಯಂತೆ ಈ ಸಲ ಕೂಡ ಹೂ, ಹಣ್ಣುಗಳ ಬೆಲೆ ಕೊಂಚ ಏರಿಕೆಯಾಗಿದೆ. ಇದು ಗ್ರಾಹಕರಿಗೆ ಸ್ವಲ್ಪಮಟ್ಟಿಗೆ ಬಿಸಿ ಮುಟ್ಟಿಸಿತ್ತು. ಆದರೆ, ಕಳೆದ ವರ್ಷಕ್ಕೆ ಹೋಲಿಸಿದರೆ ಈ ಬಾರಿ ಕೊಂಚ ದರ ತಗ್ಗಿದ್ದು ಗ್ರಾಹಕರಿಗೆ ನೆಮ್ಮದಿ ಮೂಡಿಸಿತ್ತು.

ಇನ್ನು ಒಂದೆಡೆ ಹಬ್ಬದ ಸಾಮಾಗ್ರಿಗಳ ಖರೀದಿಯಾದರೆ, ಮತ್ತೊಂದೆಡೆ ಮಾರ್ಕೆಟ್‌ಗೆ ಎಂಟ್ರಿಕೊಟ್ಟಿರುವ ಬಣ್ಣ ಬಣ್ಣದ ಗಣಪ, ಪರಿಸರ ಸ್ನೇಹಿ ಗಣಪ, ಮುದ್ದುಮುಖದ ಗೌರಿ ವಿಗ್ರಹಗಳಿಗೂ ಬೇಡಿಕೆ ಸೃಷ್ಟಿಯಾಗಿದೆ.

ಗೌರಿ ಗಣೇಶನ ಮೂರ್ತಿಗಳನ್ನು ಖರೀದಿಸುವವರ ಸಂಖ್ಯೆ ಕೂಡ ಹೆಚ್ಚಾಗಿತ್ತು. ಮುಂಬೈ, ಪುಣೆ ಸೇರಿದಂತೆ ಹಲವೆಡೆಯಿಂದ ಬಂದ ಗಣಪನ ಮೂರ್ತಿಗಳು ಮಾರಾಟವಾಗಿದ್ದಕ್ಕೆ ವ್ಯಾಪಾರಿಗಳು ಖುಷಿಯಾಗಿದ್ದಾರೆ.

ಒಟ್ಟಿನಲ್ಲಿ ಗೌರಿ ಗಣೇಶ ಹಬ್ಬಕ್ಕೆ ನಗರವಾಸಿಗಳು ಸಜ್ಜಾಗಿದ್ದು, ವಾರಾಂತ್ಯದಲ್ಲೇ ಹಬ್ಬ ಬಂದಿರುವುದು ಸಂಭ್ರಮವನ್ನು ಮತ್ತಷ್ಟು ಹೆಚ್ಚಿಸಿದೆ.



### ಹೂ, ಹಣ್ಣುಗಳ ದರ ವಿವರ

ಕನಕಾಂಬರ ಕೆಜಿಗೆ – 3000 ರೂ. ಮಲ್ಲಿಗೆ–ಕೆಜಿಗೆ 600 ರೂ. ಗುಲಾಬಿ– ಕೆಜಿಗೆ 250 ರೂ. ಸೇವಂತಿಗೆ – ಕೆಜಿಗೆ 180 ರೂ. ಸುಗಂಧರಾಜ–ಕೆಜಿಗೆ 240 ರೂ.

### ಹಣ್ಣುಗಳ ದರ

- ಸೇಬು– ಕೆಜಿಗೆ 120 ರಿಂದ 200ರೂ.
- ದಾಳಿಂಬೆ– ಕೆಜಿಗೆ 160 ರೂ.
- ಏಲಕ್ಕಿ ಬಾಳೆ – ಕೆಜಿಗೆ 120 ರೂ.
- ಸೀತಾಫಲ– ಕೆಜಿಗೆ 100 ರೂ.
- ಸಪೋಟ– ಕೆಜಿಗೆ 100 ರೂ.
- ದ್ರಾಕ್ಷಿ – ಕೆಜಿಗೆ 120 – 200 ರೂ.
- ಅನಾನಸ್– ಎರಡಕ್ಕೆ 100–120 ರೂ.

### ಹಬ್ಬದ ಸಾಮಾಗ್ರಿಗಳ ದರ

- ಬಾಳೆಕಂದು– ಜೋಡಿಗೆ 60 ರೂ.
- ಮಾವಿನ ತೋರಣ– 20 ರೂ.
- ಗರಿಕೆ–ಕಟ್ಟಿಗೆ 30 ರೂ.
- ಬಿಲ್ವಪತ್ರೆ– 20ರೂ.
- ಎಕ್ಕದಹಾರ– 50 ರಿಂದ 60 ರೂ.





## ಸಂಕ್ಷಿಪ್ತ ಸುದ್ದಿ

### ಹೆಚ್‌ಎಸ್‌ಆರ್‌ಪಿ ನಂಬರ್ ಪ್ಲೇಟ್ ಅಳವಡಿಸದಿದ್ದರೇ ಭಾರೀ ದಂಡ!

**ಬೆಂಗಳೂರು:** ರಾಜ್ಯ ಸರ್ಕಾರ ಈಗಾಗಲೇ ಹೆಚ್‌ಎಸ್‌ಆರ್‌ಪಿ ನಂಬರ್ ಪ್ಲೇಟ್ ಅಳವಡಿಕೆಗೆ ಸಾಕಷ್ಟು ಬಾರಿ ಗಡುವನ್ನು ನೀಡಿತ್ತು. ವಾಹನ ಸವಾರರು ಸ್ಪಂದಿಸದೇ ಇದ್ದಾಗ ಗಡುವು ಅವಧಿಯನ್ನೂ ವಿಸ್ತರಿಸಿತ್ತು. ಅದಾಗ್ಯೂ ವಾಹನ ಮಾಲೀಕರು ಮಾತ್ರ ಹೆಚ್‌ಎಸ್‌ಆರ್‌ಪಿ ನಂಬರ್ ಪ್ಲೇಟ್‌ಗಳನ್ನು ಅಳವಡಿಸಿಕೊಳ್ಳಲು ಮುಂದಾಗಿಲ್ಲ. ಇದೀಗ ಕೊನೆಯದಾಗಿ ಸಾರಿಗೆ ಇಲಾಖೆ ಮತ್ತೊಮ್ಮೆ ಎಚ್ಚರಿಕೆ ನೀಡಿದೆ.

ಹೆಚ್‌ಎಸ್‌ಆರ್‌ಪಿ ನಂಬರ್ ಪ್ಲೇಟ್ ಅಳವಡಿಕೆಗೆ ವಾಹನ ಸವಾರಿಗೆ ಇದೇ ತಿಂಗಳ ಅಂದರೆ ಸೆಪ್ಟೆಂಬರ್ 15 ಕೊನೆಯ ದಿನವಾಗಿದೆ.

ಇಂದಿನಿಂದ ಹೆಚ್‌ಎಸ್‌ಆರ್‌ಪಿ ನಂಬರ್ ಪ್ಲೇಟ್‌ಗಳನ್ನು ಅಳವಡಿಸಿಕೊಳ್ಳಲು ಕೇವಲ 10 ದಿನಗಳಿದ್ದು, ಆ ದಿನದ ಒಳಗಾಗಿ ಹೆಚ್‌ಎಸ್‌ಆರ್‌ಪಿ ನಂಬರ್ ಪ್ಲೇಟ್ ಅಳವಡಿಸುವಂತೆ ಕೊನೆಯದಾಗಿ ಸಾರಿಗೆ ಇಲಾಖೆ ಸಂದೇಶ ರವಾನಿಸಿದೆ. ಒಂದು ವೇಳೆ ನಿಗದಿತ ದಿನದ ಒಳಗೆ ನಿಯಮ ಪಾಲಿಸದೇ ಇದ್ದರೆ ನಂತರ ದಂಡ ಬೀಳುವ ಸಾಧ್ಯತೆ ಇದೆ. ಪುಟ 2

### ಬಿಜೆಪಿಗೆ ಮುಖಭಂಗ!

**ಚಾಮರಾಜನಗರ:** ಕಳೆದ ವಿಧಾನಸಭಾ ಚುನಾವಣೆಯಲ್ಲಿ ಹೀನಾಯ ಪ್ರದರ್ಶನ ತೋರುವ ಮೂಲಕ ರಾಜ್ಯದಲ್ಲಿ ಕೇವಲ 66 ಸ್ಥಾನಗಳನ್ನು ಗೆದ್ದಿದ್ದ ಬಿಜೆಪಿ ಇತ್ತೀಚೆಗೆ ನಡೆದ ಲೋಕಸಭಾ ಚುನಾವಣೆಯಲ್ಲಿ ಜೆಡಿಎಸ್ ಜೊತೆಗೆ ಮೈತ್ರಿ ಮಾಡಿಕೊಂಡು 19 ಸ್ಥಾನಗಳನ್ನು ಗೆದ್ದು ಬೀಗಿತ್ತು. 2019ರ ಲೋಕಸಭಾ ಚುನಾವಣೆಯಲ್ಲಿ ಕೇವಲ 1 ಸ್ಥಾನ ಗೆದ್ದಿದ್ದ ಕಾಂಗ್ರೆಸ್ 9 ಸ್ಥಾನಗಳಲ್ಲಿ ಗೆಲ್ಲುವ ಮೂಲಕ ತನ್ನ ಸಂಖ್ಯೆಯನ್ನು ಹೆಚ್ಚಿಸಿಕೊಂಡಿತು. ಸದ್ಯ ಕೊಳ್ಳೇಗಾಲ ನಗರಸಭೆಯ ಅಧ್ಯಕ್ಷ-ಉಪಾಧ್ಯಕ್ಷ ಸ್ಥಾನಕ್ಕೆ ನಡೆದ ಚುನಾವಣೆಯಲ್ಲೂ ಬಿಜೆಪಿಗೆ ಬಿಗ್ ಶಾಕ್ ಎದುರಾಗಿದ್ದು, ಕಾಂಗ್ರೆಸ್ ತೆಕ್ಕೆಗೆ ನಗರಸಭೆ ಜಾರಿದೆ. ಪುಟ 2



## ಅಧಿಕಾರಿಗಳನ್ನು 'ಸರ್' ಎಂದು ಸಂಬೋಧಿಸಿದ ಸಚಿವರು

# ಸಿಟ್ಟಾದ ಸಿದ್ದರಾಮಯ್ಯ

**ಬೆಂಗಳೂರು:** ಕರ್ನಾಟಕ ಸಚಿವ ಸಂಪುಟ ಸಭೆ ಗುರುವಾರ ನಡೆದಿದ್ದು, ಮುಖ್ಯಮಂತ್ರಿ ಸಿದ್ದರಾಮಯ್ಯ ನೇತೃತ್ವದಲ್ಲಿ ಹಲವು ನಿರ್ಧಾರಗಳನ್ನು ಕೈಗೊಳ್ಳಲಾಗಿದೆ. ಅನ್ನಭಾಗ್ಯ ಯೋಜನೆಯಡಿ ಐದು ಕೆಜಿ ಅಕ್ಕಿ ಬದಲು ವ್ಯಕ್ತಿಗೆ 170 ರೂ.ನಂತೆ ಹಣ ವರ್ಗಾವಣೆ ಮಾಡುವುದನ್ನು ಮುಂದುವರಿಸುವುದೂ ಸೇರಿದಂತೆ ಹಲವು ಮಹತ್ವದ ನಿರ್ಧಾರಗಳನ್ನು ಸಚಿವ ಸಂಪುಟ ಕೈಗೊಂಡಿದೆ. ಆದರೆ, ಸಭೆಯ ಮಧ್ಯೆ ಅಚ್ಚರಿಯ ಸನ್ನಿವೇಶವೊಂದು ಸೃಷ್ಟಿಯಾಯಿತು.

ಕೆಲವು ಮಂದಿ ಸಚಿವರು ಅಧಿಕಾರಿಗಳನ್ನು 'ಸರ್, ಸರ್' ಎಂದು ಸಂಬೋಧಿಸಿ ಮಾತನಾಡುತ್ತಿದ್ದರು. ಇದನ್ನು ಕಂಡ ಸಿಎಂ ಸಿದ್ದರಾಮಯ್ಯ ಸಿಟ್ಟಾದರು. ಅಷ್ಟೇ ಅಲ್ಲ, ಕೆಲವು ಸಚಿವರಿಗೆ ಸಿಟ್ಟಿನಿಂದಲೇ ಕ್ಲಾಸ್ ತೆಗೆದುಕೊಂಡರು. ಯಾವೊಬ್ಬ ಸಚಿವರೂ ಅಧಿಕಾರಿಗಳನ್ನು 'ಸರ್' ಎಂದು ಕರೆಯಕೂಡದು ಎಂದು ಅಧಿಕಾರಿಗಳೆದುರಿಗೇ ನೇರವಾಗಿ ಸಿಎಂ ಹೇಳಿದರು. ಸಾಂವಿಧಾನಿಕವಾಗಿ ನೀವು (ಸಚಿವರು) ಇಲಾಖೆಯ ನಾಯಕರು. ಅಧಿಕಾರಿ ವರ್ಗ ನಿಮ್ಮ ಕೈಯಡಿ ಇದೆ. ನೀವೇ ಅಧಿಕಾರಿಗಳಿಗೆ 'ಸರ್, ಸರ್' ಎನ್ನುವ ಮೂಲಕ ಮಂತ್ರಿ ಸ್ಥಾನವನ್ನು ಕಡೆಗೆಣಿಸುತ್ತಿದ್ದೀರಾ ಎಂದು ಸಿದ್ದರಾಮಯ್ಯ ಪ್ರಶ್ನಿಸಿದರು. ಪುಟ 2



# ಮಹಿಳೆಗೆ ಮದ್ಯ ಕುಡಿಸಿ ರಸ್ತೆಯಲ್ಲೇ ಅತ್ಯಾಚಾರ

**ನವದೆಹಲಿ:** ರಸ್ತೆಬದಿಯಲ್ಲಿ ಮಹಿಳೆ ಮೇಲೆ ಅತ್ಯಾಚಾರವೆಸಗಿರುವ ಘಟನೆ ಮಧ್ಯಪ್ರದೇಶದ ಉಜ್ಜಯಿನಿಯಲ್ಲಿ ನಡೆದಿದೆ. ಮಾಹಿತಿ ಪ್ರಕಾರ ಆರೋಪಿ ಮೊದಲು ಮಹಿಳೆಗೆ ಮದ್ಯ ಕುಡಿಸಿ ನಂತರ ಆಕೆಯ ಮೇಲೆ ರಸ್ತೆಯಲ್ಲೇ ಅತ್ಯಾಚಾರವೆಸಗಿ ಅಲ್ಲೇ ಬಿಟ್ಟು ಓಡಿ ಹೋಗಿದ್ದಾನೆ.

ಈ ವಿಷಯದ ವೀಡಿಯೋ ಸಾಮಾಜಿಕ ಜಾಲತಾಣಗಳಲ್ಲಿ ವೈರಲ್ ಆಗುತ್ತಿದೆ. ಉಜ್ಜಯಿನಿಯ ಕೊಯ್ಲಾ ಫಾಟಕ್ ಬಳಿ ಘಟನೆ ನಡೆದಿದೆ ಎನ್ನಲಾಗುತ್ತಿದೆ. ಘಟನೆಯ ವಿಡಿಯೋ ವೈರಲ್ ಆದ ನಂತರ ಪೊಲೀಸರು ಕಾರ್ಯಾಚರಣೆ ನಡೆಸಿ ಆರೋಪಿಯನ್ನು ಬಂಧಿಸಿದ್ದಾರೆ. ವಿಡಿಯೋ ವೈರಲ್ ಆದ ನಂತರ ಪೊಲೀಸರು ತಕ್ಷಣ ಕ್ರಮ ಕೈಗೊಂಡು ಸಂತ್ರಸ್ತ ಮಹಿಳೆಯ ದೂರಿನ ಆಧಾರದ ಮೇಲೆ ಆರೋಪಿ ವಿರುದ್ಧ ಪ್ರಕರಣ ದಾಖಲಿಸಿದ್ದಾರೆ. ಯುವಕ ತನ್ನನ್ನು ಮದುವೆಯಾಗುವುದಾಗಿ ಆಮಿಷ ಒಡ್ಡಿ ನಂತರ ಮದ್ಯ ಕುಡಿಸಿ ನಂತರ ತನ್ನೊಂದಿಗೆ ಅನುಚಿತವಾಗಿ ವರ್ತಿಸಿದ್ದಾನೆ ಎಂದು ಮಹಿಳೆ ಪೊಲೀಸರಿಗೆ ತಿಳಿಸಿದ್ದಾರೆ.

ಆರೋಪಿ ಲೋಕೇಶ್ ಎಂದು ಹೇಳಲಾಗಿದ್ದು, ಕೃತ್ಯ ಎಸಗಿ ಅಲ್ಲಿಂದ ಪರಾರಿಯಾಗಿದ್ದಾನೆ. ನಂತರ ಮಹಿಳೆಯ ದೂರಿನ ಮೇರೆಗೆ ಪೊಲೀಸರು ಆರೋಪಿಯನ್ನು ಬಂಧಿಸಿ ನ್ಯಾಯಾಲಯಕ್ಕೆ



ಹಾಜರುಪಡಿಸಿದ್ದಾರೆ ಎಂದು ಕಾಂಗ್ರೆಸ್ ಹೇಳಿದೆ . ವಿಡಿಯೋ ಆಧರಿಸಿ ಪೊಲೀಸರು ತಕ್ಷಣ ಕ್ರಮ ಕೈಗೊಂಡು ಆರೋಪಿಗಳ ವಿರುದ್ಧ ಪ್ರಕರಣ ದಾಖಲಿಸಿಕೊಂಡಿದ್ದಾರೆ ಎಂದು ಉಜ್ಜಯಿನಿ ಸೆಂಟ್ರಲ್ ಕೊತ್ವಾಲಿ ಪೊಲೀಸ್ ಠಾಣೆಯ ಸಿಎಸ್ ಪಿ ಓಂ ಪ್ರಕಾಶ್ ಮಿಶ್ರಾ ತಿಳಿಸಿದ್ದಾರೆ.

# ಜ್ಯೂಸ್ ಬಾಟಲ್ ಮುಚ್ಚಳ ನುಂಗಿ ಮಗು ಸಾವು!

**ಶಿವಮೊಗ್ಗ:** ಪುಟ್ಟ ಮಕ್ಕಳು ಇರುವ ಮನೆಯಲ್ಲಿ ಆ ಕಂದಮ್ಮಗಳ ಬಗ್ಗೆ ಎಷ್ಟು ಎಚ್ಚರದಿಂದ ಇದ್ದರೂ ಸಾಕಾಗೋದಿಲ್ಲ. ಮಕ್ಕಳಿರುವ ಮನೆಯಲ್ಲಿ ಮೈಯಲ್ಲೆಲ್ಲಾ ಕಣ್ಣಾಗಿರಬೇಕು. ಒಂದು ಚೂರು ಎಚ್ಚರ ತಪ್ಪಿದರೂ ಏನಾದರೂ ಯಡವಟ್ಟಾಗಿರುತ್ತದೆ. ಇದು ಮಕ್ಕಳ ತಪ್ಪೇನಲ್ಲ, ಸರಿ ತಪ್ಪು ಏನೂ ಅರಿಯದ ಮಕ್ಕಳು ತಪ್ಪುಗಳು ಮಾಡೋದು ಸಹಜ.

ಇಲ್ಲೊಂದು ಕಡೆ ಪೋಷಕರ ನಿರ್ಲಕ್ಷ್ಯದಿಂದ ಒಂದೂವರೆ ವರ್ಷದ ಪುಟ್ಟ ಮಗು ಅನ್ಯಾಯವಾಗಿ ಸಾವನ್ನಪ್ಪಿರುವ ಘಟನೆ ನಡೆದಿದೆ. ಶಿವಮೊಗ್ಗ ಜಿಲ್ಲೆಯ ಶಿಕಾರಿಪುರ ತಾಲೂಕಿನ ಅಮಟೆಕೊಪ್ಪ ಗ್ರಾಮ ಪಂಚಾಯ್ತಿ ವ್ಯಾಪ್ತಿಯ ಹರಗುವಳ್ಳಿ ಗ್ರಾಮದಲ್ಲಿ ಈ ದುರ್ಘಟನೆ ಸಂಭವಿಸಿದ್ದು, ಜ್ಯೂಸ್ ಬಾಟಲ್ ಮುಚ್ಚಳ ನುಂಗಿ ಒಂದೂವರೆ ವರ್ಷದ ಮಗು ದಾರುಣವಾಗಿ ಸಾವನ್ನಪ್ಪಿದೆ.

ಮನೆಯಲ್ಲಿ ಆಟವಾಡುವ ವೇಳೆ ಈ ಅವಘಡ ಸಂಭವಿಸಿದ್ದು, ಒಂದೂವರೆ ವರ್ಷದ ಮಗುವೊಂದು ಜ್ಯೂಸ್ ಬಾಟಲಿಯ ಮುಚ್ಚಳ ನುಂಗಿದ ತಕ್ಷಣ ಉಸಿರಾಟದ ತೊಂದರೆ ಉಂಟಾಗಿದೆ. ತಕ್ಷಣವೇ ಪೋಷಕರು ಮಗುವನ್ನು ಆಸ್ಪತ್ರೆಗೆ ಕೊಂಡೊಯ್ದರಾದರೂ ಯಾವುದೇ ಪ್ರಯೋಜನವಾಗಲಿಲ್ಲ. ಚಿಕಿತ್ಸೆಗೆ ಫಲಿಸದೆ ಮಗು ಸಾವನ್ನಪ್ಪಿದೆ



ಎಂದು ತಿಳಿದು ಬಂದಿದೆ. ಶಿಕಾರಿಪುರ ತಾಲೂಕಿನ ಅಮಟೆಕೊಪ್ಪ ಗ್ರಾಮ ಪಂಚಾಯ್ತಿ ವ್ಯಾಪ್ತಿಯ ಹರಗುವಳ್ಳಿ ಗ್ರಾಮದ ವೇದಮೂರ್ತಿ ಗಂಗಾಧರಯ್ಯ ಶಾಸ್ತ್ರಿ ಎಂಬುವರ ಪುತ್ರ ನಂದೀಶ್(1.5) ಮೃತಪಟ್ಟ ಮಗುವಾಗಿದ್ದು, ಬುಧವಾರ ಬೆಳಿಗ್ಗೆ ಮನೆಯಲ್ಲಿ ಜ್ಯೂಸ್ ಬಾಟಲಿ ಹಿಡಿದುಕೊಂಡು ಮಗು ಆಟವಾಡುತ್ತಿತ್ತು. ಈ ವೇಳೆ ಆಕಸ್ಮಿಕವಾಗಿ ಮಗು ಬಾಟಲ್‌ನ ಮುಚ್ಚಳ ನುಂಗಿದ್ದು, ಮುಚ್ಚಳ ಗಂಟಲಲ್ಲಿ ಸಿಲುಕಿ ಮಗು ಒದ್ದಾಡಿದೆ. ಮಗು ಬಾಟಲ್‌ನ ಮುಚ್ಚಳ ನುಂಗಿದ ತಕ್ಷಣ ಮಗುವಿನ ಉಸಿರಾಟದಲ್ಲಿ ಏರುಪೇರು ಉಂಟಾಗಿದ್ದು, ತಕ್ಷಣವೇ ಕುಟುಂಬದವರು ವಾಹನವೊಂದರಲ್ಲಿ ಮಗುವನ್ನು ಆಸ್ಪತ್ರೆಗೆ ಕೊಂಡೊಯ್ದರೂ ಮಗು ಸಾವನ್ನಪ್ಪಿದೆ. ಸದ್ಯ ಪೋಷಕರ ಆಕ್ರಂದನ ಮುಗಿಲು ಮುಟ್ಟಿದೆ

# ಮನೆಗಳ್ಳತನಕ್ಕೆ ಇಳಿದ ಖೈದಿ



**ಆನೇಕಲ್:** ಪ್ರೇಯಸಿಯ ಜತೆ ಹೈಫೈ ಲೈಫ್ ಕಳೆಯಲು ಮನೆ ಕಳ್ಳತನಕ್ಕೆ ಇಳಿದಿದ್ದ ಪ್ರೇಮಿಯನ್ನು ಬಂಧಿಸಿದ್ದಾರೆ. ಹಾಡುಹಗಲೇ ಮನೆ ಕಳ್ಳತನ ಮಾಡುತ್ತಿದ್ದ ಆರೋಪಿಯನ್ನು ಜಿಗಣಿ ಪೊಲೀಸರು ಬಂಧಿಸಿದ್ದಾರೆ. ಆನೇಕಲ್ ತಾಲೂಕಿನ ವಾಬಸಂದ್ರದಲ್ಲಿ ಮನೆ ಕಳ್ಳತನವಾಗಿತ್ತು. ಆರೋಪಿಗಳ ಬಂಧನಕ್ಕೆ ಬಲೆ ಬೀಸಿದ್ದ ಪೊಲೀಸರು, ಸಿಸಿಟಿವಿ ದೃಶ್ಯ ಆಧರಿಸಿ ಆರೋಪಿಯನ್ನು ಹಿಡಿದಿದ್ದಾರೆ.

ಬಂಧಿತ ಆರೋಪಿಯಿಂದ 8 ಲಕ್ಷ ಮೌಲ್ಯದ ಚಿನ್ನ ಮತ್ತು ಬೆಳ್ಳಿಯನ್ನು ವಶಕ್ಕೆ ಪಡೆದಿದ್ದಾರೆ. ಜಿಗಣಿ ಸಿ.ಪಿ.ಐ ಮಂಜುನಾಥ್ ನೇತೃತ್ವದಲ್ಲಿ ತಂಡ ರಚನೆ ಮಾಡಿ ಲಕ್ಷ್ಮಣ್ ಅಲಿಯಾಸ್ ಗುನ್ನಿ ಎಂಬಾತನನ್ನು ಬಂಧಿಸಿದ್ದಾರೆ. ಸರ್ಜಾಪುರ ಸಮೀಪದ ಚಿಕ್ಕದಾಸರಹಳ್ಳಿಯ ಲಕ್ಷ್ಮಣ್ ವಿರುದ್ಧ ಈಗಾಗಲೇ ಬನ್ನೇರುಘಟ್ಟ ,ಜಿಗಣಿ, ಸರ್ಜಾಪುರ ಪೊಲೀಸ್ ಠಾಣೆಗಳಲ್ಲಿ ಕಳ್ಳತನ ಪ್ರಕರಣ ದಾಖಲಾಗಿದೆ. ಲಕ್ಷ್ಮಣನ್ನು ಬಂಧಿಸಿ ಚಿನ್ನಾಭರಣ ವಶಕ್ಕೆ ಪಡೆದಿದ್ದಾರೆ. ವಿಚಾರಣೆ ವೇಳೆ ಪ್ರೇಯಸಿ ಜತೆ ಲೈಫ್ ಎಂಜಾಯ್ ಮಾಡಲು ಕಳ್ಳತನ ಮಾಡುತ್ತಿದ್ದೆ ಎಂದು ಲಕ್ಷ್ಮಣ್ ಹೇಳಿಕೆ ನೀಡಿದ್ದಾನೆ. ಕದ್ದ ಚಿನ್ನ ಬೆಳ್ಳಿ ಮಾರಾಟ ಮಾಡಿ ಪ್ರೇಯಸಿಗೆ ಖರ್ಚು ಮಾಡುತ್ತಿದ್ದ. ತನಿಖೆಯ ವೇಳೆ ಪೊಲೀಸರ ಮುಂದೆ ಬಾಯಿಬಿಟ್ಟಿದ್ದಾನೆ. ಸದ್ಯ ಆರೋಪಿಯನ್ನು ಬಂಧಿಸಿ ಪೊಲೀಸರು ಜೈಲಿಗೆ ಅಟ್ಟಿದ್ದಾರೆ.

## ಗಣೇಶ ಮೂರ್ತಿ ವಿಸರ್ಜನೆಗೆ 462 ಸಂಚಾರಿ ಟ್ಯಾಂಕರ್

# 41 ಕೆರೆಗಳನ್ನು ಗುರುತಿಸಿದ ಬಿಬಿಎಂಪಿ

**ಬೆಂಗಳೂರು:** ಗಣೇಶ ಚತುರ್ಥಿ ಹಬ್ಬದ ಆಚರಣೆಗೆ ಬೆಂಗಳೂರು ನಗರ ಸಿದ್ಧವಾಗುತ್ತಿದ್ದು, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ (ಬಿಬಿಎಂಪಿ) ನಗರದಾದ್ಯಂತ ಗಣಪತಿ ಮೂರ್ತಿ ವಿಸರ್ಜನೆಗೆ ವ್ಯವಸ್ಥೆ ಮಾಡಿದೆ. ಬಿಬಿಎಂಪಿಯು ಬೆಂಗಳೂರಿನಾದ್ಯಂತ ಗಣಪತಿ ಮೂರ್ತಿ ವಿಸರ್ಜನೆಗೆ 462 ಸಂಚಾರಿ ಟ್ಯಾಂಕರ್‌ಗಳನ್ನು ಸಿದ್ಧಪಡಿಸಿದೆ.

ನಾಗರೀಕರು ಈ ಸೌಲಭ್ಯಗಳನ್ನು ಪಡೆದುಕೊಂಡು ಮೂರ್ತಿಗಳನ್ನು ಈ ಟ್ಯಾಂಕರ್‌ಗಳಲ್ಲಿ ವಿಸರ್ಜಿಸಬಹುದು. ಅಥವಾ ಗಣೇಶ ಮೂರ್ತಿ ವಿಸರ್ಜನೆಗೆ ಗುರುತಿಸಿರುವ ಹತ್ತಿರದ ಕಲ್ಯಾಣಿ ಅಥವಾ ಕೆರೆಗೆ ವಿಸರ್ಜನೆ ಮಾಡಬಹುದು ಎಂದು ಬಿಬಿಎಂಪಿ ತಿಳಿಸಿದೆ. ಈ ಉದ್ದೇಶಕ್ಕಾಗಿ ಸುಮಾರು 41 ಕೆರೆಗಳನ್ನು ಗುರುತಿಸಲಾಗಿದೆ ಮತ್ತು ಗಣೇಶ ಮೂರ್ತಿಗಳನ್ನು ವಿಸರ್ಜನೆ ಮಾಡಲು ತಾತ್ಕಾಲಿಕ ಕಲ್ಯಾಣಿಗಳನ್ನು ನಿರ್ಮಾಣ ಮಾಡಲಾಗಿದೆ. ಬೆಂಗಳೂರು ಪೂರ್ವ



ವಲಯದಲ್ಲಿ ಅತಿ ಹೆಚ್ಚು ಸಂಚಾರಿ ಟ್ಯಾಂಕರ್‌ಗಳ (138) ವ್ಯವಸ್ಥೆ ಮಾಡಲಾಗಿದೆ. ನಂತರ ಪಶ್ಚಿಮ ವಲಯದಲ್ಲಿ (84) ಹೆಚ್ಚಿನ ಟ್ಯಾಂಕರ್‌ಗಳ ವ್ಯವಸ್ಥೆ ಮಾಡಲಾಗಿದೆ. ಪುಟ 2

## ಪಾದಚಾರಿಗಳ ಮೇಲೆ ಹರಿದ ಬೈಕ್

# ನಾಲ್ವರು ಸಾವು

**ವಿಜಯಪುರ:** ಜಾತ್ರೆಗೆಂದು ಬಂದ ಯುವಕರು ಅಪಘಾತದಲ್ಲಿ ಸಾವನ್ನಪ್ಪಿದ ಘಟನೆ ನಡೆದಿದೆ. ಮೂತ್ರ ವಿಸರ್ಜನೆಗೆಂದು ರಸ್ತೆ ದಾಟುತ್ತಿದ್ದ ಯುವಕರ ಮೇಲೆ ಬೈಕ್ ಹರಿದು ಅಪಘಾತ ಸಂಭವಿಸಿದೆ.

ಜಿಲ್ಲೆಯ ಮುದ್ದೇಬಿಹಾಳ ತಾಲೂಕಿನ ಕುಂಟೋಜಿ ಗ್ರಾಮದ ಹೊರವಲಯದಲ್ಲಿ ಘಟನೆ ನಡೆದಿದೆ. ಅಪಘಾತದಲ್ಲಿ ಇಬ್ಬರು ಪಾದಚಾರಿಗಳು ಹಾಗೂ ಬೈಕ್ ಸವಾರರಿಬ್ಬರು ಸೇರಿ ಒಟ್ಟು ನಾಲ್ವರು ಯುವಕರ ಮೃತಪಟ್ಟಿದ್ದಾರೆ.

ಮೂವರಿಗೆ ಗಂಭೀರ ಗಾಯಗಳಾಗಿವೆ. ನಿನ್ನೆ ರಾತ್ರಿ 11 ಗಂಟೆಗೆ ಘಟನೆ ನಡೆದಿದೆ. ಸ್ಥಳದಲ್ಲಿ ಮೂವರು ಸಾವನ್ನಪ್ಪಿದ್ದು, ಇನ್ನೋರ್ವ ಆಸ್ಪತ್ರೆಯಲ್ಲಿ ಕೊನೆಯುಸಿರೆಳದಿದ್ದಾನೆ. ಅನಿಲ ಖೈನೂರ (23), ಚೌಡಕಿ (22), ಕುಮಾರ



ಪ್ಯಾಟಿ (18), ರಾಯಪ್ಪ ಬಾಗೇವಾಡಿ (24) ಮೃತ ದುರ್ದೈವಿಗಳಾಗಿದ್ದಾರೆ.

ಶಾಹಿದ ಹುನಗುಂದ, ಪ್ರಶಾಂತ ಕುರುಬಗೌಡರ, ಹನಮಂತ ಕರುಬಗೌಡರಗೆ ಗಂಭಿರ ಗಾಯಗಳಾಗಿದ್ದು, ಬಾಗಲಕೋಟೆ ಖಾಸಗಿ ಆಸ್ಪತ್ರೆಗೆ ದಾಖಲಾಗಿದ್ದಾರೆ. ಮುದ್ದೇಬಿಹಾಳ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

# ಶಿಕ್ಷಕರ ವೃತ್ತಿ ಸಾಮಾಜಿಕ ಜವಾಬ್ದಾರಿ: ಸಿದ್ದರಾಮಯ್ಯ

**ಬೆಂಗಳೂರು:** ರೈತರು, ಶಿಕ್ಷಕರು, ಸೈನಿಕರು ದೇಶದ ನಿರ್ಮಾತೃಗಳು. ದೇಶದ ಅಭಿವೃದ್ಧಿ ಮತ್ತು ವ್ಯಕ್ತಿತ್ವ ರೂಪಿಸುವವರು ಶಿಕ್ಷಕರು. ಈ ವೃತ್ತಿ ಸಾಮಾಜಿಕ ಜವಾಬ್ದಾರಿ ಎಂದು ಸಿಎಂ ಸಿದ್ದರಾಮಯ್ಯ ಹೇಳಿದರು.

ಸರ್ಕಾರದ ವತಿಯಿಂದ ವಿಧಾನಸೌಧದ ಬ್ಯಾಂಕ್ವೆಟ್ ಹಾಲ್‌ನಲ್ಲಿ ನಡೆದ ಶಿಕ್ಷಕರ ದಿನಾಚರಣೆ ಕಾರ್ಯಕ್ರಮದಲ್ಲಿ ರಾಜ್ಯಮಟ್ಟದ ಉತ್ತಮ ಶಿಕ್ಷಕ ಪ್ರಶಸ್ತಿ ಪ್ರದಾನ ಮಾಡಿ ಮಾತನಾಡಿದ ಸಿಎಂ, ಶಿಕ್ಷಕ ಜವಾಬ್ದಾರಿಗಳ ಬಗ್ಗೆ ತಿಳಿಸಿದರು.

ದೇಶದ ಎರಡನೇ ರಾಷ್ಟ್ರಾಧ್ಯಕ್ಷರಾಗಿದ್ದ ಡಾ ರಾಧಾಕೃಷ್ಣನ್ ಅವರು ಶ್ರೇಷ್ಠ ಶಿಕ್ಷಕರಾಗಲು ಸಾಧ್ಯವಾಗಿದೆ ಅಂದರೆ, ಇದೇ ಸಾಧ್ಯತೆ ಎಲ್ಲಾ ಶಿಕ್ಷಕರಿಗೂ ಇದ್ದೇ ಇರುತ್ತದೆ. ಹೀಗಾಗಿ ಪ್ರತಿಯೊಬ್ಬ ಶಿಕ್ಷಕರೂ ರಾಧಾಕೃಷ್ಣನ್ ಅವರ ಮಾರ್ಗದಲ್ಲಿ ನಡೆಯಲು ಪ್ರಯತ್ನಿಸಬೇಕು ಎಂದರು. ಪ್ರತಿಯೊಬ್ಬ ವಿದ್ಯಾರ್ಥಿಯ ವ್ಯಕ್ತಿತ್ವವನ್ನು ರೂಪಿಸುವ ಮೂಲಕ ದೇಶದ ವ್ಯಕ್ತಿತ್ವವನ್ನು ರೂಪಿಸುವವರು ನಮ್ಮ ಶಿಕ್ಷಕರು. ಇದು ಶಿಕ್ಷಕರ ಮೂಲಭೂತ ಜವಾಬ್ದಾರಿ. ಆಕಸ್ಮಿಕವಾಗಿ ಶಿಕ್ಷಕ ವೃತ್ತಿಗೆ ಬಂದವರಿಗಿಂತ ಶಿಕ್ಷಕ ವೃತ್ತಿಯನ್ನು ಆಯ್ಕೆ ಮಾಡಿಕೊಂಡವರೇ ಅತೀ ಹೆಚ್ಚಾಗಿದ್ದಾರೆ. ಹೀಗೆ ಈ ವೃತ್ತಿಯನ್ನು ಆಯ್ಕೆ ಮಾಡಿಕೊಂಡವರ ಬಗ್ಗೆ ನನಗೆ ಹೆಮ್ಮೆ ಅನ್ನಿಸುತ್ತದೆ ಎಂದರು.

ವಿದ್ಯಾರ್ಥಿಗಳು ಸ್ವತಂತ್ರವಾಗಿ ಯೋಚಿಸುವಂತೆ ರೂಪಿಸುವುದೇ ಶಿಕ್ಷಕರ ಜವಾಬ್ದಾರಿ. ವೈಜ್ಞಾನಿಕತೆ ಮತ್ತು ವೈಚಾರಿಕತೆಯನ್ನು ವಿದ್ಯಾರ್ಥಿಗಳು ಬೆಳೆಸಿಕೊಂಡರೆ ಮಾತ್ರ ಅವರಿಗೆ ಸಮಾಜ ಅರ್ಥ ಆಗುತ್ತದೆ. ಸಮಾಜದ ಸಮಸ್ಯೆಗಳಿಗೆ ಪರಿಹಾರ ರೂಪಿಸುತ್ತಾರೆ. ವಿಜ್ಞಾನ ಓದಿರುವ ವಿದ್ಯಾರ್ಥಿಗಳೂ ಮೌಢ್ಯಕ್ಕೆ ಜೋತು ಬೀಳುವುದು, ಜಾತಿ ತಾರತಮ್ಯ ಮಾಡುವುದಾದರೆ ಅವರಿಗೆ ಸಿಕ್ಕ ಶಿಕ್ಷಣಕ್ಕೆ ಅರ್ಥ ಇರುವುದಿಲ್ಲ.



ಆದ್ದರಿಂದ ವಿದ್ಯಾರ್ಥಿಗಳನ್ನು ವೈಚಾರಿಕವಾಗಿ ರೂಪಿಸುವ ಜವಾಬ್ದಾರಿ ಶಿಕ್ಷಣದ್ದಾಗಿದೆ ಎಂದರು.

ಎಲ್ಲರಿಗೂ ಶಿಕ್ಷಣ ದೊರಕದಂತೆ ತಡೆಯುತ್ತಿದ್ದ ಕಾಲ ಈಗ ಇಲ್ಲ. ಈಗ ಪ್ರತಿಯೊಬ್ಬರಿಗೂ ಶಿಕ್ಷಣ ಕಡ್ಡಾಯಗೊಳಿಸಲಾಗಿದೆ. ಜೊತೆಗೆ ಅತ್ಯುತ್ತಮ ವ್ಯಕ್ತಿತ್ವಗಳನ್ನು ರೂಪಿಸುವ ರೂವಾರಿಗಳು ನಮ್ಮ ಶಿಕ್ಷಕರು ಎಂದು ಮೆಚ್ಚುಗೆ ಸೂಚಿಸಿದರು.

ಮನುಷ್ಯ ಮನುಷ್ಯನನ್ನು ಪ್ರೀತಿಸುವ ಮಾನವೀಯ ಜವಾಬ್ದಾರಿಯನ್ನು ವಿದ್ಯಾರ್ಥಿಗಳಲ್ಲಿ ಬೆಳೆಸುವುದು ಶಿಕ್ಷಕರಿಂದ, ಶಿಕ್ಷಣದಿಂದ ಮಾತ್ರ ಸಾಧ್ಯ. 800 ವರ್ಷಗಳ ಹಿಂದೆಯೇ ಕರ್ಮ ಸಿದ್ಧಾಂತವನ್ನು ಬಸವಾದಿ ಶರಣರು ತಿರಸ್ಕರಿಸಿದ್ದರು. ಆದರೂ ಇವತ್ತಿನ ಶಿಕ್ಷಕರು ಹಣೆಬರಹ ಮುಂತಾದ ಕರ್ಮಸಿದ್ಧಾಂತವನ್ನು ನಂಬುತ್ತಾರೆ. ಇದು ಸರಿಯಲ್ಲ. ಸಾವಿತ್ರಿಬಾಯಿ ಫುಲೆ, ಸರ್ವಪಲ್ಲಿ ರಾಧಾಕೃಷ್ಣನ್ ಅವರ ಆದರ್ಶಗಳು ಇಡೀ ಶಿಕ್ಷಕ ಸಮುದಾಯಕ್ಕೆ ಮಾದರಿಯಾಗಲಿ ಎಂದರು.

ಕಾರ್ಯಕ್ರಮದಲ್ಲಿ 20 ಪ್ರಾಥಮಿಕ ಶಾಲಾ ಶಿಕ್ಷಕರು, ಪ್ರೌಢಶಾಲೆಯ 11 ಶಿಕ್ಷಕರು, ಪಿಯುಸಿ ವಿಭಾಗದಲ್ಲಿ ಒಬ್ಬ ಪ್ರಾಂಶುಪಾಲರು, 9 ಜನ ಉಪನ್ಯಾಸಕರಿಗೆ ಉತ್ತಮ ಶಿಕ್ಷಕ ಮತ್ತು ಉಪನ್ಯಾಸಕ ಪ್ರಶಸ್ತಿ ನೀಡಿ ಗೌರವಿಸಲಾಯಿತು. ಸಚಿವ ಮಧು ಬಂಗಾರಪ್ಪ, ಡಾ. ಸುಧಾಕರ್ ಸೇರಿ ಹಲವರು ಕಾರ್ಯಕ್ರಮದಲ್ಲಿ ಭಾಗಿಯಾಗಿದ್ದರು.

### ಶಿಕ್ಷಕರ ಸಮಸ್ಯೆಗೆ ಶೀಘ್ರವೇ ಪರಿಹಾರ

ಶಿಕ್ಷಕ ಸಂಘದ ಜೊತೆ ಚರ್ಚೆ ಮಾಡಿದ್ದೇವೆ. ಹಲವು ಸಮಸ್ಯೆ ಹೇಳಿದ್ದಾರೆ. ಸರ್ಕಾರಕ್ಕೆ ಸಮಸ್ಯೆಗಳ ಅರಿವಾಗಿದೆ. ಆದಷ್ಟು ಶೀಘ್ರವೇ ಶಿಕ್ಷಕರ ಸಮಸ್ಯೆ ಪರಿಹಾರ ಮಾಡುತ್ತೇವೆ ಎಂದು ಸಿಎಂ ಸಿದ್ದರಾಮಯ್ಯ ಭರವಸೆ ನೀಡಿದ್ದಾರೆ. ವಿಧಾನಸೌಧದ ಬ್ಯಾಂಕ್ವೆಟ್ ಹಾಲ್‌ನಲ್ಲಿ ನಡೆದ ಶಿಕ್ಷಕರ ದಿನಾಚರಣೆ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು. ಇದೇ ವೇಳೆ ತಮ್ಮ ಬಾಲ್ಯದ ನೆನಪು ಮಾಡಿಕೊಂಡ ಸಿಎಂ, ನನಗೆ ಶಿಕ್ಷಕರು ಕಂಡರೆ ಅಪಾರಗೌರವ ಇದೆ. ನನಗೆ ರಾಜಪ್ಪ ಮೇಷ್ಟ್ರು ಕಂಡರೆ ಇಷ್ಟ. ನಾನು 1 ರಿಂದ 4ನೇ ತರಗತಿ ಓದಿರಲಿಲ್ಲ. ರಾಜಪ್ಪ ಮೇಷ್ಟ್ರು ನನ್ನನ್ನು ನೇರವಾಗಿ 5ನೇ ತರಗತಿಗೆ ಸೇರಿಸಿದ್ರು. ಅಂತಹ ಶಿಕ್ಷಕರು ಇರಬೇಕು ಎಂದರು. ನಾನು ಹೈಸ್ಕೂಲ್‌ಗೆ ಹೋಗೋವರೆಗೂ ಚಪ್ಪಲಿ ಹಾಕಿರಲಿಲ್ಲ. ಬರೀ ಕಾಲಲ್ಲಿ ನಡೆದಿದ್ದೆ. ಇದಕ್ಕಾಗಿ ಸಿಎಂ ಆದ ಮೇಲೆ ಶೂ ಭಾಗ್ಯ ತಂದೆ. ನಮ್ಮ ಸರ್ಕಾರ ಬಂದ ಮೇಲೆ ವಿದ್ಯಾಸಿರಿ ಕಾರ್ಯಕ್ರಮ ಮಾಡಿದೆ. ನಮ್ಮ ಅಪ್ಪ ಹಾಸ್ಟೆಲ್‌ಗೆ ಸೇರಿಸಿರಲಿಲ್ಲ. ಸಂಬಂಧಿಕರ ಮನೆಯಲ್ಲಿ ಓದುತ್ತಿದ್ದೆ. ನನ್ನ ಅನುಭವದಿಂದ ವಿದ್ಯಾಸಿರಿ ಯೋಜನೆ ಜಾರಿ ಮಾಡಿದೆ. ನಾನು ಇಲ್ಲಿಯವರೆಗೆ ಬರಲು ಶಿಕ್ಷಣ ಕಾರಣ ಮತ್ತು ರಾಜಪ್ಪ ಮೇಷ್ಟ್ರು ಕಾರಣ. ಶಿಕ್ಷಣ ಬಹಳ ಮಹತ್ವದ್ದು. ಶಿಕ್ಷಣ ಅತ್ಯಗತ್ಯ. ಅರಿವು ಮತ್ತು ಜ್ಞಾನ, ಸ್ವಾಭಿಮಾನ, ಜಾತ್ಯಾತೀತ ಭಾವ ಬಂದಾಗ ಮಾತ್ರ ಶಿಕ್ಷಣ ಪಡೆದಿದ್ದು ಸಾರ್ಥಕವಾಗುತ್ತದೆ ಎಂದು ತಿಳಿಸಿದರು.

## ಪಿಎಸ್‌ಐ ಪರಶುರಾಮ್ ಆತ್ಮಹತ್ಯೆ ಪ್ರಕರಣ ; ಸಿಬಿಐ ತನಿಖೆಗೆ ಆಗ್ರಹಿಸಿ ಪತ್ರ

**ನವದೆಹಲಿ:** ಪಿಎಸ್‌ಐ ಪರಶುರಾಮ್ ಆತ್ಮಹತ್ಯೆ ಪ್ರಕರಣವನ್ನು ಸಿಬಿಐ ತನಿಖೆಗೆ ನೀಡುವಂತೆ ಆಗ್ರಹಿಸಿ ಕೇಂದ್ರ ಸರ್ಕಾರಕ್ಕೆ ಸಚಿವೆ ಶೋಭಾ ಕರಂದ್ಲಾಜೆ ಪತ್ರ ಬರೆದಿದ್ದಾರೆ.

ಕೇಂದ್ರ ಸಚಿವರ ಪತ್ರದ ಬೆನ್ನಲ್ಲೇ ಕೇಂದ್ರ ಗೃಹ ಇಲಾಖೆ, ಕರ್ನಾಟಕದ ಮುಖ್ಯ ಕಾರ್ಯದರ್ಶಿಗೆ ಪತ್ರ ಬರೆದಿದೆ. ಪ್ರಕರಣವನ್ನು ಪರಿಶೀಲಿಸಿ, ಮಾಹಿತಿ ನೀಡುವಂತೆ ಸೂಚನೆ ನೀಡಿದೆ. ಈಚೆಗೆ ಯಾದಗಿರಿ ನಗರ ಪೊಲೀಸ್ ಠಾಣೆಯಲ್ಲಿ ಪಿಎಸ್‌ಐ ಪರಶುರಾಮ್ ಸಂಶಯಾಸ್ಪದ ರೀತಿಯಲ್ಲಿ ಸಾವನ್ನಪ್ಪಿದ್ದ ಪ್ರಕರಣ ರಾಜ್ಯಾದ್ಯಂತ ಸಂಚಲನ ಮೂಡಿಸಿತ್ತು. ಪ್ರಕರಣದಲ್ಲಿ ಶಾಸಕ ಚನ್ನಾರೆಡ್ಡಿ ಪಾಟೀಲ ಮತ್ತು ಅವರ ಪುತ್ರ ಪಂಪನಗೌಡ ಪುತ್ರನ ಹೆಸರು ಕೇಳಿಬಂದಿತ್ತು. ಶಾಸಕರ ರಾಜೀನಾಮೆ ಮತ್ತು ಇಬ್ಬರ ಬಂಧನಕ್ಕೆ ಆಗ್ರಹಿಸಿ ಜನರು ಪ್ರತಿಭಟಿಸಿದ್ದರು. ಪೊಲೀಸ್ ಅಧಿಕಾರಿ ಪರಶುರಾಮ್ ಸಾವಿನ ಪ್ರಕರಣದಲ್ಲಿ ಲಂಚ ಬೇಡಿಕೆ ಮತ್ತು ಅಧಿಕಾರಿಗೆ ಮಾನಸಿಕ ಕಿರುಕುಳದ ಆರೋಪವನ್ನು ಶಾಸಕ ಚನ್ನಾರೆಡ್ಡಿ ಹೊತ್ತಿದ್ದರು. ಅವರ ರಾಜೀನಾಮೆಗೆ ಆಗ್ರಹಿಸಿ ಯಾದಗಿರಿ ಜಿಲ್ಲೆಯಾದ್ಯಂತ ಪ್ರತಿಭಟನೆಗಳು ನಡೆದಿದ್ದವು.



## ಬಿಜೆಪಿ ಹಗರಣ ಚರ್ಚೆ, ಮಹದಾಯಿಗಾಗಿ ಸುಪ್ರೀಂ ಮೊರೆ

**ಬೆಂಗಳೂರು:** ಸಿಎಂ ಸಿದ್ದರಾಮಯ್ಯ ನೇತೃತ್ವದಲ್ಲಿ ನಡೆದ ಕ್ಯಾಬಿನೆಟ್ ಸಭೆಯಲ್ಲಿ ಬಿಜೆಪಿ ಸರ್ಕಾರದ ಅವಧಿಯ ಹಗರಣಗಳ ಗ್ಗೆ ಚರ್ಚೆ ನಡೆದಿದೆ. ಕೋವಿಡ್ ಮಧ್ಯಂತರ ವರದಿ ಬಗ್ಗೆ ಸಿದ್ದರಾಮಯ್ಯ ಅವರೇ ಪ್ರಸ್ತಾಪಿಸಿದ್ದು ಗಂಭೀರ ಚರ್ಚೆಯಾಗಿದೆ. ವರದಿ ಬಗ್ಗೆ ಹೆಚ್ಚಿನ ಅಧ್ಯಯನ ನಡೆಸಲು ಅಧಿಕಾರಿಗಳಿಗೆ ಸಿಎಂ ಸೂಚನೆ ನೀಡಿದ್ದಾರೆ. ಸಂಸದೀಯ ವ್ಯವಹಾರಗಳ ಸಚಿ ಎಚ್. ಕೆ.ಪಾಟೀಲ್ ಮಾತನಾಡಿ, ಕೆಲವು ಫೈಲ್ ಮಿಸ್ ಆಗಿರುವ ಬಗ್ಗೆ ವರದಿಯಲ್ಲಿ ಪ್ರಸ್ತಾಪ ಆಗಿದೆ. ಸಾರ್ವಜನಿಕ ಲೆಕ್ಕಪತ್ರ ಸಮಿತಿ ಕೊಟ್ಟ ವಿವರ ಸಹ ವರದಿಯಲ್ಲಿ ಬಂದಿದೆ. ಮುಖ್ಯ ಕಾರ್ಯದರ್ಶಿಗಳ ನೇತೃತ್ವದಲ್ಲಿ ಅಧಿಕಾರಿಗಳು ಈ ವರದಿ ಬಗ್ಗೆ ತಿಂಗಳ ಒಳಗಾಗಿ ವಿವರ ಕೊಡುತ್ತಾರೆ. ವಿವರವಾದ ವರದಿ ಬಂದ ನಂತರ ಕ್ರಮ ತೆಗೆದುಕೊಳ್ಳುತ್ತೇವೆ ಎಂದರು. ಮಹದಾಯಿ ಯೋಜನೆಗೆ ಅನುಮತಿಗೆ ವನ್ಯಜೀವಿಮಂಡಳಿ ಅನುಮೋದನೆ ನೀಡಿಲ್ಲ, ಆದರೆ ಗೋವಾದ ವಿದ್ಯುತ್ ಯೋಜನೆಗೆ ಅನುಮತಿ ನೀಡಲಾಗಿದೆ. ಈ ವಿಚಾರವನ್ನು ನಾವು ಸುಪ್ರೀಂಕೋರ್ಟ್‌ನಲ್ಲಿ ಪ್ರಶ್ನಿಸುತ್ತೇವೆ. ಸರ್ವಪಕ್ಷ ಸಭೆ ನಡೆಸಿ ಕೇಂದ್ರಕ್ಕೆ ನಿಯೋಗ ಕೊಂಡೊಯ್ಯಲು ನಿರ್ಧರಿಸಲಾಗಿದೆ ಎಂದು ತಿಳಿಸಿದರು. ಅನ್ನಭಾಗ್ಯ ಯೋಜನೆಯಲ್ಲಿ ಅರ್ಧ ಕೆಜಿ ತೊಗರಿ, ಎಣ್ಣೆ, ಸಕ್ಕರೆ ಕೊಡುವ ಫುಡ್‌ಕಿಟ್ ಪ್ರಸ್ತಾವನೆ ಕೈಬಿಟ್ಟಿದ್ದು, ಯಥಾಸ್ಥಿತಿ ಮುಂದುವರಿಯಲಿದೆ. ಚಾಮುಂಡೇಶ್ವರಿ ಅಭಿವೃದ್ಧಿ ಪ್ರಾಧಿಕಾರ ಸಭೆ ನಡೆಸಿ ನ್ಯಾಯಾಂಗ ಉಲ್ಲಂಘನೆ ಮಾಡಿಲ್ಲ ಅಂತ ಎಚ್.ಕೆ ಪಾಟೀಲ್ ವಿವರಿಸಿದರು.

### ಉತ್ತಮ ಶಿಕ್ಷಕ ಪ್ರಶಸ್ತಿಗೆ ತಡೆ ಪ್ರಕರಣ
## ಎಸ್‌ಡಿಪಿಐ ಕೇಳಿ ಸರ್ಕಾರ ನಡೀತಿದ್ಯಾ?

**ಬೆಂಗಳೂರು:** ಉತ್ತಮ ಶಿಕ್ಷಕರ ಆಯ್ಕೆ ವಿಚಾರದಲ್ಲಿ ಸರ್ಕಾರಕ್ಕೆ ದೂರು ಕೊಟ್ಟಿದ್ದು ಯಾರು? ಎಸ್ ಡಿಪಿಐನವರು ದೂರು ಕೊಟ್ಟಿದ್ದಾರೆ. ಎಸ್‌ಡಿಪಿಐ ಕೇಳಿ ಈ ಸರ್ಕಾರ ನಡೆಯುತ್ತಿದೆಯಾ ಎಂದು ವಿಧಾನ ಪರಿಷತ್ ಪ್ರತಿಪಕ್ಷ ನಾಯಕ ಛಲವಾದಿ ನಾರಾಯಣಸ್ವಾಮಿ ಪ್ರಶ್ನಿಸಿದ್ದಾರೆ.

ಮಲ್ಲೇಶ್ವರದ ಬಿಜೆಪಿ ರಾಜ್ಯ ಕಾರ್ಯಾಲಯ ಜಗನ್ನಾಥ ಭವನದಲ್ಲಿ ಇಂದು ಮಾಧ್ಯಮ ಪ್ರತಿನಿಧಿಗಳ ಜೊತೆ ಮಾತನಾಡಿದ ಅವರು, ಯಾರನ್ನೋ ಓಲೈಕೆ ಮಾಡುವ ಕಾರಣಕ್ಕೆ ಇವತ್ತು ಕುಂದಾಪುರ ಸರ್ಕಾರಿ ಕಾಲೇಜು ಪ್ರಾಂಶುಪಾಲ ರಾಮಕೃಷ್ಣರಿಗೆ ನೀಡಿದ್ದ ಉತ್ತಮ ಪ್ರಶಸ್ತಿ ತಡೆಹಿಡಿಯುವ ಕ್ರಮ ಕೈಗೊಂಡಿದ್ದು ಸರಿಯಲ್ಲ. ಶಾಲೆಗಳು ಪವಿತ್ರ ಸ್ಥಳಗಳು. ಮಕ್ಕಳ ಮನಸ್ಸಿನಲ್ಲಿ ಇಂಥ ಕುಚೋದ್ಯತನ ಹುಟ್ಟುಹಾಕುವ ಕೆಲಸ ಮಾಡಬಾರದು ಎಂದು ತಿಳಿಸಿದರು.

ಹನುಮಾನ್ ವಿಚಾರದಲ್ಲೂ ಎಸ್‌ಡಿಪಿಐ ದೂರು ನೀಡಿತ್ತು. ನೀವು ಆದೇಶ ಮಾಡಿಬಿಟ್ಟಿರಿ. ಆದೇಶ ಮಾಡಲು ನಿಮಗೆ ಅಧಿಕಾರ ಕೊಟ್ಟಿದ್ದು ಯಾರು? ಒಬ್ಬ ತಹಶೀಲ್ದಾರರಿಗೆ ಅದನ್ನು ಮಾಡಲು ಅಧಿಕಾರ ಇದೆಯೇ? ಮತ್ತೆ ಆದೇಶ ವಾಪಸ್ ಪಡೆದಿರಿ. ಅಲ್ಲಿ ಶಾಂತಿ ಕದಡುವ ವಾತಾವರಣ ಸೃಷ್ಟಿ ಆಗುತ್ತಿತ್ತು. ಜನ



ನಿಮಗೆ ಛೀಮಾರಿ ಹಾಕಲು ಪ್ರಾರಂಭಿಸಿದ್ದರು. ಅದಕ್ಕೆ ವಾಪಸ್ ಪಡೆದಿರಿ ಅಲ್ಲವೇ ಎಂದು ತಹಶೀಲ್ದಾರರನ್ನು ಸಸ್ಪೆಂಡ್ ಮಾಡಲು ಒತ್ತಾಯಿಸಿದರು.

ಇಂಥವೆಲ್ಲ ಮಾಡುತ್ತಿದ್ದರೆ ಈ ರಾಜ್ಯವನ್ನು ಕಾಪಾಡುವವರು ಯಾರು? ನಾವು ಇರಬಹುದು, ನೀವು ಇರಬಹುದು, ಯಾರೇ ಇರಬಹುದು, ಸ್ವಲ್ಪ ದಿನಕ್ಕೆ ಅಧಿಕಾರದಲ್ಲಿ ಇರುತ್ತೇವೆ. ಆದರೆ ಸಾಂವಿಧಾನಿಕ ವ್ಯವಸ್ಥೆ ಬಿಟ್ಟು ನೀವೇನೇ ಮಾಡಿದರೂ ಕೂಡ ಶಾಂತಿ ಕದಡುವ ವಾತಾವರಣ ಸೃಷ್ಟಿ ಆಗುತ್ತದೆ. ಅಂಥ ಕೆಲಸ ಮಾಡದಿರಿ ಎಂದು ಸಲಹೆ ನೀಡಿದರು.

## ದರ ಏರಿಕೆ ನಿಯಂತ್ರಿಸಲು ಕಡಿಮೆ ಬೆಲೆಗೆ ಈರುಳ್ಳಿ ಮಾರಾಟಕ್ಕೆ ಮುಂದಾದ ಕೇಂದ್ರ ಸರ್ಕಾರ

**ನವದೆಹಲಿ:** ಮಾರುಕಟ್ಟೆಯಲ್ಲಿ ಈರುಳ್ಳಿ ದರ ಏರಿಕೆ ಹಿನ್ನೆಲೆ ಇದೀಗ ಕೇಂದ್ರ ಸರ್ಕಾರ ಕಡಿಮೆ ದರದಲ್ಲಿ ಮಾರಾಟಕ್ಕೆ ಮುಂದಾಗಿದೆ.

ಗ್ರಾಹಕರ ಮೇಲಿನ ಹೊರೆ ಕಡಿಮೆ ಮಾಡಲು ಈರುಳ್ಳಿಯನ್ನು ವಾಹನಗಳ ಮೂಲಕ ಮಾರಾಟ ಮಾಡಲಾಗುವುದು ಎಂದು ಕೇಂದ್ರ ಆಹಾರ ಮತ್ತು ನಾಗರಿಕ ಸರಬರಾಜು ಸಚಿವ ಪ್ರಹ್ಲಾದ್ ಜೋಶಿ ಹೇಳಿದ್ದಾರೆ.

ದೆಹಲಿಯ ಕೃಷಿ ಭವನದಲ್ಲಿ ಈರುಳ್ಳಿ ಚಿಲ್ಲರೆ ಮಾರಾಟಕ್ಕೆ ಚಾಲನೆ ನೀಡಿ ಮಾತನಾಡಿದ ಅವರು, ರಾಷ್ಟ್ರೀಯ ಸಹಕಾರಿ ಗ್ರಾಹಕರ ಒಕ್ಕೂಟ ಚಿಲ್ಲರೆ ಅಂಗಡಿಗಳ ಮೂಲಕ ಈರುಳ್ಳಿಯನ್ನು ಕಡಿಮೆ ಬೆಲೆಗೆ ಮಾರಾಟ ಮಾಡಲಾಗುತ್ತದೆ. ಪ್ರತಿ ಕಿಲೋಗ್ರಾಂಗೆ 35 ರೂ. ಸಬ್ಸಿಡಿ ದರದಲ್ಲಿ ಈರುಳ್ಳಿಯನ್ನು ಮಾರಾಟ ಮಾಡಲಾಗುತ್ತದೆ ಎಂದು ತಿಳಿಸಿದರು. ಬೆಲೆ ಏರಿಕೆ ನಿಯಂತ್ರಣಕ್ಕಾಗಿ ಈ ಕಾರ್ಯಕ್ರಮವನ್ನು ನಿಯೋಜಿಸಲಾಗಿದೆ. ಈರುಳ್ಳಿ ಖರೀದಿ ಮಾಡಿ



ಸಂಗ್ರಹಿಸಿ, ಅದನ್ನು ಕಡಿಮೆ ಬೆಲೆಗೆ ಮಾರಾಟ ಮಾಡಲಾಗುತ್ತದೆ. ಗ್ರಾಹಕರಿಗೆ ಹೊರ ಕಡಿಮೆ ಮಾಡಲು ಕೆ.ಜಿಗೆ 35 ರೂ.ಯಂತೆ ದರ ಇಳಿಸಲಾಗಿದೆ ಎಂದು ಹೇಳಿದರು. ಕೃಷಿ ಭವನ, ಎನ್‌ಸಿಯುಐ ಸಂಕೀರ್ಣ, ರಾಜೀವ್ ಚೌಕ್ ಮೆಟ್ರೋ ನಿಲ್ದಾಣ, ಪಟೇಲ್ ಚೌಕ್ ಮೆಟ್ರೋ ನಿಲ್ದಾಣ, ಸಿಜಿಒ ಮತ್ತು ನೋಯ್ಡಾ ಮತ್ತು ಗಾಜಿಯಾಬಾದ್‌ನ ಕೆಲವು ಭಾಗಗಳು ಸೇರಿದಂತೆ 38 ಸ್ಥಳಗಳಲ್ಲಿ ಈರುಳ್ಳಿ ಮಾರಾಟ ವಾಹನಗಳ ಮೂಲಕ ಮಾರಾಟವನ್ನು ಕೈಗೊಳ್ಳಲಾಗುತ್ತದೆ ಎಂದು ಭರವಸೆ ನೀಡಿದ್ದಾರೆ.

**ಮೊದಲನೇ ಪುಟದಿಂದ...**

## ಹೆಚ್‌ಎಸ್‌ಆರ್‌ಪಿ ನಂಬರ್ ಪ್ಲೇಟ್ ಅಳವಡಿಸದಿದ್ದರೇ ಭಾರೀ ದಂಡ!

ಮಾಹಿತಿ ಪ್ರಕಾರ ಹೆಚ್‌ಎಸ್‌ಆರ್‌ಪಿ ನಂಬರ್ ಪ್ಲೇಟ್‌ಗಳನ್ನು ಅಳವಡಿಸಿಕೊಳ್ಳಲು ಹಲವು ಬಾರಿ ಗಡುವು ವಿಸ್ತರಿಸಿ ವಾಹನ ಮಾಲೀಕರಿಗೆ ಸಾರಿಗೆ ಇಲಾಖೆ ಅನುಕೂಲ ಮಾಡಿತ್ತು. 4 ಬಾರಿ ಗಡುವು ವಿಸ್ತರಿಸಿ ಕಾಲಾವಕಾಶ ಕೊಟ್ರೂ, ಹೆಚ್‌ಎಸ್‌ಆರ್‌ಪಿ ಅಳವಡಿಕೆಗೆ ವಾಹನ ಮಾಲೀಕರು ಮುಂದಾಗಿಲ್ಲ. 1 ಕೋಟಿ 70 ಲಕ್ಷ ಹಳೆ ವಾಹನಗಳಲ್ಲಿ ಕೇವಲ 50 ಲಕ್ಷ ಹಳೆ ವಾಹನಗಳಿಗೆ ಮಾತ್ರ ಹೆಚ್‌ಎಸ್‌ಆರ್‌ಪಿ ಅಳವಡಿಕೆ ಮಾಡಲಾಗಿದ್ದು, ಇನ್ನೂ ಕೂಡ 50%ಗೂ ಹೆಚ್ಚು ವಾಹನಗಳಿಗೆ ಹೆಚ್‌ಎಸ್‌ಆರ್‌ಪಿ ನಂಬರ್ ಪ್ಲೇಟ್ ಅಳವಡಿಕೆ ಮಾಡಿಲ್ಲ.

ಹೀಗಾಗಿ ಹೆಚ್‌ಎಸ್‌ಆರ್‌ಪಿ ನಂಬರ್ ಪ್ಲೇಟ್ ಅಳವಡಿಕೆಗೆ ಸಪ್ಟೆಂಬರ್ 15 ಕೊನೆಯ ದಿನವಾಗಿದ್ದು, ಕೇವಲ 10 ದಿನ ಬಾಕಿ ಇದ್ರೂ, 50% ವಾಹನಗಳಿಗೆ ಹೆಚ್‌ಎಸ್‌ಆರ್‌ಪಿಅಳವಡಿಕೆಯಾಗದ ಕಾರಣ, ಈ ಬಾರಿ ಗಡುವು ವಿಸ್ತರಿಸದೆ ಸಪ್ಟೆಂಬರ್ 16ರಿಂದ ಭಾರೀ ದಂಡ ವಿಧಿಸುವ ಸಾಧ್ಯತೆ ಇದೆ ಎಂದು ತಿಳಿದು ಬಂದಿದೆ. ಮೊದಲ ಬಾರಿಗೆ 500 ರುಪಾಯಿ, ಎರಡನೇ ಬಾರಿಗೆ ಒಂದು ಸಾವಿರ ರುಪಾಯಿ ದಂಡ ಹಾಕಲಾಗುತ್ತದೆ. ಕೊನೆಗೆ ಅಂದರೆ ಮೂರನೇ ಬಾರಿಗೆ ವಾಹನವನ್ನೇ ಸೀಜ್ ಮಾಡಲಾಗುತ್ತದೆ ಎಂದು ತಿಳಿದು ಬಂದಿದೆ.

## 41 ಕೆರೆಗಳನ್ನು ಗುರುತಿಸಿದ ಬಿಬಿಎಂಪಿ

**ಪೆಂಡಾಲ್‌ಗೆ ಅರ್ಜಿ ಸಲ್ಲಿಸಲು 63 ಏಕ ಗವಾಕ್ಷಿ ಕೇಂದ್ರಗಳ ಸ್ಥಾಪನೆ:** ಸಾರ್ವಜನಿಕ ಗಣೇಶೋತ್ಸವಗಳ ಆಯೋಜನೆಗೆ ಪೆಂಡಾಲ್ ಹಾಕಲು ಅನುಮತಿಗಾಗಿ ಅರ್ಜಿ ಸಲ್ಲಿಸಲು ಬೆಂಗಳೂರಿನಾದ್ಯಂತ 63 ಏಕ ಗವಾಕ್ಷಿ ಕೇಂದ್ರಗಳನ್ನು ತೆರೆಯಲಾಗಿದೆ ಎಂದು ಬಿಬಿಎಂಪಿ ತಿಳಿಸಿದೆ. ಗಣೇಶೋತ್ಸವಗಳ ಆಯೋಜಕರು ಈ ಕೇಂದ್ರಗಳ ಮೂಲಕ ಅನುಮತಿಗಾಗಿ ಅರ್ಜಿ ಸಲ್ಲಿಸಬಹುದು ಮತ್ತು ನಗರದಲ್ಲಿ ಗಣೇಶ ಮಂಟಪವನ್ನು ಸ್ಥಾಪಿಸಲು ಇದು ಕಡ್ಡಾಯವಾಗಿದೆ ಎಂದು ಬಿಬಿಎಂಪಿ ಹೇಳಿದೆ.

ಗಣೇಶೋತ್ಸವಗಳ ಆಯೋಜನೆಗೆ ಪೆಂಡಾಲ್ ಸ್ಥಾಪನೆಗೆ ಸಲ್ಲಿಕೆಯಾಗುವ ಅರ್ಜಿಗಳ ಪರಿಶೀಲನೆ ಸಂಬಂಧ ಬಿಬಿಎಂಪಿ ನೋಡಲ್ ಅಧಿಕಾರಿಗಳನ್ನು ನೇಮಿಸಿದೆ ಮತ್ತು ಪೆಂಡಾಲ್‌ಗಳು ಬರುವ ಪ್ರದೇಶವನ್ನು ಪರಿಶೀಲಿಸಲು ಪೊಲೀಸ್ ಮತ್ತು ಬೆಸ್ಕಾಂ ಅಧಿಕಾರಿಗಳೊಂದಿಗೆ ತಂಡವನ್ನು ರಚಿಸಿದೆ.

## ಸಿಟ್ಟಾದ ಸಿದ್ದರಾಮಯ್ಯ

ಅಧಿಕಾರಿಗಳು ಗೌರವಿಸುವಂತೆ ವರ್ತಿಸಿ: ಇಲಾಖೆ ಬಗ್ಗೆ ಮಾಹಿತಿ ಕೊರತೆ ಇದ್ದರೆ ಅದಕ್ಕೆ ಬೇಕಾದ ಸೂಕ್ತ ಮಾಹಿತಿ ಅಧಿಕಾರಿಗಳಿಂದ ತರಿಸಿಕೊಳ್ಳಿ. ಅದರ ಬದಲಾಗಿ ಅದೇ ಇಲಾಖೆಯ ಇನ್ನೋರ್ವ ಅಧಿಕಾರಿಗೆ 'ಸರ್ ಸರ್' ಎಂದರೆ ಹೇಗೆ? ಅಧಿಕಾರಿಗಳು ಸದಾ ಆ ಸ್ಥಾನಕ್ಕೆ ಗೌರವಿಸುವಂತೆ ನಿಮ್ಮ ವರ್ತನೆ ಸಹ ಇರಬೇಕು ಎಂದು ಸಿಎಂ ನಿರ್ದೇಶನ ನೀಡಿದರು.

ಕಡತವೊಂದರ ಮಾಹಿತಿ ನೀಡುವ ಸಂದರ್ಭದಲ್ಲಿ ಸಚಿವರೊಬ್ಬರು ಅಧಿಕಾರಿಗಳ ಹೆಸರಿನ ಜತೆ 'ಸರ್' ಸೇರಿಸಿ ಮಾತನಾಡಿದ್ದು ಇಷ್ಟಕ್ಕೆಲ್ಲ ಕಾರಣವಾಯಿತು.

## ಬಿಜೆಪಿಗೆ ಭಾರೀ ಮುಖಭಂಗ!

ಚಾಮರಾಜನಗರ ಜಿಲ್ಲೆಯ ಕೊಳ್ಳೇಗಾಲ ನಗರಸಭೆಯ ಒಟ್ಟು 31 ಸ್ಥಾನಗಳ ಪೈಕಿ ಬರೋಬ್ಬರಿ 13 ಸ್ಥಾನಗಳಲ್ಲಿ ಗೆಲುವು ಸಾಧಿಸಿದ್ದ ಬಿಜೆಪಿ ಬಹುಮತದ ಸಮೀಪಕ್ಕೆ ಬಂದು ನಿಂತಿತ್ತು. ಬಹುಮತ ಪಡೆಯುವಲ್ಲಿ ವಿಫಲವಾದರೂ ಕೂಡ ಅತೀ ಹೆಚ್ಚು ಸ್ಥಾನ ಪಡೆಯುವ ಮೂಲಕ ಅತೀ ದೊಡ್ಡ ಪಕ್ಷವಾಗಿ ಹೊರಹೊಮ್ಮಿತ್ತು. ಇನ್ನೂ ನಿನ್ನೆ ಕೊಳ್ಳೇಗಾಲ ನಗರಸಭೆ ಅಧ್ಯಕ್ಷ-ಉಪಾಧ್ಯಕ್ಷ ಸ್ಥಾನಕ್ಕೆ ಚುನಾವಣೆ ನಡೆದಿದಿದ್ದು, ಅಧಿಕಾರ ಹಿಡಿಯುವಲ್ಲಿ ಬಿಜೆಪಿ ವಿಫಲವಾಗಿದೆ. ಬಿಜೆಪಿಯ 13 ಮಂದಿ ಸದಸ್ಯರ ಪೈಕಿ 10 ಮಂದಿ ಕಾಂಗ್ರೆಸ್ ಗೆ ಬೆಂಬಲ ನೀಡುವ ಮೂಲಕ ಬಿಜೆಪಿಗೆ ಬಿಗ್ ಶಾಕ್ ನೀಡಿದ್ದಾರೆ.

ಒಟ್ಟು 31 ಸದಸ್ಯರ ಸಂಖ್ಯಾ ಬಲ

ಹೌದು, ಕೊಳ್ಳೇಗಾಲ ನಗರಸಭೆ ಒಟ್ಟು 31 ಸದಸ್ಯರ ಸಂಖ್ಯಾಬಲ ಹೊಂದಿದೆ. ಇದರಲ್ಲಿ ಬಿಜೆಪಿ 13 ಸದಸ್ಯರು, ಕಾಂಗ್ರೆಸ್‌ನ 12 ಸದಸ್ಯರು, ಬಿಎಸ್‌ಪಿ 2 ಹಾಗೂ 4 ಜನ ಪಕ್ಷೇತರರು ಗೆಲುವು ಸಾಧಿಸಿದ್ದರು. ಆದ್ರೆ 13 ಮಂದಿ ಸದಸ್ಯರ ಸಂಖ್ಯಾಬಲ ಹೊಂದಿದ್ದ ಬಿಜೆಪಿ ಅಧ್ಯಕ್ಷ-ಉಪಾಧ್ಯಕ್ಷರ ಚುನಾವಣೆಯಲ್ಲಿ ಸ್ಪರ್ಧೆಯನ್ನೇ ಮಾಡಲಿಲ್ಲ. ಮಾತ್ರವಲ್ಲ 10 ಮಂದಿ ಬಿಜೆಪಿ ಸದಸ್ಯರು ಕಾಂಗ್ರೆಸ್‌ಗೆ ಬೆಂಬಲ ಸೂಚಿಸುವ ಮೂಲಕ ಬಿಜೆಪಿಗೆ ಭಾರೀ ಮುಖಭಂಗ ಉಂಟು ಮಾಡಿದ್ದಾರೆ. ಕಾಂಗ್ರೆಸ್‌ನ 12 ಹಾಗೂ ಬಿಜೆಪಿಯ 10 ಮಂದಿ ಬೆಂಬಲದೊಂದಿಗೆ ಕೊಳ್ಳೇಗಾಲ ನಗರಸಭೆ ಅಧ್ಯಕ್ಷರಾಗಿ ಕಾಂಗ್ರೆಸ್‌ನ ರೇಖಾ ರಮೇಶ್, ಉಪಾಧ್ಯಕ್ಷರಾಗಿ ಎ.ಪಿ ಶಂಕರ್ ಅವಿರೋಧವಾಗಿ ಆಯ್ಕೆಯಾದರು.

ಸ್ಪರ್ಧೆ ಮಾಡದ ಬಿಜೆಪಿ: ಇನ್ನೂ 13 ಸ್ಥಾನಗಳಲ್ಲಿ ಗೆಲುವು ಸಾಧಿಸಿದ್ದರೂ ಕೂಡ ಬಿಜೆಪಿ ಅಧ್ಯಕ್ಷ ಹಾಗೂ ಉಪಾಧ್ಯಕ್ಷ ಸ್ಥಾನಕ್ಕೆ ಸ್ಪರ್ಧೆಯನ್ನೇ ಮಾಡದೆ ಹಿಂದೆ ಸರಿದಿರುವುದು ಭಾರೀ ಮುಖಭಂಗಕ್ಕೆ ಕಾರಣವಾಗಿದೆ.

### ಆದಾಯಕ್ಕಿಂತ ಅಧಿಕ ಆಸ್ತಿ ಗಳಿಕೆ
## ಡಿಕೆಶಿ ವಿರುದ್ಧ ಸುಪ್ರೀಂ ಮೆಟ್ಟಿಲೇರಿದ ಯತ್ನಾಳ್

**ನವದೆಹಲಿ:** ಆದಾಯಕ್ಕಿಂತ ಅಧಿಕ ಆಸ್ತಿ ಸಂಪಾದಿಸಿದ ಪ್ರಕರಣಕ್ಕೆ ಸಂಬಂಧಿಸಿದಂತೆ ಡಿಸಿಎಂ ಡಿಕೆ ಶಿವಕುಮಾರ್ ವಿರುದ್ಧ ಶಾಸಕ ಬಸನಗೌಡ ಪಾಟೀಲ್ ಯತ್ನಾಳ್ ಸುಪ್ರೀಂ ಕೋರ್ಟ್ ಮೆಟ್ಟಿಲೇರಿದ್ದಾರೆ. ಹೈಕೋರ್ಟ್ ಆದೇಶದ ಅನ್ವಯ ಸುಪ್ರೀಂ ಕೋರ್ಟ್‌ಗೆ ಮೇಲ್ಮನವಿ ಅರ್ಜಿ ಸಲ್ಲಿಸಿದ್ದಾರೆ.

ಡಿಕೆ ಶಿವಕುಮಾರ್ ವಿರುದ್ಧ ದಾಖಲಾಗಿದ್ದ ಆದಾಯಕ್ಕಿಂತ ಅಧಿಕ ಆಸ್ತಿ ಸಂಪಾದಿಸಿದ ಪ್ರಕರಣದ ತನಿಖೆಯನ್ನು ಸಿಬಿಐ ನಡೆಸುತ್ತಿತ್ತು. ಸಿಬಿಐಗೆ ನೀಡಿದ ತನಿಖೆಯನ್ನು ರಾಜ್ಯ ಸರ್ಕಾರ ಹಿಂಪಡೆದಿತ್ತು. ಸರ್ಕಾರದ ನಿರ್ಧಾರ ಪ್ರಶ್ನಿಸಿ ಸಿಬಿಐ ಮತ್ತು ಶಾಸಕ ಯತ್ನಾಳ್ ಹೈಕೋರ್ಟ್‌ಗೆ ಅರ್ಜಿ ಸಲ್ಲಿಸಿದ್ದರು.

ಪ್ರಕರಣದ ಅರ್ಜಿ ವಿಚಾರಣೆ ನಡೆಸಿದ್ದ ಹೈಕೋರ್ಟ್, ರಾಜ್ಯ ಸರ್ಕಾರ ಮತ್ತು ಸಿಬಿಐ ನಡುವಿನ ಪ್ರಕರಣವನ್ನು ಸುಪ್ರೀಂ ಕೋರ್ಟ್ ತೀರ್ಮಾನಿಸಲಿ. ಸುಪ್ರೀಂ ಕೋರ್ಟ್ ವಿಚಾರಣೆ ನಡೆಸಿದರೆ ಸೂಕ್ತ ಎಂದು ಹೈಕೋರ್ಟ್ ಪೀಠ ಅಭಿಪ್ರಾಯ ವ್ಯಕ್ತಪಡಿಸಿ ಎರಡು ಅರ್ಜಿಗಳನ್ನು ವಜಾ ಮಾಡಿತ್ತು. ಈ ಹಿನ್ನೆಲೆ ಸುಪ್ರೀಂಕೋರ್ಟ್‌ಗೆ ಯತ್ನಾಳ್ ಮೇಲ್ಮನವಿ ಅರ್ಜಿ ಸಲ್ಲಿಸಿದ್ದಾರೆ. ಬಸನಗೌಡ ಯತ್ನಾಳ್ ಅರ್ಜಿ ಸಲ್ಲಿಕೆಗೆ ಮುನ್ನವೇ ಡಿಸಿಎಂ ಡಿಕೆ ಶಿವಕುಮಾರ್ ಪ್ರಕರಣಕ್ಕೆ ಸಂಬಂಧಿಸಿದಂತೆ ಈಗಾಗಲೇ ಕೇವಿಯಟ್ ಸಲ್ಲಿಸಿದ್ದಾರೆ ಎಂದು ತಿಳಿದು ಬಂದಿದೆ. ಪ್ರಕರಣದಲ್ಲಿ ತಮ್ಮ ಅಭಿಪ್ರಾಯ ಕೇಳದೆ ಯಾವುದೇ ಆದೇಶ ನೀಡಬಾರದು ಎಂದು ಕೋರ್ಟ್‌ಗೆ ಮನವಿ ಮಾಡಿದ್ದಾರೆ ಎನ್ನಲಾಗಿದೆ.





### ಹೈಕೋರ್ಟ್ ಆದೇಶದ ವಿರುದ ಪಿಸಿಬಿ ಅರ್ಜಿ

ಚಿಂಚೋಳಿಯಲ್ಲಿರುವ ಶಾಸಕ ಬಸನಗೌಡ ಪಾಟೀಲ್ ಯತ್ನಾಳ್ ಒಡೆತನದ ಸಕ್ಕರೆ ಕಾರ್ಖಾನೆ ಪುನರಾರಂಭಕ್ಕೆ ಹೈಕೋರ್ಟ್ ಆದೇಶ ನೀಡಿದ ಹಿನ್ನೆಲೆ ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿ ಸುಪ್ರೀಂ ಕೋರ್ಟ್‌ಗೆ ಮೇಲ್ಮನವಿ ಸಲ್ಲಿಸಿದೆ. ನಿಯಮಗಳನ್ನು ಉಲ್ಲಂಘಿಸಿರುವ ಕಾರ್ಖಾನೆ ತೆರೆಯಲು ಅನುಮತಿ ನೀಡಬಾರದು ಎಂದು ಅದು ಅರ್ಜಿಯಲ್ಲಿ ಒತ್ತಾಯಿಸಿದೆ. ಪಿಸಿಬಿ ಅರ್ಜಿ ಸಲ್ಲಿಕೆ ಹಿನ್ನೆಲೆ ದೆಹಲಿಯಲ್ಲಿ ಬೀಡು ಬಿಟ್ಟಿರುವ ಯತ್ನಾಳ್ ಕಾನೂನು ಸಮರಕ್ಕೆ ತಯಾರಿ ನಡೆಸುತ್ತಿದ್ದಾರೆ.



## ನನ್ನನ್ನು, ದೇವೇಗೌಡರನ್ನು ಮುಗಿಸೋಕೆ ಯಾರಿಂದಲೂ ಆಗಲ್ಲ

**ಹಾಸನ:** ಕೆಲವರನ್ನು ನಾನೇ ಮೇವು ಹಾಕಿ ಸಾಕಿದ್ದೇನೆ, ಈಗ ಅವು ನನ್ನ ಮೇಲೆಯೇ ಕುಸ್ತಿ ಮಾಡ್ತಿದ್ದಾವೆ ಎಂದು ಮಾಜಿ ಸಚಿವ ಹೆಚ್. ಡಿ.ರೇವಣ್ಣ ಬೇಸರ ಹೊರಹಾಕಿದ್ದಾರೆ.

ಜಿಲ್ಲೆಯ ಹಾಲು ಒಕ್ಕೂಟ ವಾರ್ಷಿಕ ಮಹಾಸಭೆಯಲ್ಲಿ ಮಾತನಾಡಿದ ಅವರು, ನಾನು ಶಾಸಕನಾಗಿ 30 ವರ್ಷ ಆಯ್ತು. ನಾನು ಕೆಲಸ ಮಾಡಿದ್ದೀನಿ. ನನ್ನ ಮನೆ ಕೆಲಸ ಮಾಡಿಲ್ಲ. ಒಂದು ಕಾರು ತಗೋಳೋಕೆ ಆಗಿಲ್ಲ. ರೇವಣ್ಣ ಅವರನ್ನು ಮುಗಿಸುತ್ತೇವೆ ಎಂದಿದ್ದಾರೆ. ರೇವಣ್ಣ ಅವರನ್ನು, ದೇವೇಗೌಡರನ್ನು ಮುಗಿಸೋಕೆ ಯಾರಿಂದಲೂ ಆಗಲ್ಲ. 1500 ಸೊಸೈಟಿ ನಡೆಸುವುದು ಸುಲಭ ಅಲ್ಲ. ಕೆಲವರನ್ನು ನಾನೇ ಹದಿನೈದು, ಇಪ್ಪತ್ತು ವರ್ಷ ಮೇವು ಹಾಕಿ ಸಾಕಿದ್ದೆ. ಈಗ ಅವು ನನ್ನ ಮೇಲೆ ಕುಸ್ತಿ ಮಾಡ್ತಿದ್ದಾವೆ. ಎಲ್ಲಿ ಹೋಗ್ತಾರೆ ನನ್ ಕೈಗೆ ಸಿಗದೇ, ಕಾಯ್ತಾ ಇದ್ದೀನಿ. ಯಾವುದು ಏನ್ ಇವತ್ತಿಗೆ ಮುಗಿಯಲ್ಲ ಎಂದು ವಿರೋಧಿಗಳ ವಿರುದ್ಧ ಗುಡುಗಿದ್ದಾರೆ. ಏನೋ ಒಂದ್ ಕೇಸ್ ಹಾಕಿ ರೇವಣ್ಣನನ್ನ ಹೆದರಿಸುತ್ತೀನಿ ಅನ್ಕೊಂಡಿದ್ದೀರಾ? ನಾನೇನು ಹೆದರಿ



ಓಡಿ ಹೋಗೋದಿಲ್ಲ. ರೇವಣ್ಣ ಅವರನ್ನು, ದೇವೇಗೌಡರನ್ನು ಮುಗಿಸೋಕೆ ಯಾರಿಂದಲೂ ಆಗಲ್ಲ. ದೇವರೇ ಶಿಕ್ಷೆ ಕೊಡುವ ಕಾಲ ಬರುತ್ತದೆ. ಈಗಲೇ ಏನೂ ಹೇಳಲ್ಲ ನಾಲ್ಕೈದು ತಿಂಗಳು ಕಳೀಲಿ. ದೇವೇಗೌಡರಿಗೆ, ನನಗೆ, ಕುಮಾರಸ್ವಾಮಿಗೆ ಶಕ್ತಿ ಕೊಟ್ಟಿರುವ ಜಿಲ್ಲೆ ಇದು. ನನ್ನ ಆಸೆ ಈ ಜಿಲ್ಲೆಯನ್ನು ನಂಬರ್ ಒನ್ ಮಾಡಬೇಕು ಎನ್ನುವುದು ಎಂದಿದ್ದಾರೆ. ಇದೇ ವೇಳೆ ದೇವಗೌಡರ ಕುರಿತು ಮಾತನಾಡಿದ ಅವರು, ದೇವೇಗೌಡರು ಅಂದ್ರೆ ಒಂದು ಶಕ್ತಿ. ಅವರು ಇಲ್ಲಾ ಅಂದ್ರೆ ಯಾರು ಕೇಳುತ್ತಾರೆ. ಈ ವಯಸ್ಸಿನಲ್ಲಿ ಕಾಶ್ಮೀರಕ್ಕೆ ಹೋಗಿದ್ದರು. ಅಲ್ಲಿ ಅವರ ಕಾಲದಲ್ಲಿ ಮಾಡಿದ ಯೋಜನೆಯನ್ನು ನೋಡಿ ಬಂದಿದ್ದಾರೆ. ನಾವು ಇನ್ನು ಮೂರ್ನಾಲ್ಕು ವರ್ಷ ಹೋದರೆ ಮೂಲೇಲಿ ಕೂರ್ತ್ಕೋತೀವಿ ದೇವೇಗೌಡರಿಗೆ 92 ವರ್ಷವಾದರೂ ಓಡಾಡ್ತಾರೆ. ಅವರು ಕೇವಲ ಹತ್ತೂವರೆ ತಿಂಗಳಲ್ಲಿ ಇಡೀ ದೇಶಕ್ಕೆ ಮಾದರಿ ಕೆಲಸ ಮಾಡಿದ್ದಾರೆ. ಸಮಯ ಬಂದಾಗ ವಿಧಾನಸಭೆಯಲ್ಲಿ ಎಳೆ ಎಳೆಯಾಗಿ ಬಿಡಿಸಿ ಹೇಳ್ತೇನೆ ಎಂದು ಸಿಡಿದಿದ್ದಾರೆ.

## ಅಕ್ರಮ ಗಾಂಜಾ ವಶ : ಆರೋಪಿ ಬಂಧನ

**ಚಾಮರಾಜನಗರ:** ಕೊಳ್ಳೇಗಾಲ ಗ್ರಾಮಾಂತರ ಪೊಲೀಸ್ ಠಾಣೆ ಸರಹದ್ದು ವ್ಯಾಪ್ತಿಯ ಸತ್ತೇಗಾಲ-ಜಾಗೇರಿಯ ಹಳೇಕೋಟೆ ಗ್ರಾಮದಲ್ಲಿ ಬೆಳೆಯಲಾಗಿದ್ದ 430 ಗ್ರಾಂ ತೂಕದ ಗಾಂಜಾ ಗಿಡವನ್ನು ಪೊಲೀಸರು ವಶಕ್ಕೆ ಪಡೆದು ಓರ್ವ ಆರೋಪಿಯನ್ನು ಬಂಧಿಸಿದ್ದಾರೆ. ಪೂಮಲೈ ಬಿನ್ ಪೆರಿಯಾನ್ ಗೌಂಡರ್ ಬಂಧಿತ ಆರೋಪಿ. ಕೊಳ್ಳೇಗಾಲ ಗ್ರಾಮಾಂತರ ಪೊಲೀಸ್ ಠಾಣೆಯ ಆರಕ್ಷಕ ಉಪನಿರೀಕ್ಷಕರಾದ ಎ.ಎಸ್. ಸುಪ್ರೀತ್ ಅವರು ತಮಗೆ ದೊರೆತ ಮಾಹಿತಿ ಮೇರೆಗೆ ಸೆಪ್ಟೆಂಬರ್ 2ರಂದು ಸಂಜೆ 5.45 ಗಂಟೆಯಲ್ಲಿ ಸಿಬ್ಬಂದಿಯೊಡನೆ ಮತ್ತು ಪಾಳ್ಯ ಸರ್ಕಾರಿ ಆಸ್ಪತ್ರೆಯ ವೈದ್ಯಾಧಿಕಾರಿ ಡಾ. ಗೌತಮ್ ಅವರೊಂದಿಗೆ ದಾಳಿ ನಡೆಸಿ ಪೂಮಲೈ ಅವರ ವಾಸದ ಮನೆಯ ಪಕ್ಕದಲ್ಲಿರುವ ಜಮೀನಿನಲ್ಲಿ ಮಾದಕ ವಸ್ತು ಗಾಂಜಾ (ಕೆನಬಿಸ್) ಗಿಡ ಬೆಳೆದಿರುವುದನ್ನು ಪತ್ತೆ ಹಚ್ಚಿ ವಶಕ್ಕೆ ಪಡೆದುಕೊಂಡರು. ಆರೋಪಿಯನ್ನು ವಶಕ್ಕೆ ಪಡೆದು ಪ್ರಕರಣ ದಾಖಲಿಸಿ ನ್ಯಾಯಾಂಗ ಬಂಧನಕ್ಕೆ ಒಪ್ಪಿಸಲಾಗಿದೆ ಎಂದು ಪೊಲೀಸ್ ಇಲಾಖೆ ಪ್ರಕಟಣೆ ತಿಳಿಸಿದೆ.

## ನೃತ್ಯ ನುಕುಂಜ್ ಸಂಸ್ಥೆಯ 8ನೇ ವಾರ್ಷಿಕೋತ್ಸವ



**ಬೆಂಗಳೂರು:** ನೃತ್ಯ ನೂಕುಂಜ್ ಕಥಕ್ ನೃತ್ಯ ಸಂಸ್ಥೆಯ 8ನೇ ವರ್ಷಾಚರಣೆ ಹಿನ್ನಲೆ ಅಭಿವ್ಯಕ್ತಿ ಭಾವರಂಗ ವಿಶೇಷವಾಗಿ ಕಥಕ್ ನೃತ್ಯ ಮಾಡುವ ಮೂಲಕ ವಾರ್ಷಿಕೋತ್ಸವ ಆಚರಣೆ ಮಾಡಲಾಯಿತು, ಕಥಕ್ ನೃತ್ಯ ಉಳಿಸಿ ಬೆಳೆಸುವ ನಿಟ್ಟಿನಲ್ಲಿ ಸಂಸ್ಥೆ ನಿರಂತರವಾಗಿ ಕಾರ್ಯಕ್ರಮಗಳನ್ನು ಮಾಡಿಕೊಂಡು ಬರಲಾಗುತ್ತಿದೆ ಎಂದು ಐಸಿಸಿಆರ್‌ನ ವಿಭಾಗಿಯ ನಿರ್ದೇಶಕರಾದ ಪ್ರದೀಪ್ ಕುಮಾರ್ ತಿಳಿಸಿದರು.

ಬೆಂಗಳೂರಿನ ಜಯನಗರದ ಯುವಪತ ಸಭಾಂಗಣದಲ್ಲಿ ವೇದಾಂಗ ಫೌಂಡೇಶನ್ ಹಾಗು ನೃತ್ಯ ನುಕುಂಜ್ ಸಂಸ್ಥೆಯ 8ನೇ ವರ್ಷದ ವಾರ್ಷಿಕೋತ್ಸವ ಸಮಾರಂಭದಲ್ಲಿ ಅಥಿತಿಯಾಗಿ ಹಾಗೂ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದ ಅವರು, 8 ವರ್ಷಗಳ ಕಾಲ ದಕ್ಷಿಣ ಭಾರತದಲ್ಲಿ ಕಥಕ್ ನೃತ್ಯ ಉಳಿಸುವ ನಿಟ್ಟಿನಲ್ಲಿ ಸಂಸ್ಥೆ ಹಾಗು ರುಮ ಶಿಲ್ ಅವರು ಸಾಕಷ್ಟು ಶ್ರಮಿಸಿದ್ದಾರೆ, ಅವರ ಸಂಸ್ಥೆಯಲ್ಲಿ ಕಲಿಯುತ್ತಿರುವ ಮಕ್ಕಳು ಸಹ ಅಷ್ಟೇ ಶಿಸ್ತುಬದ್ಧವಾಗಿ ಅಭ್ಯಾಸದಲ್ಲಿ ತೊಡಗಿರುವುದು ಹೆಗ್ಗಳಿಕೆ ಸರಿ.

ದಕ್ಷಿಣ ಭಾರತದಲ್ಲಿ ಕಥಕ್ ಬೆಳೆಸುವ ಗುರಿ : ಪ್ರಸ್ತುತ ದಕ್ಷಿಣ ಭಾರತದಲ್ಲಿ ಹೆಚ್ಚು ಜನಪ್ರಿಯತೆ ಕಥಕ್ ನೃತ್ಯಕ್ಕೆ ಇಲ್ಲ, ಹೀಗಾಗಿ ಅದನ್ನು ಕಲಾವಿದರಿಗೆ, ಮಕ್ಕಳಿಗೆ ತಿಳಿಸುವ ನಿಟ್ಟಿನಲ್ಲಿ ಪ್ರತ್ಯೇಕವಾಗಿ ಕಥಕ್ ನೃತ್ಯ ಕಲಿಸುವ ಕೆಲಸ ಮಾಡುತ್ತಿರುವುದು ಹೆಮ್ಮೆಯ ಸಂಗತಿ, ಅವರ ಸಂಸ್ಥೆ ಇನ್ನು ದೊಡ್ಡ ದೊಡ್ಡ ಕಾರ್ಯಕ್ರಮಗಳನ್ನು ಮಾಡುವ ಹಲವು ಪ್ರತಿಭೆಗಳನ್ನು ಹುಟ್ಟುಹಾಕಲಿ ಎಂದು ಆಶಿಸಿದರು.

ಇನ್ನು ಕಾರ್ಯಕ್ರಮಕ್ಕೆ ಅಥಿತಿಯಾಗಿ ಆಗಮಿಸಿದ್ದ ಜಿಐಐಸಿಯ ಪ್ರಾಚಾರ್ಯರಾದ ಬಿಂದು ರಾಜೇಶ್ ಮಾತನಾಡಿ, ಕಥಕ್ ನೃತ್ಯವನ್ನು 53 ಮಕ್ಕಳಿಗೆ ಹೇಳಿಕೊಡುತ್ತಿರುವುದು ಬಹುದೊಡ್ಡ ಕೆಲಸ, ಅದರ ಜೊತೆಗೆ ಸಂಸ್ಥೆಯ 8ನೇ ವರ್ಷದ ಆಚರಣೆಯಲ್ಲಿ ಮಕ್ಕಳ ಜೊತೆಗೆ ಮಕ್ಕಳ ತಾಯಂದಿರು ವೇದಿಕೆ ಮೇಲೆ ನೃತ್ಯ ಮಾಡಿದ್ದು ವಿಶೇಷವಾಗಿತ್ತು, ನಿರಂತರವಾಗಿ ಸಂಸ್ಥೆಯಲ್ಲಿ ಹತ್ತು ಹಲವು ಕಾರ್ಯಕ್ರಮಗಳನ್ನು ಮಾಡಿಕೊಂಡು ಬರುತ್ತಿರುವುದು ಕುಶಿಯ ಸಂಗತಿ ಎಂದರು.

ಮಕ್ಕಳು ಅವರ ತಾಯಂದಿರು ವೇದಿಕೆ ಮೇಲೆ ತರಹೇವಾರಿ ಕಥಕ್ ಗೆ ನೃತ್ಯ ಮಾಡಿದರು. ಈ ಭಾರಿ ಮಕ್ಕಳ ಜೊತೆಯಲ್ಲಿ ಅಮ್ಮಂದಿರು ಸ್ಟೆಪ್ ಹಾಕಿದರು. ನೃತ್ಯ ಕಾರ್ಯದಲ್ಲಿ ವಾದ್ಯಗೋಷ್ಠಿ ತಂಡ ಬಹಳ ಮುಖ್ಯ ಅದರಲ್ಲಿ ತಬಲದಲ್ಲಿ ಅಜಯ್ ಕುಮಾರ್ ಸಿಂಗ್, ಸಿತಾರ್ ನಲ್ಲಿ ವಿಜಯ್ ಗೋನಹಾಲ್ ಹಾಗೂ ವೋಕಲ್‌ನಲ್ಲಿ ಶ್ರೇಯ ಸಿಂಗ್ ಖಡಕ್ ವಾದ್ಯ ನುಡಿಸುವ ಮೂಲಕ ನೃತ್ಯಕ್ಕೆ ಮತ್ತಷ್ಟು ಮೆರಗು ತಂದರು. ಕಾರ್ಯಕ್ರಮದಲ್ಲಿ ಕರ್ನಾಟಕ ಸಂಗೀತ ನೃತ್ಯ ಅಕಾಡೆಮಿ ಮುಖ್ಯಸ್ಥರಾದ ಗುರು ಶುಭ ಧನಂಜಯ್ ಉಪಸ್ಥಿತರಿದ್ದರು.

# ಹುಳಿಯಾರು ಪಪಂ ಗದ್ದುಗೆ ಏರಲು ಮಹಿಳಾ ಸದಸ್ಯೆಯರ ಮಧ್ಯೆ ಪೈಪೋಟಿ

**ಹುಳಿಯಾರು:** ಹುಳಿಯಾರು ಪಟ್ಟಣ ಪಂಚಾಯ್ತಿ ಅಧ್ಯಕ್ಷ-ಉಪಾಧ್ಯಕ್ಷರ ಆಯ್ಕೆಗೆ ಸೆ.13 ರಂದು ಚುನಾವಣೆ ಘೋಷಣೆಯಾಗಿದೆ. ಅಧ್ಯಕ್ಷ ಸ್ಥಾನವು ಮಹಿಳೆಗೆ ಹಾಗೂ ಉಪಾಧ್ಯಕ್ಷ ಸ್ಥಾನವು ಬಿಸಿಎಂ ಎ ಮಹಿಳೆಗೆ ಮೀಸಲಾಗಿದೆ. ಹಾಗಾಗಿ ಮಹಿಳಾ ಸದಸ್ಯೆಯರ ನಡುವೆಯೇ ಗದ್ದುಗೆ ಏರಲು ಪೈಪೋಟಿ ಉಂಟಾಗಿ ರಾಜಕೀಯ ಚಟುವಟಿಕೆಗಳು ಚುರುಕುಗೊಂಡಿವೆ.

ಕಾಂಗ್ರೆಸ್ ಪಕ್ಷದಿಂದ ಜಯಗಳಿಸಿದವರೆಲ್ಲರೂ ಪುರುಷರಾಗಿರುವುದರಿಂದ ಅಧ್ಯಕ್ಷ ಸ್ಥಾನಕ್ಕೆ ಸ್ಪರ್ಧಿಸುವ ಅವಕಾಶವನ್ನೇ ಕಾಂಗ್ರೆಸ್ ಕಳೆದುಕೊಂಡಿದೆ. ಆದರೂ ಯಾವ ಪಕ್ಷಕ್ಕೂ ಸ್ಪಷ್ಟ ಬಹುಮತ ಇಲ್ಲದಾಗಿರುವುದರಿಂದ ಕಾಂಗ್ರೆಸ್ ಸದಸ್ಯರು ಕಿಂಗ್ ಮೇಕರ್‌ಗಳಾಗಿದ್ದಾರೆ. ಅಲ್ಲದೆ ಬಿಜೆಪಿ ಮತ್ತು ಜೆಡಿಎಸ್ ಎರಡೂ ಪಕ್ಷದವರು ಕಾಂಗ್ರೆಸ್ ಮೈತ್ರಿಗೆ ಕಸರತ್ತು ಮಾಡುತ್ತಿರುವುದರಿಂದ ಕಾಂಗ್ರೆಸ್ ಸದಸ್ಯರಿಗೆ ಭಾರಿ ಡಿಮ್ಯಾಂಡ್ ಸೃಷ್ಠಿಯಾಗಿದ್ದು ಕುದುರೆ ವ್ಯಾಪಾರ ಎಷ್ಟಕ್ಕೆ ಹೋಗಿ ನಿಲ್ಲುತ್ತದೋ ಹೇಳುವುದಸಾಧ್ಯ ಎನ್ನಲಾಗಿದೆ.

16 ಸಂಖ್ಯಾ ಬಲವುಳ್ಳ ಹುಳಿಯಾರು ಪಟ್ಟಣ ಪಂಚಾಯ್ತಿಯಲ್ಲಿ ಬಿಜೆಪಿಯ ಆರು ಸದಸ್ಯರು, ಕಾಂಗ್ರೆಸ್‌ನ ಐದು ಸದಸ್ಯರು, ಜೆಡಿಎಸ್‌ನ ಮೂವರು ಸದಸ್ಯರು ಹಾಗೂ ಪಕ್ಷೇತರರು ಇಬ್ಬರು ಇದ್ದಾರೆ. ಬಿಜೆಪಿಯಲ್ಲಿನ ಮೂವರು ಮಹಿಳಾ ಸದಸ್ಯರಿದ್ದು ಜೆಡಿಎಸ್‌ನಲ್ಲಿ ಇಬ್ಬರು ಮಹಿಳಾ ಸದಸ್ಯರಿದ್ದು, ಪಕ್ಷೇತರರು ಒಬ್ಬ ಮಹಿಳಾ ಸದಸ್ಯರಿದ್ದು ಈ ಆರು ಮಂದಿಯೂ ಅಧ್ಯಕ್ಷೆ ಸ್ಥಾನದ ಮೇಲೆ ಕಣ್ಣಿಟ್ಟಿದ್ದಾರೆ. ಹಾಗಾಗಿಯೇ ಪುರುಷ ಸದಸ್ಯರ ಮನವೊಲಿಸಲು ಮಹಿಳಾ ಸದಸ್ಯರ ಪತಿ ತೆರೆಮರೆಯ ಕಸರತ್ತು ಮಾಡುತ್ತಿದ್ದಾರೆ. ನಿಕಟಪೂರ್ವ ಅಧ್ಯಕ್ಷ ಕೆಎಂಎಲ್ ಕಿರಣ್ ಅವರು ತಮ್ಮ ಪತ್ನಿ ಸಂಧ್ಯಾ ಅವರನ್ನು ಅಧ್ಯಕ್ಷೆಯನ್ನಾಗಿ ಮಾಡಿದರೆ ಹುಳಿಯಾರು ಪಪಂ ಇತಿಹಾಸದಲ್ಲೇ ಪತಿಪತ್ನಿ ಇಬ್ಬರೂ ಅಧ್ಯಕ್ಷರಾದ ದಾಖಲೆ ನಿರ್ಮಿಸಬಹುದೆಂದು ಪ್ರಭಲ ಆಕಾಂಕ್ಷಿಯಾಗಿ ಓಡಾಡುತ್ತಿದ್ದಾರೆ. ಕಾಂಗ್ರೆಸ್ ಸದಸ್ಯರಿಂದಲೇ ಸಂಧ್ಯಾ ಅವರನ್ನು ಅಭ್ಯರ್ಥಿಯನ್ನಾಗಿ ಮಾಡಿದರೆ ಮತ ಹಾಕುವುದಾಗಿ ಮಾಜಿ ಸಚಿವ ಜೆ.ಸಿ.ಮಾಧುಸ್ವಾಮಿ ಅವರಿಗೆ ದೂರವಾಣಿ ಕರೆ ಮಾಡಿಸುತ್ತಿದ್ದಾರೆ. ಇನ್ನು ಬೀಬೀ ಪಾತೀಮಾ ಅವರು ಅಲ್ಪಸಂಖ್ಯಾತರನ್ನು ಗದ್ದುಗೆಗೆ ಏರಿಸಿ ಬಿಜೆಪಿ ಅಲ್ಪಸಂಖ್ಯಾತರ ವಿರೋಧಿಯಲ್ಲ ಎಂಬ ಸಂದೇಶ ರವಾನಿಸಿ ಎನ್ನುತ್ತಿದ್ದಾರೆ.

ಇದರ ನಡುವೆ ಬಿಜೆಪಿ ಸದಸ್ಯೆ ರತ್ನಮ್ಮ ಹಾಗೂ ಬಿಜೆಪಿ ಜೊತೆ ಗುರುತಿಸಿಕೊಂಡಿರುವ ಪಕ್ಷೇತರ ಸದಸ್ಯೆ ಶೃತಿ ಕೂಡ ನಮಗೇ ಅವಕಾಶ ಕೊಡಿ ಎಂದು ದುಂಬಾಲು ಬಿದ್ದಿದ್ದಾರೆ. ಪರಿಣಾಮ ಪಪಂ ಅಧ್ಯಕ್ಷ ಉಪಾಧ್ಯಕ್ಷರ ಅಭ್ಯರ್ಥಿ ಆಯ್ಕೆಗಾಗಿ ನಡೆದ ಮೂರ್‍ನಾಲ್ಕು ಸಭೆಯಲ್ಲೂ ಒಮ್ಮತದ ಅಭ್ಯರ್ಥಿ ಆಯ್ಕೆ ಮಾಡುವಲ್ಲಿ ಸದನ ಶೂರ ಮಾಜಿ ಸಚಿವ ಜೆ.ಸಿ.ಮಾಧುಸ್ವಾಮಿ ಅವರು ವಿಫಲರಾಗಿದ್ದಾರೆ.

ಇನ್ನು ಜೆಡಿಎಸ್‌ನಲ್ಲಿ ಮೂವರು ಸದಸ್ಯರಿದ್ದು ಇವರಲ್ಲಿ ಕಾವ್ಯರಾಣಿ ಮತ್ತು ಪ್ರೀತಿ ಇಬ್ಬರು ಮಹಿಳಾ ಸದಸ್ಯರಿದ್ದು ಇಬ್ಬರೂ ಗಾಧಿ ಹಿಡಿಯಲು ಉತ್ಸುಕರಾಗಿದ್ದಾರೆ. ಆದರೆ ಶಾಸಕರ ಮತವೂ ಸೇರಿದರೆ ಕೇವಲ 4 ಮಂದಿ ಸಂಖ್ಯಾ ಬಲವಾಗುತ್ತದೆ. ಹಾಗಾಗಿ ಕಾಂಗ್ರೆಸ್ ಅಥವಾ ಬಿಜೆಪಿಯೊಂದಿಗೆ ಮೈತ್ರಿ ಮಾಡಿಕೊಳ್ಳುವುದು ಇವರಿಗೆ ಅನಿವಾರ್ಯ. ಕಳೆದ ಬಾರಿ ಕಾಂಗ್ರೆಸ್ ಜೊತೆ ಮೈತ್ರಿ ಮಾಡಿಕೊಂಡು ಚುನಾವಣೆ ಎದುರಿಸಿದರಾದರೂ ಕಾಂಗ್ರೆಸ್‌ನ ಸದಸ್ಯರೊಬ್ಬರು ಕೈ ಕೊಟ್ಟಿದ್ದರಿಂದ ಬಿಜೆಪಿ ಅಭ್ಯರ್ಥಿ ಗೆಲ್ಲುವಂತಾಗಿತ್ತು. ಹಾಗಾಗಿ ರಾಜ್ಯದಲ್ಲಿರುವಂತೆ ಇಲ್ಲಿಯೂ ಸಹ ಬಿಜೆಪಿ ಜೆಡಿಎಸ್ ಮೈತ್ರಿ ಮಾಡಿಕೊಂಡು ಅಧಿಕಾರವನ್ನು ಎರಡೂ ಪಕ್ಷದವರೂ ಸಮನಾಗಿ ಹಂಚಿಕೊಂಡರೆ ಒಳಿತು ಎನ್ನುವ ಅಭಿಪ್ರಾಯ ವ್ಯಕ್ತವಾಗಿದೆ. ಇದರಿಂದ ಕುದುರೆ ವ್ಯಾಪಾರ ತಪ್ಪಿಸಿ ಪ್ರಾಮಾಣಿಕವಾಗಿ ಊರಿನ ಅಭಿವೃದ್ಧಿ ಮಾಡಬಹುದು ಎಂಬ ಸಬೂಬು ಸಹ ಹೇಳುತ್ತಿದ್ದಾರೆ. ಆದರೆ ಬಿಜೆಪಿ ಜೆಡಿಎಸ್ ಜೊತೆ ಮೈತ್ರಿ ಮಾತುಕತೆ ನಡೆಸುವವರಾರು ಎಂಬ ಪ್ರಶ್ನೆಗೆ ಇದುವರೆವಿಗೂ ಉತ್ತರ ಸಿಕ್ಕಿಲ್ಲ. ಹಾಗಾಗಿಯೇ ಕಾಂಗ್ರೆಸ್ ಸದಸ್ಯರ ಸಂಪರ್ಕ ಕಡಿತಗೊಳಿಸದೆ ಉಳಿಸಿಕೊಂಡಿದ್ದಾರೆ. ಒಟ್ಟಿನಲ್ಲಿ ಎರಡೂ ಪಕ್ಷದಲ್ಲೂ ಅಭ್ಯರ್ಥಿಯ ಹೆಸರು ಅಂತಿಮಗೊಂಡ ನಂತರ ಕಣ ಮತ್ತೊಷ್ಟು ರಂಗೇರುತ್ತದೆ. ಹಾಗಾಗಿಯೇ ಸದಸ್ಯರೆಲ್ಲರೂ ಪ್ರವಾಸಭಾಗ್ಯಕ್ಕಾಗಿ ಎದರು ನೋಡುತ್ತಿದ್ದು ಲಗೇಜ್ ರೆಡಿ ಮಾಡಿಕೊಂಡು ಕಾಯುತ್ತಿದ್ದಾರೆ.

### ನಾಯಕರು ಮುನಿಸು ಬಿಟ್ಟು ಮಾತನಾಡಲಿ

**ಕಾಂಗ್ರೆಸ್, ಬಿಜೆಪಿ, ಜೆಡಿಎಸ್ ಮೂರು ಪಕ್ಷದ ಮುಖಂಡರು ಒಬ್ಬರಿಗೊಬ್ಬರು ಮಾತನಾಡದಿರುವುದು ಪ್ರತಿ ಚುನಾವಣೆಯಲ್ಲೂ ಕುದುರೆ ವ್ಯಾಪಾರ ನಡೆಯಲು ಕಾರಣ ಎನ್ನಲಾಗಿದೆ. 3 ಪಕ್ಷದ ಮುಖಂಡರು ಮೈತ್ರಿಯ ಬಗ್ಗೆ ಮಾತನಾಡಿ ತಮ್ಮ ಅಭ್ಯರ್ಥಿ ಕಣಕ್ಕಿಳಿಸಿದರೆ ನಯಾಪೈಸೆ ಖರ್ಚಿಲ್ಲದೆ ಗದ್ದುಗೆ ಏರಬಹುದು. ಆದರೆ ಹುಳಿಯಾರು ಪಂಚಾಯ್ತಿ ಚುನಾವಣೆ ಎಂದರೆ ಹಣದ ಹೊಳೆ ಹರಿಸಬೇಕಿದೆ. ಇದರಿಂದ ಪ್ರಾಮಾಣಿಕವಾಗಿ ಕೆಲಸ ಮಾಡುವವರಿಗೆ ಅಧಿಕಾರ ತಪ್ಪಿ ಹಣವಂತರ ಪಾಲಾಗುತ್ತಿದೆ. ಇದರಿಂದ ಊರಿನ ಅಭಿವೃದ್ಧಿ ಮರಿಚಿಕೆಯಾಗುತ್ತಿದೆ. ಊರಿನ ಅಭಿವೃದ್ಧಿಯ ದೃಷ್ಟಿಯಿಂದಾದರೂ ಪಕ್ಷಗಳ ನಾಯಕರು ಮೈತ್ರಿ ಬಗ್ಗೆ ಮಾತುಕತೆ ನಡೆಸಲಿ ಎಂಬುದು ಸಾರ್ವಜನಿಕರ ಅಭಿಪ್ರಾಯವಾಗಿದೆ.**

# ಪತ್ರಿಕಾ ವಿತರಕರಿಗೆ ಅಭಿನಂದನಾ ಕಾರ್ಯಕ್ರಮ

**ವಿಜಯಪುರ:** ಪಟ್ಟಣದ ಶಾಂತಿನಗರದಲ್ಲಿ ಬುಧವಾರ ಪತ್ರಿಕಾ ವಿತರಕರ ದಿನಾಚರಣೆಯ ಅಂಗವಾಗಿ ವಿತರಕರಿಗೆ ಅಭಿನಂದನಾ ಕಾರ್ಯಕ್ರಮ ಆಯೋಜನೆ ಮಾಡಲಾಗಿತ್ತು. ಈ ವೇಳೆ ಮೂರು ತಲೆಮಾರುಗಳಿಂದ ಪತ್ರಿಕೆ ವಿತರಣೆ ಮಾಡುತ್ತಿರುವ ಎಸ್. ಮಂಜುನಾಥ್ ಅವರೊಂದಿಗೆ ಪುರಸಭೆ ಮುಖ್ಯಾಧಿಕಾರಿ ಜಿ.ಆರ್.ಸಂತೋಷ್ ಅವರು ಪತ್ರಿಕಾ ವಿತರಕರನ್ನು ಸನ್ಮಾನಿಸಿದರು.

ಈ ವೇಳೆ ಮಾತನಾಡಿದ ಅವರು, ಪತ್ರಿಕೆಗಳು ನೈಜವಾದ ವಿಚಾರಗಳ ಮೂಲಕ ಜನರನ್ನು ಜಾಗೃತಗೊಳಿಸುವಂತಹ ಕಾರ್ಯವನ್ನು ಮಾಡಿಕೊಂಡು ಬರುತ್ತಿವೆ. ಸ್ವಾತಂತ್ರ್ಯಕ್ಕಾಗಿ ನಡೆಯುತ್ತಿದ್ದ ಚಳುವಳಿಗಳಲ್ಲೂ ಪತ್ರಿಕೆಗಳ ಪಾತ್ರ ಮಹತ್ತರವಾಗಿದ್ದು, ಮುದ್ರಣಗೊಂಡ ಪತ್ರಿಕೆಗಳನ್ನು ಜನರ ಬಳಿಗೆ ತಲುಪಿಸುವಂತಹ ಕಷ್ಟದ ಕೆಲಸವನ್ನು ವಿತರಕರು ಮಾಡುವ ಮೂಲಕ ಓದುಗರನ್ನು ಕಾಪಾಡಿಕೊಂಡು ಬರುತ್ತಿದ್ದಾರೆ. ಸರ್ಕಾರದಿಂದ ಸಿಗುವಂತಹ ಎಲ್ಲಾ ಸೌಲಭ್ಯಗಳನ್ನು ಅವರಿಗೆ ತಲುಪಿಸುವಂತಹ ಕಾರ್ಯವನ್ನು ಪ್ರಾಮಾಣಿಕವಾಗಿ ಮಾಡಲಾಗುತ್ತದೆ. ಪಿ.ಎಂ.ಸ್ವನಿಧಿ ಯೋಜನೆಯಡಿ ಸಾಲ ಸೌಲಭ್ಯ ಕಲ್ಪಿಸಲು ಕ್ರಮ ಕೈಗೊಳ್ಳಲಾಗುತ್ತದೆ ಎಂದರು.

ಜೇಸಿಐ ಅಧ್ಯಕ್ಷ ಬೈರೇಗೌಡ ಮಾತನಾಡಿ, ಹಲವಾರು ಕಾಯಕಗಳಲ್ಲಿ ಪತ್ರಿಕೆ ವಿತರಣೆ ಮಾಡುವ ಕೆಲಸ ಬಹಳ ಕಷ್ಟದ ಕೆಲಸವಾಗಿದೆ. ಪ್ರತಿನಿತ್ಯವೂ ಮಾಡಬೇಕಾದ ಕೆಲಸವಾಗಿದೆ. ಜನರನ್ನು ಜಾಗೃತರನ್ನಾಗಿ ಮಾಡುವಲ್ಲಿ, ವಿಷಯಗಳನ್ನು ವಿನಿಮಯ ಮಾಡುವಲ್ಲಿ ವಿತರಕರ ಪಾತ್ರ ಅಮೋಘವಾಗಿದ್ದು, ಅವರನ್ನು ಗುರ್ತಿಸಿ, ಅವರ ಕುಟುಂಬಗಳನ್ನು ಮುಖ್ಯವಾಹಿನಿಗೆ ತರುವ ಕೆಲಸವನ್ನು ಮಾಡಬೇಕಾಗಿದೆ ಎಂದರು.

ಟೌನ್ ಕಾಂಗ್ರೆಸ್ ಪ್ರಧಾನ ಕಾರ್ಯದರ್ಶಿ ಎಸ್.ಮಂಜುನಾಥ್ ಮಾತನಾಡಿ, ಸರ್ಕಾರ, ಪತ್ರಿಕಾ ವಿತರಕರನ್ನು ವಾರಿಯರ್ಸ್ ಎಂದು ಗುರ್ತಿಸಿದೆಯಾದರೂ ಬಹಳಷ್ಟು ಮಂದಿ ವಿತರಕರು ಬಾಡಿಗೆ ಮನೆಗಳಲ್ಲಿದ್ದಾರೆ. ಅವರ ಮಕ್ಕಳ ಶೈಕ್ಷಣಿಕ ಜೀವನ ಪ್ರೌಢಶಾಲೆಗೆ ಸೀಮಿತವಾಗಿದೆ. ಇಂತಹವರನ್ನು ಗುರ್ತಿಸಿ ಅವರಿಗೆ ವಿಶೇಷ ಪ್ರಾತಿನಿಧ್ಯ ನೀಡಬೇಕು. ಸ್ಥಳೀಯ ಆಡಳಿತ ಸಂಸ್ಥೆಗಳಲ್ಲಿ ತಯಾರಾಗುವ ಬಜೆಟ್‌ನಲ್ಲಿ ವಿತರಕರಿಗಾಗಿ ವಿಶೇಷವಾಗಿ ಅನುದಾನ ಮೀಸಲಿಟ್ಟು ಅವರಿಗೆ ಸಹಕಾರ ನೀಡಬೇಕು ಎಂದರು.

ಜೇಸಿಐ ಮಾಜಿ ಅಧ್ಯಕ್ಷ ಎನ್.ಸಿ.ಮುನಿವೆಂಕಟರಮಣಪ್ಪ, ಪುರಸಭೆ ಎಂಜಿನಿಯರ್ ಶೇಖರ್, ಹಿರಿಯ ಪತ್ರಿಕಾ ವಿತರಕ ಕೆ.ಮುನಿರಾಜು, ವೆಂಕಟರಮಣಪ್ಪ, ಜನಾರ್ಧನ್, ಭಾಸ್ಕರ್ ಬಾಬು ಇದ್ದರು.



# ಗುರುಗಳ ಗುಲಾಮನಾಗಿ ಕ್ಷೇತ್ರದ ಕೆಲಸ



**ಬೇಲೂರು:** ನಾನು ಕ್ಷೇತ್ರದ ಶಾಸಕನಾಗಿದ್ದರೂ ಇದಕ್ಕೆ ಕಾರಣರಾದ ನನ್ನ ಗುರುವಿನ ಸ್ಮರಣೆಗಾಗಿ ನಾನು ಕ್ಷೇತ್ರದ ಗುರುಗಳ ಗುಲಾಮನಾಗಿ ಕ್ಷೇತ್ರದ ಕೆಲಸ ಮಾಡುತ್ತೇನೆಂದು ಶಾಸಕ ಹೆಚ್.ಕೆ.ಸುರೇಶ್ ಹೇಳಿದರು.

ಇಲ್ಲಿನ ವೀರಶೈವ ಕಲ್ಯಾಣ ಮಂಟಪದಲ್ಲಿ ತಾಲ್ಲೂಕು ಆಡಳಿತ, ತಾ.ಪಂಚಾಯಿತಿ, ಪುರಸಭೆ, ಶಾಲಾ ಶಿಕ್ಷಣ ಇಲಾಖೆಯಿಂದ ಏರ್ಪಡಿಸಿದ್ದ ಡಾ.ಸರ್ವಪಲ್ಲಿ ರಾಧಾಕೃಷ್ಣನ್ ಅವರ ಜನ್ಮ ದಿನ ಹಾಗೂ ಶಿಕ್ಷಕರ ದಿನಾಚರಣೆ ಉದ್ಘಾಟಿಸಿ ಮಾತನಾಡಿ, ಜನಪ್ರತಿನಿಧಿಯಾದವನು ಎಲ್ಲರೊಳಗೊಬ್ಬನಾಗಿ ಸೇವೆ ಮಾಡಿದರೆ ಸಾರ್ಥಕವಾಗಲಿದೆ. ಆಶೀರ್ವದಿಸುವ ದೇವರು, ಜನ್ಮ ನೀಡಿದ ತಾಯಿ, ಜಾತಿ, ಧರ್ಮ ಬೇಧ ಇಲ್ಲದೆ ತಿದ್ದಿತೀಡಿ ಶಿಕ್ಷಣ ನೀಡುವ ಗುರುಗಳು ಇವರ ಮೇಲ್ಪಂಕ್ತಿಯಲ್ಲಿದ್ದಾರೆ ಎಂದರು.

ಶಿಕ್ಷಕರಿಗೆ 7 ನೇ ವೇತನ ನೀಡಬೇಕು, ಬಿಸಿಯೂಟ ನೌಕರರನ್ನು ಕಾಯಂಗೊಳಿಸಬೇಕೆಂಬ ಬಗ್ಗೆ ಸದನದಲ್ಲಿ ಪ್ರಸ್ತಾಪಿಸಲಾಗುತ್ತಿದೆ, ಗುರುಭವನ ನಿರ್ಮಾಣವನ್ನು ಹಳೇಬೀಡುಬೇಲೂರು ಪ್ರಾಧಿಕಾರ ಅಧ್ಯಕ್ಷ ಸಯ್ಯದ್‌ತೌಫಿಕ್, ಪುರಸಭೆ ಅಧ್ಯಕ್ಷ ಅಶೋಕ್ ಸಹಕಾರದೊಂದಿಗೆ ನಿರ್ಮಿಸಲಾಗುವುದು, ಸೂರು ಇಲ್ಲದ ಶಿಕ್ಷಕರು, ಪೌರಕಾರ್ಮಿಕರಿಗೆ ಸೂರು ಒದಗಿಸಲಾಗುವುದು ಎಂದು ಹೇಳಿದರು. ಸಂಸ್ಕೃತಿ ಚಿಂತಕರಾದ ಚಿಕ್ಕಮಗಳೂರಿನ ನಾಗಶ್ರೀತ್ಯಾಗರಾಜ್ ಮಾತನಾಡಿ, ಕುವೆಂಪು ಅವರ ಆಶಯದಂತೆ ಆದರ್ಶ ವ್ಯಕ್ತಿಗಳ ಜಯಂತಿ ಆಚರಣೆಯಾಗುತ್ತಿದ್ದರೂ ಇತ್ತೀಚಿನ ವರ್ಷದಲ್ಲಿ ಸಮುದಾಯಕ್ಕೆ ಮೀಸಲಾಗಿ ಆಚರಣೆ ಆಗುತ್ತಿರುವುದು ದೌರ್ಭಾಗ್ಯ. ಶಿಕ್ಷಕರನ್ನು ಉತ್ತಮ ರೀತಿಯಲ್ಲಿ ನಡೆಸಿಕೊಂಡರೆ ಸಮಾಜಕ್ಕೆ ಒಳಿತು. ಗುರುಗಳಿಗೆ ಜ್ಞಾನವಾತ್ಸಲ್ಯ, ವಿದ್ಯಾರ್ಥಿಗಳಿಗೆ ಜ್ಞಾನಪಿಪಾಸು ಇರಬೇಕು. ಶಾಸಕ ಸುರೇಶ್ ಅವರಂತೆ ಬಾಗಿ ನಡೆಯುವ ಮನೋಧರ್ಮ ಇರಬೇಕೆಂದರು.

ಭಾರತ ಹಾಗೂ ರಷ್ಯಾ ದೇಶದ ಪ್ರಧಾನಿ ಸ್ಟಾಲೀನ್ ನಡುವೆ ಹಳಸಿದ್ದ ಸಂಬಂಧವನ್ನು ಒಂದುಗೂಡಿಸಿದ ಕೀರ್ತಿ ಶಿಕ್ಷಕರಾಗಿ ಡಾ.ರಾಧಾಕೃಷ್ಣನ್ ಅವರು ಎಂದು ಸ್ಮರಿಸಿದರು. ಪ್ರಾಸ್ಥವಿಕವಾಗಿ ಬಿಇಒ ರಾಜೇಗೌಡ ಮಾಹಿತಿ ನೀಡಿದರು. ನಿವೃತ್ತ ಪ್ರಾಥಮಿಕ ಶಾಲೆ, ಪ್ರೌಢಶಾಲೆ ಶಿಕ್ಷಕರಿಗೆ ಹಾಗೂ ಪದವಿಪೂರ್ವ ಕಾಲೇಜು ಉಪನ್ಯಾಸಕರನ್ನು ಗೌರವಿಸಲಾಯಿತು. ಹತ್ತನೆ ಹಾಗೂ ಪಿಯು ತರಗತಿಯಲ್ಲಿಸಾಧನೆ ಮಾಡಿದ ಶಿಕ್ಷಕ ಮಕ್ಕಳನ್ನು ಪುರಸ್ಕರಿಸಲಾಯಿತು. ವಿವಿಧ ಆಟೋಟ ಸ್ಪರ್ಧೆಗಳಲ್ಲಿ ವಿಜೇತರಾದವರಿಗೆ ಬಹುಮಾನ ವಿತರಿಸಲಾಯಿತು.

ಗುರುಭವನ ನಿರ್ಮಾಣಕ್ಕೆ ಪ್ರಾಧಿಕಾರದಿಂದ ಸಿಎ ನಿವೇಶನ ನೀಡುವುದಾಗಿ ಪ್ರಾಧಿಕಾರದ ಅಧ್ಯಕ್ಷ ಸಯ್ಯದ್‌ತೌಫಿಕ್ ಭರವಸೆ ನೀಡಿದರು, ಪಟ್ಟಣದ ಜೂನಿಯರ್ ಕಾಲೇಜು ಹಿಂಭಾಗದಲ್ಲಿರುವ ಗುಡಿಸಲು ನಿವಾಸಿಗಳಿಗೆ ಶಾಸಕರ ಸಹಕಾರದಿಂದ 1 ತಿಂಗಳೊಳಗೆ ರಾಯಾಪುರ ಬಳಿ ನಿವೇಶನ ನೀಡಲಾಗುವುದು, ಗುರುಭವನಕ್ಕೆ ಸಹಕರಿಸಲಾಗುವುದು ಎಂದು ಪುರಸಭಾ ಅಧ್ಯಕ್ಷ ಎ.ಆರ್.ಅಶೋಕ್ ತಿಳಿಸಿದರು. ನಾಡಗೀತೆ, ರೈತಗೀತೆ ಹಾಡಲಾಯಿತು. ಡಾ.ರಾಧಾಕೃಷ್ಣನ್ ಭಾವಚಿತ್ರಕ್ಕೆ ಪುಷ್ಪಾರ್ಚನೆ ಮಾಡಲಾಯಿತು.

ಸರಕಾರಿ ನೌಕರರ ಸಂಘದ ಅಧ್ಯಕ್ಷ ಆರ್. ಮಂಜುನಾಥ್, ಪದವಿಪೂರ್ವ ಕಾಲೇಜು ಉಪನ್ಯಾಸಕರ ಸಂಘದ ಅಧ್ಯಕ್ಷ ಎಸ್.ಗಣೇಶ್, ಪ್ರೌಢಶಾಲಾ ಮುಖ್ಯೋಪಾಧ್ಯಾಯರ ಸಂಘದ ಅಧ್ಯಕ್ಷ ಜೆ.ವೆಂಕಟೇಶ್, ಪ್ರೌಢಶಾಲಾ ಸಹ ಶಿಕ್ಷಕರ ಸಂಘದ ಅಧ್ಯಕ್ಷ ಹೆಚ್.ಎಸ್.ಹೇಮಂತಕುಮಾರ್, ಪ್ರಾ.ಶಾ.ಶಿ. ಸಂಘದ ಅಧ್ಯಕ್ಷ ಎಸ್.ಜಿ.ಪಾಲಾಕ್ಷ, ಸ.ನೌ.ಸಂ.ಮಾಜಿ ಅಧ್ಯಕ್ಷ ಲೋಕೇಗೌಡ, ಪತ್ರಕರ್ತರ ಸಂಘದ ಅಧ್ಯಕ್ಷೆ ಭಾರತಿಗೌಡ, ಕಸಾಪ ಅಧ್ಯಕ್ಷ ಮಂಜೇಗೌಡ, ಕ್ಷೇತ್ರ ಸಮನ್ವಯಾಧಿಕಾರಿ ಶಿವಮರಿಯಪ್ಪ, ಅಕ್ಷರ ದಾಸೋಹ ಸಹಾಯಕ ನಿರ್ದೇಶಕ ಧನಂಜೇಯ ಇದ್ದರು.

# ಪಡಿತರ ಚೀಟಿ ಮಾನದಂಡ ಸಡಿಲಗೊಳಿಸಿ

**ಹುಳಿಯಾರು:** ಹೊಸ ಪಡಿತರ ಚೀಟಿ ನೀಡುವ ನಿಯಮ ಸರಳೀಕರಣಗೊಳಿಸಬೇಕು ಹಾಗೂ ನೈಜ ಫಲಾನುಭವಿಗಳಿಗೆ ಹೊಸ ಪಡಿತರ ಚೀಟಿಗಳನ್ನು ವಿತರಣೆ ಮಾಡಬೇಕು ಎಂದು ತಾಲೂಕು ಪಂಚಾಯ್ತಿ ಮಾಜಿ ಅಧ್ಯಕ್ಷ ಕೆಂಕೆರೆ ನವೀನ್ ಒತ್ತಾಯಿಸಿದ್ದಾರೆ.

ಈ ಸಂಬಂಧ ಪತ್ರಿಕಾ ಹೇಳಿಕೆ ನೀಡಿರುವ ಅವರು ಗ್ಯಾರಂಟಿ ಯೋಜನೆಯ ಸೌಲಭ್ಯ ಪಡೆದುಕೊಳ್ಳಲು ಲಕ್ಷಾಂತರ ಜನ ಅರ್ಜಿ ಸಲ್ಲಿಕೆ ಮಾಡಿರುವುದನ್ನು ಗಮನಿಸಿದ ಸರ್ಕಾರ ಹೊಸ ಪಡಿತರ ಚೀಟಿಗಳಿಗೆ ಅರ್ಜಿ ಸಲ್ಲಿಸುತ್ತಿದ್ದಾರೆ ಎಂದು ಭಾವಿಸಿ ಆನ್‌ಲೈನ್ ಪೋರ್ಟಲ್ ಬಂದ್ ಮಾಡಿದೆ. ಇದರಿಂದ ನೈಜ ಬಡಜನರು ಹೊಸ ಪಡಿತರ ಚೀಟಿಗಳನ್ನು ಪಡಿದುಕೊಳ್ಳಲು ಸಾಧ್ಯವಾಗುತ್ತಿಲ್ಲ ಎಂದು ಅಸಮಾಧಾನ ವ್ಯಕ್ತಪಡಿಸಿದ್ದಾರೆ.

ಜೂನ್ ತಿಂಗಳಿನಿಂದ ಅರ್ಜಿ ಸಲ್ಲಿಕೆಗೆ ಪ್ರತಿದಿನ ಕೆಲ ಗಂಟೆಗಳ ಕಾಲ ಅವಕಾಶ ಮಾಡಿಕೊಟ್ಟಿದೆ. ಆದರೆ ಸರ್ವರ್ ಸಮಸ್ಯೆಯಿಂದ ಆನ್‌ಲೈನ್ ಅರ್ಜಿಗಳನ್ನು ಸಲ್ಲಿಸಲು ಬಡವರು ಪರದಾಡುವಂತಹ ಸ್ಥಿತಿ ಎದುರಾಗಿದೆ. ಜನರು ಅರ್ಜಿಗಳನ್ನು ಸಲ್ಲಿಸಬೇಕಾದರೆ ಬೆಳಿಗ್ಗೆಯಿಂದಲೇ ಸರದಿ ಸಾಲಿನಲ್ಲಿ ನಿಲ್ಲಬೇಕಾಗುತ್ತದೆ. ಆನ್‌ಲೈನ್ ಸೆಂಟರ್‌ಗಳ ಮುಂದೆ ಮಧ್ಯರಾತ್ರಿಯಿಂದಲೇ ಸಾಲು-ಸಾಲಾಗಿ ಗಂಟೆಗಟ್ಟಲೇ ನಿಂತರು ಸಹ ಸರ್ವರ್ ಬರುತ್ತಿಲ್ಲ ಎಂದು ಹೇಳಿದರು.

ಇನ್ನೂ 3 ಲಕ್ಷ ಹೊಸ ಪಡಿತರ ಚೀಟಿಗಳನ್ನು ಸರ್ಕಾರ ವಿತರಣೆ ಮಾಡದೆ ಬಾಕಿ ಉಳಿಸಿಕೊಳ್ಳಲಾಗಿದೆ. ಇದರಿಂದ ಪ್ರಧಾನ ಮಂತ್ರಿ ಆಯುಷ್ಮಾನ್ ಯೋಜನೆಯಡಿ ಬಡವರು ಸಹಾಯ ಪಡೆಯಲು ಸಾಧ್ಯವಾಗುತ್ತಿಲ್ಲ. ಹಾಗಾಗಿ ತಕ್ಷಣ ಹೊಸ ಪಡಿತರ ಚೀಟಿ ವಿತರಣೆಗೆ ಸರ್ಕಾರ ಮುಂದಾಗಬೇಕು ಎಂದು ನವೀನ್ ಒತ್ತಾಯಿಸಿದ್ದಾರೆ.

# ಜ್ಞಾನ ವಿಕಾಸ ಕೇಂದ್ರ, ವಾರ್ಷಿಕೋತ್ಸವ

**ಹುಳಿಯಾರು:** ಹುಳಿಯಾರು ಹೋಬಳಿ ದೊಡ್ಡಬಿದರೆ ಕಾರ್ಯಕ್ಷೇತ್ರದ ಪೋಚಕಟ್ಟೆ ಗ್ರಾಮದ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆಯ ಭೂಮಿಕಾ ಜ್ಞಾನ ವಿಕಾಸ ಕೇಂದ್ರ, ವಾರ್ಷಿಕೋತ್ಸವ ಕಾರ್ಯಕ್ರಮ ನಡೆಯಿತು.

ಈ ಸಂದರ್ಭದಲ್ಲಿ ವಿವಿಧ ಸ್ಪರ್ಧೆಗಳನ್ನು ಮಾಡಿ ಬಹುಮಾನ ವಿತರಿಸಲಾಯಿತು. ಹಗ್ಗಜಗ್ಗಾಟದಲ್ಲಿ ಹೇಮಾವತಿ ತಂಡ, ಮ್ಯೂಸಿಕಲ್‌ಚೇರ್‌ನಲ್ಲಿ ತುಳಸಿಬಾಯಿ, ಮಂಜುಳಾಬಾಯಿ, ಸಲ್ಮಾಬಾಯಿ ಬಹುಮಾನ ಪಡೆದುಕೊಂಡರು. ಯೋಜನೆಯ ಯೋಜನಾಧಿಕಾರಿಗಳಾದ ರಾಮಚಂದ್ರ, ಡಿ, ಕೇಂದ್ರದ ಅಧ್ಯಕ್ಷೆ ಸರೋಜಬಾಯಿ ಪಂಚಾಯತಿ ಸದಸ್ಯರದ ದೇವರಾಜು, ವಲಯದ ಮೇಲ್ವಿಚಾರಕಿ ಉಮಾದೇವಿ, ಜ್ಞಾನವಿಕಾಸ ಸಮನ್ವಯ ಅಧಿಕಾರಿ ಸುನಿತಾ, ಸೇವಾಪ್ರತಿನಿಧಿ ಸಲ್ಮಾ ಕೌಸರ್ ಹಾಜರಿದ್ದರು.



**ಹುಳಿಯಾರು ಹೋಬಳಿ ದೊಡ್ಡಬಿದರೆ ಕಾರ್ಯಕ್ಷೇತ್ರದ ಪೋಚಕಟ್ಟೆ ಗ್ರಾಮದ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆಯ ಭೂಮಿಕಾ ಜ್ಞಾನ ವಿಕಾಸ ಕೇಂದ್ರ, ವಾರ್ಷಿಕೋತ್ಸವ ಕಾರ್ಯಕ್ರಮ ನಡೆಯಿತು.**

# ಪ್ರತಿಭಾ ಕಾರಂಜಿಯಲ್ಲಿ 14 ಬಹುಮಾನ

**ಹುಳಿಯಾರು:** ಹುಳಿಯಾರು ಎಂಪಿಎಸ್ ಆವರಣದಲ್ಲಿ ನಡೆದ ಕ್ಲಸ್ಟರ್ ಮಟ್ಟದ ಪ್ರತಿಭಾ ಕಾರಂಜಿಯಲ್ಲಿ ವಿವೇಕಾನಂದ ಶಾಲೆಯ ಮಕ್ಕಳು 14 ಬಹುಮಾನ ಪಡೆದು ಶಾಲೆಗೆ ಕೀರ್ತಿ ತಂದಿದ್ದಾರೆ. ಅದರಲ್ಲಿರಲ್ಲಿ 6 ಪ್ರಥಮ ಸ್ಥಾನ, 3 ದ್ವಿತೀಯ ಸ್ಥಾನ ಹಾಗೂ 5 ತೃತೀಯ ಸ್ಥಾನಗಳಲ್ಲಿ ಜಯಶೀಲರಾಗಿದ್ದಾರೆ.

ಛದ್ಮಾವೇಶದಲ್ಲಿ ಶರಣ್ಯ, ಕತೆ ಹೇಳುವುದರಲ್ಲಿ ಶಾನವಿ, ಭಕ್ತಿಗೀತೆ ದೇಶಭಕ್ತಿ ಗೀತೆಯಲ್ಲಿ ಧನಲಕ್ಷ್ಮಿ, ಧಾರ್ಮಿಕ ಪಠಣದಲ್ಲಿ ಧನ ದೀಪ್ತಿ, ಇಂಗ್ಲಿಷ್ ಕಂಠಪಾಠದಲ್ಲಿ ತನುಶ್ರೀ ಪ್ರಥಮ ಸ್ಥಾನ ಪಡೆದಿದ್ದಾರೆ.

ಚಿತ್ರಕಲೆಯಲ್ಲಿ ನವಮಿ, ಕನ್ನಡ ಕಂಠಪಾಠದಲ್ಲಿ ರೋಷಣಿ, ಅಭಿನಯ ಗೀತೆಯಲ್ಲಿ ಲಾಲಿತ್ಯ ದ್ವಿತೀಯ ಬಹುಮಾನ ಪಡೆದಿದ್ದಾರೆ. ಹಿಂದಿ ಕಂಠಪಾಠದಲ್ಲಿ ಭೂಮಿಕಾ, ಮಿಮಿಕ್ರಿಯಲ್ಲಿ ಡಮರೇಶ್, ಕ್ಲೇ ಮಾಡ್ಲಿಂಗ್‌ನಲ್ಲಿ ಧನು, ಕವನ ವಾಚನದಲ್ಲಿ ಲಾಲಿತ್ಯ, ಅಭಿನಯ ಗೀತೆಯಲ್ಲಿ ಮನ್ವಿತಾ, ಕಥೆ ಹೇಳುವುದರಲ್ಲಿ ಶಾನವಿ ತೃತೀಯ ಬಹುಮಾನ ಪಡೆದಿದ್ದಾರೆ. ಕ್ಲಸ್ಟರ್ ಮಟ್ಟದ ಸ್ಪರ್ಧೆಯಲ್ಲಿ ಅತಿ ಹೆಚ್ಚು ಬಹುಮಾನ ಪಡೆದ ಶಾಲೆಎಂಬ ಕೀರ್ತಿಗೆ ವಿವೇಕಾನಂದ ಶಾಲೆ ಪಾತ್ರವಾಗಿದ್ದು ಇದಕ್ಕೆ ಕಾರಣರಾದ ವಿದ್ಯಾರ್ಥಿಗಳನ್ನು ಶಾಲೆಯ ಕಾರ್ಯದರ್ಶಿ ಅಶೋಕ ಮೂರ್ತಿ, ಮುಖ್ಯೋಪಾಧ್ಯಾಯರಾದ ಪ್ರದೀಪ್, ವ್ಯವಸ್ಥಾಪಕರಾದ ಪ್ರೇಮಲತಾ, ಶಿಕ್ಷಕರಾದ ರಜನಿ, ಮೇಘನಾ, ಮನು ಕೆ ಎಸ್ ಅಭಿನಂಧಿಸಿದ್ದಾರೆ.



# ಫಾಸ್ಟ್ ಫುಡ್ ತಯಾರಿಕಾ ತರಬೇತಿಗೆ ಅರ್ಜಿ ಆಹ್ವಾನ

**ಬೆಂಗಳೂರು ಗ್ರಾಮಾಂತರ:** ಶ್ರೀ ಧರ್ಮಸ್ಥಳ ಮಂಜುನಾಥೇಶ್ವರ ಶಿಕ್ಷಣ ಟ್ರಸ್ಟ್ ಮತ್ತು ಕೆನರಾ ಬ್ಯಾಂಕ್‌ನ ಸಹಯೋಗದಲ್ಲಿ ನಡೆಸುತ್ತಿರುವ ರುಡ್‌ಸೆಟ್ ಸಂಸ್ಥೆಯ ವತಿಯಿಂದ ಹಮ್ಮಿಕೊಂಡಿರುವಫಾಸ್ಟ್ ಫುಡ್ ತಯಾರಿಕಾಕುರಿತ 10 ದಿನಗಳ ಉಚಿತ ತರಬೇತಿಗೆ ಅರ್ಜಿ ಆಹ್ವಾನಿಸಲಾಗಿದ್ದು, ಬೆಂಗಳೂರು ಗ್ರಾಮಾಂತರ, ಬೆಂಗಳೂರು ನಗರ, ರಾಮನಗರ ಹಾಗೂ ತುಮಕೂರು ಜಿಲ್ಲಾ ವ್ಯಾಪ್ತಿಯ ಗ್ರಾಮೀಣ ಆಸಕ್ತ ನಿರುದ್ಯೋಗಿ ಯುವಕ-ಯುವತಿಯರು ಅರ್ಜಿ ಸಲ್ಲಿಸಬಹುದಾಗಿದೆ. ಆಸಕ್ತರು 18 ರಿಂದ 45 ವರ್ಷ ವಯೋಮಾನದವರಾಗಿದ್ದು, ಕನ್ನಡ ಭಾಷೆ ಓದಲು ಮತ್ತು ಬರೆಯಲು ಬಲ್ಲವರಾಗಿರಬೇಕು. ಅಭ್ಯರ್ಥಿಗಳು ಆಧಾರ್ ಕಾರ್ಡ್‌ನ್ನು ಹೊಂದಿರಬೇಕು ಹಾಗೂ ಬಿಪಿಎಲ್ ಕಾರ್ಡ್ ಅನ್ನು ಹೊಂದಿರುವ ಗ್ರಾಮೀಣ ಪ್ರದೇಶದ ಅಭ್ಯರ್ಥಿಗಳಿಗೆ ಆದ್ಯತೆ ನೀಡಲಾಗುವುದು. ತರಬೇತಿಯು ಕಡ್ಡಾಯವಾಗಿ ವಸತಿಯುತವಾಗಿದ್ದು, ತರಬೇತಿಯ ಅವಧಿಯಲ್ಲಿ ಉಚಿತವಾಗಿ ಊಟ ಮತ್ತು ವಸತಿ ನೀಡಲಾಗುವುದು ಹಾಗೂ ತರಬೇತಿ ಪೂರ್ಣಗೊಂಡ ನಂತರ ಕೇಂದ್ರ ಸರ್ಕಾರದ ಗ್ರಾಮೀಣಾಭಿವೃದ್ಧಿ ಸಚಿವಾಲಯದಿಂದ ಪ್ರಮಾಣಪತ್ರವನ್ನು ವಿತರಿಸಲಾಗುವುದು. ಅರ್ಜಿ ಸಲ್ಲಿಸಲುಸೆಪ್ಟೆಂಬರ್ 13ಕೊನೆಯ ದಿನವಾಗಿದೆ. ಮೊಬೈಲ್ ಸಂಖ್ಯೆ: 9380162042,9740982585ಅನ್ನು ಸಂಪರ್ಕಿಸಬಹುದಾಗಿದೆ ಎಂದು ರುಡ್‌ಸೆಟ್ ಸಂಸ್ಥೆಯ ನಿರ್ದೇಶಕರಾದ ರವಿಕುಮಾರ ತಿಳಿಸಿದ್ದಾರೆ.

# ವಿದ್ಯಾರ್ಥಿವೇತನಕ್ಕೆ ಅರ್ಜಿ

**ಬೆಂಗಳೂರು ಗ್ರಾಮಾಂತರ:** ಸಮಾಜ ಕಲ್ಯಾಣ ಇಲಾಖೆ ವತಿಯಿಂದ 2024-25ನೇ ಸಾಲಿಗೆ ಮೆಟ್ರಿಕ್ ಪೂರ್ವ, ಮೆಟ್ರಿಕ್ ನಂತರದ ವಿದ್ಯಾರ್ಥಿವೇತನ ಕಾರ್ಯಕ್ರಮ ಹಾಗೂ ಪ್ರೋತ್ಸಾಹಧನ ಕಾರ್ಯಕ್ರಮಗಳಲ್ಲಿ ಅತೀ ಹೆಚ್ಚಿನ ಸಂಖ್ಯೆಯಲ್ಲಿ ವಿದ್ಯಾರ್ಥಿಗಳು ಅರ್ಜಿ ಸಲ್ಲಿಸುವಂತೆ ಹಾಗೂ ಯಾವುದೇ ಅರ್ಹ ವಿದ್ಯಾರ್ಥಿಗಳು ವಿದ್ಯಾರ್ಥಿವೇತನದಿಂದ ವಂಚಿತರಾಗದಂತೆ ಮಾಡಲು ಸೆಪ್ಟೆಂಬರ್ 2024 ರಿಂದ ವಿದ್ಯಾರ್ಥಿವೇತನ ಹಾಗೂ ಪ್ರೋತ್ಸಾಹಧನ ಅಭಿಯಾನ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿದೆ. ವಿದ್ಯಾರ್ಥಿಗಳು ಮೆಟ್ರಿಕ್ ಪೂರ್ವ, ಮೆಟ್ರಿಕ್ ನಂತರದ ವಿದ್ಯಾರ್ಥಿವೇತನ ಹಾಗೂ ಪ್ರೋತ್ಸಾಹ ಧನಕ್ಕಾಗಿ ವೆಬ್ ಮೂಲಕ ಅರ್ಜಿ ಸಲ್ಲಿಸಬಹುದು. ಹೆಚ್ಚಿನ ಮಾಹಿತಿಗಾಗಿ ಉಪ ನಿರ್ದೇಶಕರ ಕಛೇರಿ, ಸಮಾಜ ಕಲ್ಯಾಣ ಇಲಾಖೆ, ಬೆಂಗಳೂರು ಗ್ರಾಮಾಂತರ ಜಿಲ್ಲೆ ನಂ.217, ಎರಡನೇ ಮಹಡಿ, ಜಿಲ್ಲಾಡಳಿತ ಭವನ, ಬೀರಸಂದ್ರ, ಗ್ರಾಮ, ದೇವನಹಳ್ಳಿ ತಾಲ್ಲೂಕು ದೂರವಾಣಿ:080-29787447/9480843020 ಸಂಪರ್ಕಿಸಿ.

# ಆನ್‌ಲೈನ್ ಮೂಲಕ ಆಹ್ವಾನ

**ಬೆಂಗಳೂರು ಗ್ರಾಮಾಂತರ:** 2024-25ನೇ ಸಾಲಿಗೆ ಸಂಬಂಧಿಸಿದಂತೆ ಕರ್ನಾಟಕ ರಾಜ್ಯದ ಅರ್ಹ ಅಲ್ಪಸಂಖ್ಯಾತರ ಸಮುದಾಯದ ವಿದ್ಯಾರ್ಥಿಗಳಿಗಾಗಿ ಬೆಂಗಳೂರು ಗ್ರಾಮಾಂತರ ಜಿಲ್ಲೆಯ ವ್ಯಾಪ್ತಿಯ ಶಾಲೆಗಳಲ್ಲಿ ಓದುತ್ತಿರುವ ಅಲ್ಪಸಂಖ್ಯಾತರ ಮುಸ್ಲಿಂ, ಕ್ರಿಶ್ಚಿಯನ್, ಜೈನ್, ಸಿಖ್, ಬೌದ್ಧ ಮತ್ತು ಪಾರ್ಸಿ ಧರ್ಮದ ವಿದ್ಯಾರ್ಥಿಗಳಿಗೆ ಮೆಟ್ರಿಕ್ ಪೂರ್ವ ವಿದ್ಯಾರ್ಥಿ ವೇತನದ ವೆಬ್ ಸೈಟ್‌ನಲ್ಲಿ ಆನ್‌ಲೈನ್ ಮೂಲಕ ಅರ್ಜಿನ್ನು ಭರ್ತಿ ಮಾಡುವುದು. ಅರ್ಜಿ ಸಲ್ಲಿಸುವ ವೇಳೆ ತಾಂತ್ರಿಕ ತೊಂದರೆಯಾದಾಗ ಅಲ್ಪಸಂಖ್ಯಾತರ ಜಿಲ್ಲಾ ಹಾಗೂ ತಾಲ್ಲೂಕು ಮಾಹಿತಿ ಕೇಂದ್ರಗಳಲ್ಲಿರುವ ಹೆಲ್ಪ್ ಡೆಸ್ಕ್ ಸಹಾಯವಾಣಿ ಸಂಖ್ಯೆ: 8277799990 ನ್ನು ಸಂಪರ್ಕಿಸಿ ಮಾಹಿತಿ ಪಡೆಯುವುದು. ಮೆಟ್ರಿಕ್ ಪೂರ್ವ ವಿದ್ಯಾರ್ಥಿ ವೇತನಕ್ಕೆ ಅರ್ಜಿದಾರರ ವಾರ್ಷಿಕ ಆದಾಯ ರೂ. 1.00 ಲಕ್ಷ ಮಿತಿಯೊಳಗೆ ಇರತಕ್ಕದ್ದು, ಕರ್ನಾಟಕ ರಾಜ್ಯದ ನಿವಾಸಿಯಾಗಿರಬೇಕು, 1ನೇ ತರಗತಿಯಲ್ಲಿ ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿಗಳು ಹೊಸದಾಗಿ ಅರ್ಜಿ ಸಲ್ಲಿಸತಕ್ಕದ್ದು, ವಿದ್ಯಾರ್ಥಿಗಳು ಆಯಾ ಅರ್ಜಿಗಳೊಂದಿಗೆ ಜಾತಿ ಪ್ರಮಾಣ ಪತ್ರ, ಆದಾಯ ಪ್ರಮಾಣ ಪತ್ರ, ಹಿಂದಿನ ತರಗತಿಯಲ್ಲಿ ತೇರ್ಗಡೆ ಹೊಂದಿದ ತರಗತಿಯ ಅಂಕ ಪಟ್ಟಿ, ಶಾಲೆಗೆ ಪಾವತಿಸಿದ ಶುಲ್ಕ ರಸೀದಿ, ಆಧಾರ್ ಸಂಖ್ಯೆ ಮತ್ತು ಇತರೆ ಅವಶ್ಯ ದಾಖಲಾತಿಗಳನ್ನು ಆನ್‌ಲೈನ್ ಕಾಫಿಗೆ ಲಗತ್ತಿಸುವುದು ಎಂದು ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯ ಅಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಮಹಾತ್ಮ ಗಾಂಧೀ ಸೇವಾ ಪ್ರಶಸ್ತಿ

**ಮಂಡ್ಯ:** ರಾಜ್ಯ ಸರ್ಕಾರವು ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯಲ್ಲಿ ಸ್ಥಾಪಿಸಿರುವ ಐದು ಲಕ್ಷ ರೂಪಾಯಿ ನಗದನ್ನು ಒಳಗೊಂಡ ''ಮಹಾತ್ಮಗಾಂಧೀ ಸೇವಾ ಪ್ರಶಸ್ತಿ-ಕರ್ನಾಟಕಗೆ 2024 ನೇ ಸಾಲಿಗೆ ಅರ್ಹ ಸಾಧಕರನ್ನು ಅಥವಾ ಸಂಘ ಸಂಸ್ಥೆಗಳನ್ನು ಆಯ್ಕೆ ಮಾಡಲು ನನಿರ್ದೇಶನಗಳನ್ನು ಆಹ್ವಾನಿಸಲಾಗಿದೆ. ಸಾರ್ವಜನಿಕ ಜೀವನದಲ್ಲಿ ಮಹಾತ್ಮಗಾಂಧೀಜಿಯವರ ಆದರ್ಶಗಳನ್ನು ಅಳವಡಿಸಿಕೊಂಡು ಜೀವನ ನಡೆಸುತ್ತಿರುವ ಕನಿಷ್ಠ 60 ವರ್ಷಗಳಾಗಿರುವ ವ್ಯಕ್ತಿಗಳು ಅಥವಾ 25 ವರ್ಷಗಳು ತುಂಬಿರುವ ಸೇವಾ ಸಂಸ್ಥೆಗಳನ್ನು ಈ ಪ್ರಶಸ್ತಿಗೆ ಪರಿಗಣಿಸಲಾಗುವುದು. ಪ್ರಶಸ್ತಿಯನ್ನು ಆಯ್ಕೆ ಮಾಡಲು ಆಯ್ಕೆ ಸಮಿತಿಯನ್ನು ರಚಿಸಲಾಗುವುದು. 2024 ರ ಅಕ್ಟೋಬರ್ 02 ರಂದು ಪ್ರಶಸ್ತಿ ಪ್ರದಾನ ಮಾಡಲಾಗುವುದು ಮಹಾತ್ಮಗಾಂಧೀಜಿಯವರು ಪ್ರಚುರಪಡಿಸಿದ ಜನಪರ ಕಾರ್ಯಕ್ರಮಗಳಾದ ಅಸ್ಪೃಶ್ಯತೆ ನಿವಾರಣೆ, ಅಹಿಂಸೆ, ಮಹಿಳಾ ಸಬಲೀಕರಣ, ಗ್ರಾಮೀಣ ನೈರ್ಮಲ್ಯ, ಮದ್ಯಪಾನ ವಿರೋಧಿ ನೀತಿ, ಖಾದಿ ಮತ್ತು ಸ್ವದೇಶಿವಸ್ತು ಬಳಕೆ, ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಗಳ ಉದ್ದಾರ, ಈ ಕ್ಷೇತ್ರಗಳಲ್ಲಿ ಸ್ವಯಂ ಪ್ರೇರಣೆಯಿಂದ ತೊಡಗಿರುವ ವ್ಯಕ್ತಿಗಳು ಅಥವಾ ಸಂಸ್ಥೆಗಳು ಈ ಪ್ರಶಸ್ತಿಗೆ ಅರ್ಜಿ ಸಲ್ಲಿಸಬಹುದು ಅಥವಾ ಸಂಘ ಸಂಸ್ಥೆಗಳು ಅಥವಾ ವ್ಯಕ್ತಿಗಳು ನಾಮನಿರ್ದೇಶನ ಕೂಡ ಮಾಡಬಹುದಾಗಿದೆ. ಸೆಪ್ಟೆಂಬರ್ 19 ರ ಸಂಜೆ 5.30 ರೊಳಗಾಗಿ ಅರ್ಜಿಗಳನ್ನು ಆಯುಕ್ತರು, ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ, ವಾರ್ತಾ ಸೌಧ, ನಂ. 17, ಭಗವಾನ್ ಮಹಾವೀರ ರಸ್ತೆ ಬೆಂಗಳೂರು-560 001 ಕಳುಹಿಸಬಹುದಾಗಿದೆ.

# ಹಬ್ಬದ ವ್ಯಾಪಾರ ಸ್ಥಳ ಬದಲಿ ವ್ಯವಸ್ಥೆಗೆ ಪ್ರಶಂಸೆ

**ಬೇಲೂರು:** ಹಬ್ಬ ಹರಿದಿನದಲ್ಲಿ ಕಿರಿದಾದ ರಸ್ತೆಯ ಬದಿಯಲ್ಲಿಯೇ ವ್ಯಾಪಾರ ವಹಿವಾಟು ನಡೆಸಿ ವಾಹನ ಸುಗಮ ಸಂಚಾರಕ್ಕೆ ತೊಡಕುಂಟು ಆಗದಂತೆ ಮೈದಾನದಲ್ಲಿ ಒಂದೇ ಕಡೆ ವ್ಯಾಪಾರಕ್ಕೆ ಅವಕಾಶ ಮಾಡಿಕೊಟ್ಟಿದ್ದಕ್ಕೆ ಸಾರ್ವಜನಿಕರು, ವರ್ತಕರು ಮೆಚ್ಚುಗೆ ವ್ಯಕ್ತಪಡಿಸಿದ್ದಾರೆ.

ಹಬ್ಬ ಎಂದರೆ ಸಹಜವಾಗೇ ಹೂವು, ಹಣ್ಣು, ತರಕಾರಿ ಇನ್ನಿತರ ಪದಾರ್ಥಗಳ ಮಾರಾಟ ಇದ್ದೇ ಇರುತ್ತದೆ. ಆದರೆ ಇವುಗಳ ಮಾರಾಟಕ್ಕೆ ಸಮರ್ಪಕ ಸ್ಥಳದ ಕೊರತೆಯಿಂದ ಅನಿವಾರ್ಯವಾಗಿ ರಸ್ತೆ ಬದಿ, ಫುಟ್‌ಪಾತ್ ಅನ್ನೇ ಉಪಯೋಗಿಸಿಕೊಳ್ಳಲಾಗುತ್ತಿತ್ತು. ಇದರಿಂದ ವಾಹನ ಸಂಚಾರ ಹಾಗೂ ಪಾದಚಾರಿಗಳಿಗೆ ಇನ್ನಿಲ್ಲದ ಸಮಸ್ಯೆ ಎದುರಾಗಿತ್ತು.

ಇದೀಗ ಪುರಸಭೆಯಿಂದ ಹಬ್ಬದ 2 ದಿನಗಳ ಅವಧಿಗೆ ಜೂನಿಯರ್ ಕಾಲೇಜು ಮೈದಾನದಲ್ಲಿ ಮಾರಾಟಕ್ಕೆ ವ್ಯವಸ್ಥೆ ಮಾಡಿರುವುದರಿಂದ ಒಂದೇ ಸ್ಥಳದಲ್ಲಿ ಹಬ್ಬಕ್ಕೆ ಪೂರಕವಾದ ಎಲ್ಲಾ ವಸ್ತುಗಳು ದೊರಕುತ್ತಿವೆ. ಯಾವುದೇ ರೀತಿಯ ಆತಂಕವಿಲ್ಲದೆ, ವೃದ್ಧರು, ಮಕ್ಕಳು ಇಲ್ಲಿಗೆ ಬಂದು ವಸ್ತುಗಳ ಖರೀದಿಸುವಂತಾಗಿದೆ. ಈ ಬದಲಾವಣೆ ಬಗ್ಗೆ ಪ್ರಶಂಸೆ ವ್ಯಕ್ತಪಡಿರುವ ಹಲವರು ಇದನ್ನು ಮುಂದುವರಿಸಬೇಕೆಂಬ ಆಶಯ ವ್ಯಕ್ತಪಡಿಸಿದ್ದಾರೆ.



**ಬದಲಿ ವ್ಯವಸ್ಥೆ ಚನ್ನಾಗಿದೆ. ಪ್ರತಿ ಹಬ್ಬದಂದು ಇದೇ ರೀತಿ ಮಾಡಿದರೆ ಒಳ್ಳೆಯದು. ಇದರಿಂದ ಟ್ರಾಫಿಕ್ ಸಮಸ್ಯೆ ತಪ್ಪುತ್ತದೆ. ವಸ್ತುಗಳ ಕೊಳ್ಳುವವರಿಗೆ ಒಂದೇ ಕಡೆ ಎಲ್ಲವೂ ಸಿಗುತ್ತದೆ.**

| ದಿವಾಕರಶೆಟ್ಟಿ ವರ್ತಕ

**ಇದು ಉತ್ತಮ ಕೆಲಸವಾಗಿದೆ. ಎಲ್ಲಾ ವಸ್ತುಗಳು ಒಂದೇ ಸ್ಥಳದಲ್ಲಿ ಸಿಗುವುದರಿಂದ ಖರೀದಿಸಲು ಅನುಕೂಲವಾಗಿದೆ. ಇದು ಇನ್ನುಮುಂದೆಯೂ ಮುಂದುವರಿಯಬೇಕು.**

| ಕಾಯಿ ಶಿವು ವರ್ತಕರು

**ಇದು ಉತ್ತಮವಾಗಿದೆ. ಆದರೂ ಹೊಸ ವ್ಯವಸ್ಥೆ. ಇಲ್ಲಿ ಒಂದೇ ಕಡೆ ಮಾಡಿದರೆ ತೊಂದರೆಯಿಲ್ಲ. ಇಲ್ಲಿಯೂ ಮಾಡಿ ರಸ್ತೆಬದಿ ಅವಕಾಶ ಕೊಟ್ಟರೆ ತೊಂದರೆಯಾಗುತ್ತದೆ. ಪುರಸಭೆಯವರು ಗಮನ ಹರಿಸಬೇಕು.**

| ಶೀಲಾ ವರ್ತಕರು

# ಕಚ್ಚಾಮಣ್ಣಿಗೆ ಸ್ವಚ್ಛರೂಪ ಕೊಡುವ ಶಿಲ್ಪಿಯೇ ಶಿಕ್ಷಕ

**ವಿಜಯಪುರ:** ಏಳನೇ ತರಗತಿ ವಿದ್ಯಾರ್ಥಿನಿ ಯಶಿಕ ಕೆ ಮಾತನಾಡಿ ಕಚ್ಚಾಮಣ್ಣಿಗೆ ಸ್ವಚ್ಛ ರೂಪ ಕೊಡುವಂತಹ ಶಿಲ್ಪಿಗಳೇ ನಿಜವಾದಂತಹ ಶಿಕ್ಷಕರು ಎಂದು ಹೇಳಿ ತನ್ನ ಸಹಚರರಿಗೆ ಶಿಕ್ಷಕರು ಹೇಳಿದಂತಹ ಕೆಲಸ ಕಾರ್ಯಗಳನ್ನು ಜಾಗೃಕತೆಯಿಂದ ಮಾಡಿ ಆಗ ಪ್ರತಿಫಲ ನಮಗೆ ಸಿಗುತ್ತೆ ಎಂಬುದನ್ನು ಹೇಳಿದಳು.

ಪಟ್ಟಣದ ಪ್ರಗತಿ ಆಂಗ್ಲ ಶಾಲೆಯಲ್ಲಿ ಗುರುವಾರದಂದು ಶಿಕ್ಷಕರ ದಿನದ ಕಾರ್ಯಕ್ರಮವನ್ನು ಎಲ್ಲಾ ವಿದ್ಯಾರ್ಥಿಗಳು ಸೇರಿ ಆಚರಿಸಿದರು. ಈ ಕಾರ್ಯಕ್ರಮದ ಅಧ್ಯಕ್ಷತೆಯನ್ನು ಶಾಲೆಯ ಮುಖ್ಯೋಪಾಧ್ಯಾಯರಾದ ಜೆ. ಎನ್. ಪ್ರಕಾಶ್ ಸರ್ ರವರು ವಹಿಸಿದ್ದು, ಈ ಕಾರ್ಯಕ್ರಮದ ಕುರಿತು ಮಾತನಾಡಿ ಅಧ್ಯಾಪಕ ಎಂಬ ಪದಕ್ಕೆ ವಿಸ್ತಾರ ರೂಪವನ್ನು ಹೇಳುತ್ತಾ ಅ-ಅಂಬರದಲ್ಲಿರುವ ಕನಸುಗಳನ್ನು ನನಸಾಗಬೇಕೆಂದರೆ ಧ್ಯಾ -ಧ್ಯಾನವಿಟ್ಟು ಹೇಗೆ ಓದಬೇಕು ಎಂದು ಹೇಳು.ಪ -ಪ್ರತಿ ಹಂತದಲ್ಲೂ ಎಡವಿದಾಗ ಸಹಾಯ ಮಾಡುವ. ಕ-ಕೃಷ್ಣನಂತೆ ನಮ್ಮೆಲ್ಲ ಕಷ್ಟವನ್ನು ನಿರ್ವಹಿಸುವರು ಶಿಕ್ಷಕರು ಎಂದು. ಗುರುವಿನ ಮತ್ತು ವಿದ್ಯಾರ್ಥಿಗಳ ಪಾತ್ರವನ್ನು ತಿಳಿಸಿ ಕೊಟ್ಟರು. ಹಾಗೆಯೇ ಶಾಲೆಯ ಶಿಕ್ಷಕಿಯರಾದ ಸತ್ಯಾಶ್ರೀ ಮೇಡಂ ರವರು ರಾಮಾಯಣ ಮತ್ತು ಮಹಾಭಾರತ ದಲ್ಲಿ ನಡೆದ ಗುರು ಮತ್ತು ಶಿಷ್ಯಂದಿರು ನಡುವೆ ನಡೆದ ಪುರಾಣದ ಕಥೆಗಳನ್ನು ಹೇಳಿ ಗುರುವಿನ ಮಹತ್ವವನ್ನು ತಿಳಿಸಿದರು.




ರೇಣುಕಾ ಮೇಡಂ ರವರು ಮಾತನಾಡಿ ಸರ್ವಪಲ್ಲಿ ರಾಧಾ ಕೃಷ್ಣನ್ ರವರ, ಸಾಧನೆಯನ್ನು ಮಕ್ಕಳಿಗೆ ಸವಿವರವಾಗಿ ತಿಳಿಸಿಕೊಟ್ಟರು. ಈ ಕಾರ್ಯಕ್ರಮದಲ್ಲಿ ಹಲವಾರು ವಿದ್ಯಾರ್ಥಿಗಳು ಶಿಕ್ಷಕರಿಗೆ ಸಂಬಂಧಿಸಿದೆ ಹಲವಾರು ಗೀತೆಗಳನ್ನು ಹಾಡಿದರು. ಕವನ ವಾಚನವನ್ನು ಮಾಡಿದರು. ಮಿಮಿಕ್ರಿಗಳನ್ನು ಮಾಡಿದರು. ಈ ಕಾರ್ಯಕ್ರಮದ ಒಂದರಿಂದ ಏಳನೇ ತರಗತಿಯ ಎಲ್ಲಾ ಮಕ್ಕಳು ಸೇರಿ ಎಲ್ಲಾ ಶಿಕ್ಷಕ ಮತ್ತು ಶಿಕ್ಷಕಿಯರಿಗೂ ನೆನಪಿನ ಕಾಣಿಕೆ ವಿತರಿಸಿದರು. ಹಾಗೂ ಹಲವಾರು ಆಟಗಳನ್ನು ಆಡಿಸಿ ಗೆದ್ದ ಶಿಕ್ಷಕರಿಗೆ ಬಹುಮಾನವನ್ನು ನೀಡಿದರು. ಕಾರ್ಯಕ್ರಮವನ್ನು ನಾಲ್ಕನೇ ತರಗತಿ ವಿದ್ಯಾರ್ಥಿನಿ ಹೇಮಿತ.ಪಿ, 6ನೇ ತರಗತಿ ವಿದ್ಯಾರ್ಥಿ ಮಹಮದ್ ತಾಹಿರ್,7ನೇ ತರಗತಿ ಹರ್ಷಿತ.ಎನ್. ಬಹಳ ಸೊಗಸಾಗಿ ನಡೆಸಿಕೊಟ್ಟರು. ಈ ಕಾರ್ಯಕ್ರಮದಲ್ಲಿ ಎಲ್ಲಾ ಶಿಕ್ಷಕವೃಂದದವರು ಹಾಗೂ ಎಲ್ಲಾ ವಿದ್ಯಾರ್ಥಿಗಳು ಭಾಗವಹಿಸಿದ್ದರು.

# ಸಂಜೆ ಟಿಪ್ಸ್

## ಮಾರುಕಟ್ಟೆಗೆ 'ಇನೆಸ್ಕೊ ಇಂಡಿಯಾ ಟೆಕ್ನಾಲಜಿ ಫಂಡ್' ಬಿಡುಗಡೆ ಮಾಡಿದ ಇನ್ವೆಸ್ಕೊ ಮ್ಯೂಚುಯಲ್ ಫಂಡ್

Invesco Mutual Fund

ಇನ್ವೆಸ್ಕೊ ಮ್ಯೂಚುಯಲ್ ಫಂಡ್ ಇಂದು ತನ್ನ ಹೊಸ ಫಂಡ್ ಯೋಜನೆ ''ಇನ್ವೆಸ್ಕೊ ಇಂಡಿಯಾ ಟೆಕ್ನಾಲಜಿ ಫಂಡ್' ಮಾರುಕಟ್ಟೆಗೆ ಬಿಡುಗಡೆ ಮಾಡುವುದಾಗಿ ಘೋಷಿಸಿದೆ. ತಂತ್ರಜ್ಞಾನ ಮತ್ತು ತಂತ್ರಜ್ಞಾನ ಸಂಬಂಧಿತ ಕ್ಷೇತ್ರಗಳಲ್ಲಿ ಹೂಡಿಕೆ ಮಾಡುವ ಮುಕ್ತ ಈಕ್ವಿಟಿ ಯೋಜನೆ ಇದಾಗಿದೆ.ಇನ್ವೆಸ್ಕೊ ಇಂಡಿಯಾ ಟೆಕ್ನಾಲಜಿ ಫಂಡ್ ತಂತ್ರಜ್ಞಾನ ಮತ್ತು ತಂತ್ರಜ್ಞಾನ ಸಂಬಂಧಿತ ವಲಯಗಳಲ್ಲಿ ಕಾರ್ಯ ನಿರ್ವಹಿಸುತ್ತಿರುವ ಕಂಪನಿಗಳ ಈಕ್ವಿಟಿ ಮತ್ತು ಇಕ್ವಿಟಿ ಸಂಬಂಧಿತ ಸಾಧನಗಳಲ್ಲಿ 80-100% ಹೂಡಿಕೆ ಮಾಡಿ, ಬಂಡವಾಳ ಮೆಚ್ಚುಗೆ ಗಳಿಸಲು ಪ್ರಯತ್ನಿಸಲಿದೆ. ತಂತ್ರಜ್ಞಾನ, ಆಟೊಮೇಷನ್, ರೊಬೊಟಿಕ್ಸ್, ಕೃತಕ ಬುದ್ಧಿಮತ್ತೆ, ಕ್ಲೌಡ್ ಕಂಪ್ಯೂಟಿಂಗ್ ಸೇರಿದಂತೆ ಪರಿವರ್ತಕ ಆವಿಷ್ಕಾರಗಳನ್ನು ಚಾಲನೆ ಮಾಡುವ ಕಂಪನಿಗಳು, ಹೆಚ್ಚಿದ ಡಿಜಿಟಲ್ ಅಳವಡಿಕೆಯಿಂದ ಪ್ರಯೋಜನ ಪಡೆಯುತ್ತಿರುವ ಇತರೆ ತಂತ್ರಜ್ಞಾನ ಕಂಪನಿಗಳಲ್ಲಿ ಹೂಡಿಕೆ ಮಾಡಲಿದೆ. ಈ ನಿಧಿಯು ಹೂಡಿಕೆಯ ವಿಶ್ಲೇಷಣೆ ಮತ್ತು ಆಯ್ಕೆ(ಟಾಪ್-ಡೌನ್ ಮತ್ತು ಬಾಟಮ್-ಅಪ್) ಕಾರ್ಯವಿಧಾನವನ್ನು ಅಳವಡಿಸಿಕೊಳ್ಳುತ್ತದೆ, ಮಧ್ಯಮ ಗಾತ್ರದ ಬಂಡವಾಳ ಹೊಂದಿರುವ ಕಂಪನಿಗಳ ಬೆಳವಣಿಗೆ ಮತ್ತು ಸಣ್ಣ ಬಂಡವಾಳ ಹೊಂದಿರುವ ಕಂಪನಿಗಳ ಸಾಮರ್ಥ್ಯದ ಜತೆಗೆ, ಬೃಹತ್ ಬಂಡವಾಳ ಹೊಂದಿರುವ ಕಂಪನಿಗಳ ಸ್ಥಿರತೆ ಸಮತೋಲನಗೊಳಿಸುವ ಮಾರುಕಟ್ಟೆ ಬಂಡವಾಳೀಕರಣದಾದ್ಯಂತ ಹೂಡಿಕೆ ಮಾಡುತ್ತದೆ. ಈ ನಿಧಿಯು ಜಾಗತಿಕ ತಂತ್ರಜ್ಞಾನ ನಾಯಕರು ಮತ್ತು ಆವಿಷ್ಕಾರಕರೊಂದಿಗೆ ಭಾರತೀಯ ತಂತ್ರಜ್ಞಾನ ಕಂಪನಿಗಳಲ್ಲಿ ಹೂಡಿಕೆಗಳನ್ನು ಗುರಿಯಾಗಿಸುತ್ತದೆ. ನಿಫ್ಟಿ ಐಟಿ ಟಿಆರ್ಐಗೆ ನಿಧಿಯನ್ನು ಬೆಂಚ್ಮಾರ್ಕ್ ಮಾಡಲಾಗುವುದು ಮತ್ತು ಫಂಡ್ ಮ್ಯಾನೇಜರ್ಗಳಾದ ಹಿತೇನ್ ಜೈನ್ ಮತ್ತು ಆದಿತ್ಯ ಖೇಮಾನಿ ಅವರು ನಿಧಿ ನಿರ್ವಹಣೆ ಮಾಡಲಿದ್ದಾರೆ. ಬಿಡುಗಡೆ ಸಮಾರಂಭದಲ್ಲಿ ಮಾತನಾಡಿದ ಇನ್ವೆಸ್ಕೊ ಮ್ಯೂಚುವಲ್ ಫಂಡ್ನ ಮುಖ್ಯ ಹೂಡಿಕೆ ಅಧಿಕಾರೀ ತಾಹೆರ್ ಬಾದ್ಶಾಹ್, ಒಂದು ಹಂತದ 'ಳವಣಿಗೆಯ ನಂತರ, ಜಾಗತಿಕ ಆರ್ಥಿಕ ಪರಿಸ್ಥಿತಿ ಸ್ಥಿರವಾಗುತ್ತಿದ್ದಂತೆ ಮತ್ತು ಸಂಭಾವ್ಯ ಹಿಮ್ಮುಖ ಸ್ಥಿತಿಗೆ ಕಾರಣವಾಗಿದ್ದ ಜಾಗತಿಕ ಐಟಿ ಸೇವಾ ವಲಯವು ಚೇತರಿಕೆಗೆ ಸಿದ್ಧವಾಗಿದೆ. ಇಲ್ಲಿಯವರೆಗೆ ಹೆಚ್ಚುತ್ತಿರುವ ಜಾಗತಿಕ ಬಡ್ಡಿದರ ಆವರ್ತನವು ಈ ಅವಧಿಯಲ್ಲಿ ಜಾಗತಿಕ ಕಂಪನಿಗಳಿಗೆ ವೆಚ್ಚ ನಿರ್ವಹಿಸಲು ಸಹಾಯ ಮಾಡುವ ಮೂಲಕ ತನ್ನ ಪಾಲು ಗಳಿಸಿದೆ ಎಂದರು.

## ಸ್ಪೈಸಿ ಬೋಂಡಾ ಸೂಪ್

### ಪಾಕ ಶಾಲೆ



### ಬೇಕಿರುವ ಸಾಮಗ್ರಿ

ಉದ್ದಿನ ಬೇಳೆ - 1 ಕಪ್, ಹೆಸರು ಬೇಳೆ - 1 ಕಪ್, ಈರುಳ್ಳಿ - 1, ಟೊಮ್ಯಾಟೋ - 1, ಎಣ್ಣೆ - ಕರಿಯಲು, ಸಾಸಿವೆ - ಒಗ್ಗರಣೆಗೆ, ಜೀರ್ಗೆ - ಒಗ್ಗರಣೆಗೆ ಬೇಕಾಗುವಷ್ಟು, ಅರಿಶಿನ - 1/2 ಟೀ ಸ್ಪೂನ್, ಕರಿಬೇವು - 1 ಎಸಳು, ಕೊತ್ತಂಬರಿ ಸೊಪ್ಪು - 1/2 ಕಟ್ಟು, ಹಸಿಮೆಣಸಿನಕಾಯಿ - 5, ಶುಂಠಿ - 1 ಇಂಚು, ಮೆಣಸಿನ ಪುಡಿ - ಸ್ವಲ್ಪ, ಕೊಬ್ಬರಿ ತುಂಡುಗಳು - 1/2 ಕಪ್, ನಿಂಬೆ ಹೋಳು - 1/2, ಉಪ್ಪು - ರುಚಿಗೆ ತಕ್ಕಷ್ಟು

### ಮಾಡುವ ವಿಧಾನ

ಉದ್ದಿನ ಬೇಳೆಯನ್ನು 2-3 ಬಾರಿ ತೊಳೆದು ಸ್ವಲ್ಪ ನೀರು ಸೇರಿಸಿ 4 ಗಂಟೆಗಳ ಕಾಲ ನೆನೆಸಿ. ಬಳಿಕ ಹೆಸರು ಬೇಳೆಯನ್ನು 2-3 ಬಾರಿ ವಾಶ್ ಮಾಡಿ ಅದರೊಂದಿಗೆ ಹೆಚ್ಚಿಕೊಂಡ ಟೊಮ್ಯಾಟೋ ಹಾಗೂ ಈರುಳ್ಳಿ ಸೇರಿಸಿ ಕುಕ್ಕರ್ ಅಲ್ಲಿ ಸ್ವಲ್ಪ ನೀರು ಸೇರಿಸಿ 3-4 ಸೀಟಿ ಕೂಗಿಸಿ ಬೇಯಿಸಿಕೊಳ್ಳಿ ಆಮೇಲೆ ಒಂದು ಪ್ಯಾನಿನಲ್ಲಿ ಎಣ್ಣೆ ಸೇರಿಸಿ ಸಾಸಿವೆ, ಜೀರಿಗೆ ಒಗ್ಗರಣೆ ಹಾಕಿ, ಅರಿಶಿನ, ಕರಿಬೇವು, ಸೀಳಿಕೊಂಡ ಹಸಿಮೆಣಸಿನಕಾಯಿ, ಉದ್ದಕ್ಕೆ ಹೆಚ್ಚಿಕೊಂಡ ಶುಂಠಿ, ಮೆಣಸಿನ ಪುಡಿ ಸೇರಿಸಿ ಒಂದು ನಿಮಿಷ ಹುರಿದುಕೊಳ್ಳಿ ನಂತರ ಬೇಯಿಸಿಕೊಂಡ ಹೆಸರುಬೇಳೆ ಮಿಶ್ರಣವನ್ನು ಸೇರಿಸಿ ಅಗತ್ಯವಿರುವಷ್ಟು ನೀರು ಸೇರಿಸಿ, ಅದಕ್ಕೆ ಉಪ್ಪು, ಸಣ್ಣಗೆ ಹೆಚ್ಚಿದ ಕೊತ್ತಂಬರಿ ಸೊಪ್ಪು ಸೇರಿಸಿ 8-10 ನಿಮಿಷ ಕುದಿಸಿ ಸ್ಟೋವ್ ಆಫ್ ಮಾಡಿ ನಿಂಬೆರಸ ಸೇರಿಸಿ ನೆನೆದ ಉದ್ದಿನಬೇಳೆಯಿಂದ ನೀರು ಸೋರಿಸಿ ಒಂದೆರಡು ಸ್ಪೂನ್ ನೀರು ಸೇರಿಸಿ ಗ್ರೈಂಡ್ ಮಾಡಿಕೊಳ್ಳಿ. ಅನಂತರ ಉದ್ದಿನ ಹಿಟ್ಟಿನ ಮಿಶ್ರಣಕ್ಕೆ ಹಸಿಮೆಣಸಿನಕಾಯಿ, ಶುಂಠಿ ಚೂರು, ಕೊಬ್ಬರಿ ಚೂರು, ಹೆಚ್ಚಿಕೊಂಡ ಕೊತ್ತಂಬರಿ ಸೊಪ್ಪು, ಕರಿಬೇವು, ಮೆಣಸಿನ ಪುಡಿ, ಉಪ್ಪು ಸೇರಿಸಿ ಮಿಕ್ಸ್ ಮಾಡಿ ಬಿಸಿ ಎಣ್ಣೆಯಲ್ಲಿ ಬೋಂಡಾಗಳನ್ನು ಕಂದು ಬಣ್ಣ ಬರುವರೆಗೂ ಕರಿಯಿರಿ.



## ಪ್ರವಾಹ ಸಂತ್ರಸ್ಥರ ನೆರವಿಗೆ ಧಾವಿಸಿದ ಪವನ್ ಕಲ್ಯಾಣ್

ಪ್ರವಾಹದಿಂದಾಗಿ ಆಂಧ್ರ ಮತ್ತು ತೆಲಂಗಾಣದಲ್ಲಿ ಜನಜೀವನ ಅಸ್ತವ್ಯಸ್ತ ಆಗಿದೆ. ಹೀಗಾಗಿ ಅನೇಕ ಸೆಲೆಬ್ರಿಟಿಗಳು ತಮ್ಮ ಕೈಲಾದ ಸಹಾಯ ಮಾಡುತ್ತಿದ್ದಾರೆ. ಈಗಾಗಲೇ ಚಿರಂಜೀವಿ, ರಾಮ್ ಚರಣ್, ಪ್ರಭಾಸ್, ಅಲ್ಲು ಅರ್ಜುನ್, ನಂದಮೂರಿ ಬಾಲಕೃಷ್ಣ ಸೇರಿದಂತೆ ಅನೇಕ ಸೆಲೆಬ್ರಿಟಿಗಳು ಕೋಟ್ಯಂತರ ರೂಪಾಯಿ ದೇಣಿಗೆ ನೀಡಿದ್ದಾರೆ.

ಇದೀಗ ಟಾಲಿವುಡ್ ನಟ, ಆಂಧ್ರ ಪ್ರದೇಶದ ಉಪ ಮುಖ್ಯಮಂತ್ರಿ ಪವರ್ ಸ್ಟಾರ್ ಪವನ್ ಕಲ್ಯಾಣ್ 6 ಕೋಟಿ ರೂಪಾಯಿ ದೇಣಿಗೆ ನೀಡಿದ್ದಾರೆ.

ಮೊದಲು ಪವನ್ ಕಲ್ಯಾಣ್ ಅವರು ಆಂಧ್ರ ಮತ್ತು ತೆಲಂಗಾಣ ಮುಖ್ಯಮಂತ್ರಿಗಳ ಪರಿಹಾರ ನಿಧಿಗೆ ತಲಾ ಒಂದು ಕೋಟಿ ರೂಪಾಯಿ ನೀಡುವುದಾಗಿ ತಿಳಿಸಿದರು. ಆ ನಂತರ ಅವರು ಪ್ರವಾಹ ಪರಿಸ್ಥಿತಿಯನ್ನು ಅವಲೋಕಿಸಿ, ಈ ಹಣ ಸಾಕಾಗುವುದಿಲ್ಲ ಎಂದು ಮತ್ತೆ 4 ಕೋಟಿ ರೂಪಾಯಿ ನೀಡುವುದಾಗಿ ಪವನ್ ಕಲ್ಯಾಣ್ ಘೋಷಿಸಿದ್ದಾರೆ.

ಆಂಧ್ರ ಪ್ರದೇಶದಲ್ಲಿ ಪ್ರವಾಹಕ್ಕೆ ಸಿಲುಕಿದ 400 ಪಂಚಾಯತ್ ಕ್ಷೇತ್ರಗಳಲ್ಲಿ ಪುನರ್ವಸತಿ ಕಲ್ಪಿಸುವ ಸಲುವಾಗಿ ಪವನ್ ಕಲ್ಯಾಣ್ ನೀಡಿದ 4 ಕೋಟಿ ರೂಪಾಯಿ ಬಳಕೆ ಆಗಲಿದೆ. 'ಪ್ರವಾಹದಿಂದ ಆಗಿರುವ ಹಾನಿ ಗಮನಿಸಿದರೆ 1 ಕೋಟಿ ರೂಪಾಯಿಯಿಂದ ಏನೂ ಸಾಧ್ಯವಾಗುವುದಿಲ್ಲ. ಹಾಗಾಗಿ ಮತ್ತೆ 4 ಕೋಟಿ ರೂಪಾಯಿ ನೀಡಲಿದ್ದೇನೆ' ಎಂದು ಪವನ್ ಕಲ್ಯಾಣ್ ತಿಳಿಸಿದ್ದಾರೆ. 'ನಮ್ಮ ಪಕ್ಕದ ತೆಲಂಗಾಣ ಕೂಡ ಪ್ರವಾಹದಲ್ಲಿ ಸಿಲುಕಿದೆ. ಹಾಗಾಗಿ ತೆಲಂಗಾಣ ಮುಖ್ಯಮಂತ್ರಿಗಳ ಪರಿಹಾರ ನಿಧಿಗೆ 1 ಕೋಟಿ ರೂಪಾಯಿ ನೀಡುತ್ತಿದ್ದೇನೆ. ಮುಖ್ಯಮಂತ್ರಿ ರೇವಂತ್ ರೆಡ್ಡಿ ಅವರನ್ನು ನಾನು ನೇರವಾಗಿ ಭೇಟಿ ಮಾಡಿ ಹಣ ನೀಡುತ್ತೇನೆ. ಸಿನಿಮಾ ಸೆಲೆಬ್ರಿಟಿಗಳು ಕೂಡ ಈ ಸಮಯದಲ್ಲಿ ಮಾನವೀಯತೆ ತೋರಿಸುತ್ತಿದ್ದಾರೆ' ಎಂದು ಪವನ್ ಕಲ್ಯಾಣ್ ಹೇಳಿದ್ದಾರೆ.



## ಕಣ್ಣಿನ ಆರೋಗ್ಯಕ್ಕೆ ಚಿಕ್ಕು ಹಣ್ಣು ಸಹಕಾರಿ

### ಹೆಲ್ತ್ ಟಿಪ್ಸ್

ಚಿಕ್ಕು ಹಣ್ಣು ರುಚಿಯ ಜೊತೆಗೆ ಸಿಹಿ ಇರುವುದಲ್ಲದೆ ದೇಹಕ್ಕೆ ಅಗತ್ಯವಿರುವ ಅನೇಕ ಪೋಷಕಾಂಶಗಳನ್ನು ನೀಡುವ ಶಕಿಯನ್ನು ಹೊಂದಿದೆ. ಇದರಲ್ಲಿ ವಿಟಮಿನ್ ಎ ಸಮೃದ್ಧವಾಗಿದ್ದು ಚರ್ಮ ಮತ್ತು ಕಣ್ಣಿನ ಆರೋಗ್ಯಕ್ಕೆ ಸಹಕಾರಿಯಾಗಿದೆ. ಅಲ್ಲದೆ ಈ ಹಣ್ಣಿನಲ್ಲಿ ವಿಟಮಿನ್ ಸಿ, ವಿಟಮಿನ್ ಬಿ ಕಾಂಪ್ಲೆಕ್ಸ್, ಖನಿಜಗಳು ಮತ್ತು ಪೊಟ್ಯಾಸಿಯಮ್ ಸಮೃದ್ಧವಾಗಿದೆ.

ಅವು ದೇಹಕ್ಕೆ ಶಕ್ತಿಯನ್ನು ಒದಗಿಸುವುದಲ್ಲದೆ ರಕ್ತದೊತ್ತಡವನ್ನು ಸಹ ನಿಯಂತ್ರಿಸುತ್ತವೆ. ಸಪೋಟಾದಲ್ಲಿ ಕ್ಯಾಲ್ಸಿಯಂ, ಮೆಗ್ನೀಸಿಯಮ್ ಮತ್ತು ಪೊಟ್ಯಾಸಿಯಮ್ ನಂತಹ ಖನಿಜಗಳು ಸಮೃದ್ಧವಾಗಿರುವುದರಿಂದ, ಇವು ಮೂಳೆಗಳನ್ನು ಬಲಪಡಿಸುವುದಲ್ಲದೆ ಅವುಗಳಿಗೆ ಸಂಬಂಧ ಪಟ್ಟ ಸಮಸ್ಯೆಗಳನ್ನು ಕಡಿಮೆ ಮಾಡಲು ಕೂಡ ಸಹಾಯ ಮಾಡುತ್ತದೆ. ಜೊತೆಗೆ ಈ ಹಣ್ಣು ಫೈಬರ್, ರಂಜಕ ಮತ್ತು ಕ್ಯಾಲ್ಸಿಯಂ ಅನ್ನು ಸಹ ಹೊಂದಿರುತ್ತದೆ. ಸಪೋಟಾದಲ್ಲಿರುವ ಫ್ರಕ್ಟೋಸ್ ಅಂಶ ದೇಹಕ್ಕೆ ತಕ್ಷಣ ಶಕ್ತಿಯನ್ನು ಒದಗಿಸುತ್ತದೆ.

ಸಪೋಟಾದಲ್ಲಿ ಫೈಬರ್ ಸಮೃದ್ಧವಾಗಿದೆ, ಇದು ನಿಮ್ಮ ಜೀರ್ಣಕ್ರಿಯೆಯನ್ನು ಸುಧಾರಿಸುತ್ತದೆ. ಸಣ್ಣ ಹಣ್ಣಾದರೂ ಕೂಡ ಹೆಚ್ಚಿನ ಫೈಬರ್ ಅಂಶವಿದ್ದು ಮಲಬದ್ಧತೆಯಿಂದ ಬಳಲುತ್ತಿರುವವರಿಗೆ ಅನೇಕ ಆರೋಗ್ಯ ಪ್ರಯೋಜನಗಳನ್ನು ನೀಡುತ್ತದೆ. ಸೇಬು ಮತ್ತು ಕಿತ್ತಳೆಗಿಂತ ಹೆಚ್ಚಿನ ವಿಟಮಿನ್ ಸಿ ಅಂಶವಿದ್ದು ದೇಹದಲ್ಲಿ ರೋಗನಿರೋಧಕ ಶಕ್ತಿಯನ್ನು ಹೆಚ್ಚಿಸುತ್ತದೆ ಮತ್ತು ಚರ್ಮಕ್ಕೆ ಸಂಬಂಧಿಸಿದ ಸಮಸ್ಯೆಗಳನ್ನು ನಿವಾರಣೆ ಮಾಡುವಂತಹ ಶಕ್ತಿಯನ್ನು ಹೊಂದಿದೆ.



ಸಪೋಟಾದಲ್ಲಿರುವ ಪೊಟ್ಯಾಸಿಯಮ್ ರಕ್ತದೊತ್ತಡವನ್ನು ನಿಯಂತ್ರಿಸುತ್ತದೆ ಮತ್ತು ಹೃದಯದ ಆರೋಗ್ಯವನ್ನು ಸುಧಾರಿಸುತ್ತದೆ. ಇದು ಕೆಟ್ಟ ಕೊಲೆಸ್ಟ್ರಾಲ್ ಅನ್ನು ಕಡಿಮೆ ಮಾಡುತ್ತದೆ. ಜೊತೆಗೆ ಹೃದಯಾಘಾತದ ಇತರ ತೊಡಕುಗಳನ್ನು ಕಡಿಮೆ ಮಾಡಲು ಸಹಾಯ ಮಾಡುತ್ತದೆ. ಸಪೋಟಾದಲ್ಲಿ ಟ್ರಿಪ್ಟೋಫಾನ್ ಎಂಬ ಅಮೈನೋ ಆಮ್ಲವಿದೆ. ಇದು ಸಿರೊಟೋನಿನ್ ಉತ್ಪಾದನೆಯನ್ನು ಹೆಚ್ಚಿಸುತ್ತದೆ ಮತ್ತು ನಿಮ್ಮ ಒತ್ತಡ ಕಡಿಮೆ ಮಾಡಿ ಮನಸ್ಸನ್ನು ಶಾಂತಗೊಳಿಸುತ್ತದೆ. ಸಪೋಟಾ ಅಥವಾ ಚಿಕ್ಕು ಹಣ್ಣಿನಲ್ಲಿ ಉತ್ಕರ್ಷಣ ನಿರೋಧಕಗಳಿದ್ದು ಇವು ಚರ್ಮವನ್ನು ಕಾಂತಿಯುತವಾಗಿಸುತ್ತದೆ. ಅಲ್ಲದೆ ಚರ್ಮದ ಮೇಲಿನ ಸುಕ್ಕುಗಳು ಮತ್ತು ಹಳೆಯ ಕಲೆಗಳನ್ನು ಕಡಿಮೆ ಮಾಡಿ ನಿಮ್ಮ ಚರ್ಮವನ್ನು ಮೃದು ಮತ್ತು ಹೊಳೆಯುವಂತೆ ಮಾಡುತ್ತದೆ. ಈ ಹಣ್ಣಿನಲ್ಲಿ ಆಂಟಿಆಕ್ಸಿಡೆಂಟ್ ಮತ್ತು ವಿಟಮಿನ್-ಸಿ ಅಂಶ ಹೆಚ್ಚಾಗಿರುವುದರಿಂದ ದೇಹದಲ್ಲಿನ ಫ್ರೀ ರಾಡಿಕಲ್ ಗಳಂತಹ ವಿಷಕಾರಿ ಅಂಶಗಳ ವಿರುದ್ಧ ಹೋರಾಡುತ್ತದೆ.

## ಕಾಂತಿಯುತ ಚರ್ಮಕ್ಕೆ ಬಳಸಿ ಜೇನು

### ಬ್ಯೂಟಿ ಟಿಪ್ಸ್

ಪ್ರತಿಯೊಂದು ಸಮಸ್ಯೆಗೂ ವೈದ್ಯರಲ್ಲಿ ತೆರಳುವುದು ಅಭ್ಯಾಸವಾಗಿಬಿಟ್ಟಿದೆ. ಆದರೆ ನಮ್ಮಲ್ಲಿರುವ ಪ್ರಕೃತಿ ಸಂಪನ್ಮೂಲಗಳಿಂದ ಎಷ್ಟೋ ಸಮಸ್ಯೆಗೆ ಪರಿಹಾರ ಕಂಡು ಹಿಡಿದುಕೊಳ್ಳಬಹುದು ಎಂಬ ಅಂಶ ಹಲವರಿಗೆ ತಿಳಿದೇ ಇಲ್ಲ. ಅದರಲ್ಲಿಯೂ ಪ್ರತಿಯೊಬ್ಬರೂ ತಮ್ಮ ಸೌಂದರ್ಯವರ್ಧನೆಗಾಗಿ ಹಲವಾರು ಕಸರತ್ತು ನಡೆಸುತ್ತಾರೆ. ಅದರಲ್ಲಿ ಯಾವುದೇ ಅಡ್ಡ ಪರಿಣಾಮವಿಲ್ಲದೇ ತ್ವಚೆಯನ್ನು ಕಾಂತಿಯುತವಾಗಿಸುವ ಉಪಾಯವೊಂದು ಇಲ್ಲಿದೆ. ಮಲೆನಾಡಿನ ಕಾಡುಗಳಲ್ಲಿ ಸಮೃದ್ಧವಾಗಿ ದೊರೆಯುವ ಜೇನುತುಪ್ಪ ಹಲವು ಖಾಯಿಲೆಗಳಿಗೆ ರಾಮಬಾಣವಾಗಿದ್ದು, ಅದರಲ್ಲಿಯೂ ಚರ್ಮದ ಸಮಸ್ಯೆಗಳಿಗೆ ಅಮೃತ ಸಂಜೀವಿನಿಯಾಗಿದೆ. ವಿಟಮಿನ್, ಪ್ರೋಟಿನ್ ಮತ್ತು ರೋಗ ನಿರೋಧಕ ಜೀವಸತ್ವಗಳಿಂದ ಸಮೃದ್ಧವಾಗಿರುವ ಜೇನುತುಪ್ಪದ ವಿಟಮಿನ್ 'ಸಿ' ವಿಕಿರಣಗಳಿಂದ ಹಾನಿಗೀಡಾದ ಚರ್ಮದ ಪದರಗಳನ್ನು ಸರಿಪಡಿಸುವುದಲ್ಲದೇ ವಿಟಮಿನ್ 'ಬಿ 5' ಚರ್ಮದಲ್ಲಿ ಉತ್ಪತ್ತಿಯಾಗುವ ಎಣ್ಣೆಯ ಅಂಶವನ್ನು ತೆಗೆದು ಒಣ ಚರ್ಮವನ್ನು ಮೃದುಗೊಳಿಸುತ್ತದೆ.

**ಬಳಕೆ ಹೇಗೆ?:** ಒಂದು ಚಮಚ ಜೇನುತುಪ್ಪಕ್ಕೆ ಸಮ ಪ್ರಮಾಣದ ಕಿತ್ತಳೆ ರಸವನ್ನು ಬೆರಸಿ ಫೇಸ್ ಪ್ಯಾಕ್ ಮಾಡಿಕೊಂಡು ಮುಖಕ್ಕೆ ಹಚ್ಚಿದರೆ ಅಥವಾ ಸಿಪ್ಪೆ ತೆಗೆದ ಸೇಬನ್ನು ಚೆನ್ನಾಗಿ ರುಬ್ಬಿ ಅದಕ್ಕೆ 4 ಚಮಚ ಜೇನುತುಪ್ಪ ಬೆರೆಸಿ ಮುಖ ಮತ್ತು ಕುತ್ತಿಗೆಗೆ ಹಚ್ಚಿ 10 ನಿಮಿಷಗಳ ಕಾಲ ಬಿಟ್ಟು ಹದ ಬಿಸಿ ನೀರಿನಲ್ಲಿ ತೊಳೆದುಕೊಂಡರೆ ಚರ್ಮದ ತೇವಾಂಶ ಹೆಚ್ಚುವುದರ ಜತೆಗೆ ತ್ವಚೆಗೆ ಹೊಳಪು ನೀಡುತ್ತದೆ.



ಬಾಳೆಹಣ್ಣಿಗೆ ಜೇನುತುಪ್ಪವನ್ನು ಬೆರೆಸಿ ಚೆನ್ನಾಗಿ ಮಿಕ್ಸ್ ಮಾಡಿ ಮುಖಕ್ಕೆ ಹಚ್ಚಿ 5-10 ನಿಮಿಷಗಳ ನಂತರ ಹದ ಬಿಸಿ ನೀರಿನಲ್ಲಿ ಮುಖ ತೊಳೆದುಕೊಂಡರೆ ತ್ವಚೆ ಮೃದುವಾಗುತ್ತದೆ.

## ವಿನಾಯಕನ ಲೋಕ ಯಾವುದು?



ಸತ್ಯಲೋಕದಲ್ಲಿ ಬ್ರಹ್ಮ, ವೈಕುಂಠದಲ್ಲಿ ಮಹಾವಿಷ್ಣು, ಕೈಲಾಸದಲ್ಲಿ ಮಹೇಶ್ವರ, ಹೀಗೆ ಒಬ್ಬೊಬ್ಬ ದೇವನಿಗೂ ಒಂದೊಂದು ಲೋಕ. ಹಾಗಿದ್ದಲ್ಲಿ ವಿಶ್ವಮಾನ್ಯನಾದ ವಿನಾಯಕನು ಇರುವ ಲೋಕ ಯಾವುದು?

ಇದನ್ನು ತಿಳಿಯಲು ನಾವು ಶ್ರೀ ಗಣೇಶ ಪುರಾಣದ ಉಪಾಸನಾ ಖಂಡದ ಐವತ್ತೊಂದನೇ ಅಧ್ಯಾಯವನ್ನು ನೋಡಬೇಕು. ಶ್ರೀ ಗಣೇಶ ಮೂರ್ತಿಯ ಲೋಕ, ಅದರ ಹೆಸರು, ಆ ಲೋಕ ಸ್ವರೂಪ ಹೇಗಿದೆ ಎಂಬ ಎಲ್ಲಾ ಪ್ರಶ್ನೆಗಳಿಗೂ ಈ ಅಧ್ಯಾಯದಲ್ಲಿ ಪರಿಹಾರ ಲಭಿಸುತ್ತದೆ.

ಪುರಾಣಗಳಲ್ಲಿ ವರ್ಣಿಸಲ್ಪಟ್ಟಿರುವ ಇತರ ಲೋಕಗಳಿಗಿಂತ ಗಣೇಶ ಲೋಕಕ್ಕೆ ಪ್ರತ್ಯೇಕತೆಯ ವೈಶಿಷ್ಟ್ಯವಿದೆ. ಅಂಡಾಂಡ ಪಿಂಡಾಂಡಗಳನ್ನು ಶ್ರೀ ಗಣಪತಿಯ ರೂಪ ಕಲ್ಪನೆಯಲ್ಲಿ ಸಮನ್ವಯ ಮಾಡಿರುವಂತೆ ಗಣೇಶ ಲೋಕದ ನಿರ್ದೇಶನದಲ್ಲೂ ಮಾಡಿರುವುದು ಈ ವೈಶಿಷ್ಟ್ಯ.

ಮುದ್ಗಲ ಮಹರ್ಷಿಗಳು ಶ್ರೀ ಗಣೇಶನ ಲೋಕದ ವರ್ಣನೆಯನ್ನು ಗಣೇಶನ ಪರಮ ಭಕ್ತನಾದ ಕಾಶಿ ರಾಜನಿಗೆ ವಿಸ್ತಾರವಾಗಿ ವರ್ಣಿಸುತ್ತಾ ಗಣೇಶ ದೇವನು ನೆಲೆಸಿರುವ ಲೋಕಕ್ಕೆ 'ಸ್ವಾನಂದ' ಲೋಕವೆಂದು ಹೆಸರು. ಇದನ್ನು ನಿಜಲೋಕ, ದಿವ್ಯಲೋಕವೆಂತಲೂ ಕರೆಯುತ್ತಾರೆ.

ಕಾಶಿ ರಾಜನು ವಿನಾಯಕನ ಅನನ್ಯ ಭಕ್ತ. ಗಣನಾಥನ ವಿರಹ ವ್ಯಥೆಯಲ್ಲಿ ಉಳಿದೆಲ್ಲಾ ದೇಹಧರ್ಮಗಳನ್ನು ತ್ಯಜಿಸಿ, ಹುಚ್ಚನಂತಾಗಿ, ಆತನಿಗೆ 'ಸ್ವಾನಂದ' ಲೋಕದಲ್ಲಿ ವಿನಾಯಕ ದೇವನೊಡನೆ ಸಾಯುಜ್ಯ ಮುಕ್ತಿ ಪಡೆಯುವ ಏಕೈಕವಾದ ಆಕಾಂಕ್ಷೆ ಇತ್ತು. ಅಂತಹ ಕಾರ್ಯಕಾರಣಗಳೊಡನೆ ಕಾಲ ಒದಗಿ ಬಂತು. ಲೋಕದಲ್ಲಿ ದೇವಾಂತಕ ನರಾಂತಕವೆಂಬ ದೈತ್ಯರು ಪ್ರಬಲರಾಗಿ ನಡೆದ ಹಿಂಸಾಚಾರಗಳಿಂದ ಧರ್ಮಕ್ಕೆ ಚ್ಯುತಿ ಬಂದಿತು. ಬ್ರಹ್ಮದೇವರ ವರದಾನದಿಂದ ಮದಿಸಿದ ಅವರನ್ನು ಸಂಹರಿಸಲು ವಿನಾಯಕನು ಕಶ್ಯಪ ಮಹರ್ಷಿಗಳಮನೆಯಲ್ಲಿಅವರಪುತ್ರನಾಗಿಲೀಲಾಮಯ ದೇಹದಿಂದ ಅವತರಿಸಿದನು. ದೈತ್ಯರನ್ನು ಸಂಹರಿಸಿದ ಮೇಲೆ ಬಾಲ ಗಣಪತಿಯು ಪ್ರದರ್ಶಿಸಿದ ಹಲವಾರು ಲೀಲಾ ವಿನೋದಗಳಲ್ಲಿ ಮುಖ್ಯವಾದುದೆಂದರೆ, ಕಾಶಿ ರಾಜನನ್ನು ಬಾಲಕ್ರೀಡೆಗಳಿಂದ ಸಂಪೂರ್ಣವಾಗಿ ತನ್ನೆಡೆಗೆ ಸೆಳೆದಿದ್ದು. ಇದ್ದಕ್ಕಿದ್ದಂತೆ ಕಾಶಿರಾಜನನ್ನು ಬಿಟ್ಟು ತನ್ನ ಸ್ವಾನಂದ ಲೋಕಕ್ಕೆ ಸೇರಿಕೊಂಡನು ಬಾಲ ಗಣಪತಿ. ಆದರೆ ಭಕ್ತ ಪರಾಧೀನನಾದ ಭಗವಂತನಿಗೆ ಸ್ವಾನಂದ ಲೋಕದಲ್ಲೂ ನೆಮ್ಮದಿ ಸಿಕ್ಕಲಿಲ್ಲ, ಕೊನೆಗೆ ಪ್ರಮೋದ ಮತ್ತು ಆಮೋದರೆಂಬ ತನ್ನ ದೂತರನ್ನು ಕಳುಹಿಸಿ, ಕಾಶಿರಾಜನನ್ನು ದಿವ್ಯ ವಿಮಾನದಲ್ಲಿ ಕರೆಸಿಕೊಂಡು, ಸ್ವಾನಂದ ಲೋಕದಲ್ಲಿ ಸಾಯುಜ್ಯ ಮುಕ್ತಿಯನ್ನು ಕರುಣಿಸುತ್ತಾನೆ. ಕಾಶಿರಾಜನು ದಿವ್ಯ ವಿಮಾನದಲ್ಲಿ ಅಂತರಿಕ್ಷ ಮಾರ್ಗವಾಗಿ ಪ್ರಯಾಣ ಮಾಡುವಾಗ, ಮುದ್ಗಲನು ಕಾಶಿರಾಜನಿಗೆ ಸ್ವಾನಂದ ಲೋಕದ ಬಗ್ಗೆ ವರ್ಣಿಸಿದ ವಿವರಣೆ ಇದೆ.

ಈ ಸ್ವಾನಂದ ಭವನಕ್ಕೆ (ಗಣೇಶನ ಸ್ವಗೃಹಕ್ಕೆ) ವೇದಾಧ್ಯಯನ, ಮಹಾದಾನ, ತಪಸ್ಸು, ಯಜ್ಞ, ವ್ರತ, ಜಪಗಳಿಂದ ಸಹ ಈ ಲೋಕ ದೊರೆಯುವಂಥದ್ದಲ್ಲ. ನಿತ್ಯವೂ ಭಕ್ತಿಯಿಂದ ಮಾಡುವ ಶ್ರೀ ವಿನಾಯಕನ ಸೇವೆಯಿಂದ ಮಾತ್ರ ಈ ದುಃಖ ಮೋಹಗಳಿಲ್ಲದ ಲೋಕವು ಲಭಿಸುವುದು. ಅಂದರೆ ಶ್ರೀ ಗಣೇಶನಿಗೆ ಬೇಕಾಗಿರುವುದು ನಿಷ್ಕಲ್ಮಶವಾದ, ನಿರ್ಮಲವಾದ, ನಿಜವಾದ ಭಕ್ತಿಯೇ ಹೊರತು ಬೇರೇನೂ ಅಲ್ಲ.

'ಸ್ವಾನಂದ ಲೋಕ' ದವರೆಗೆ ಇರುವ ಭೂತ (ಪಿಶಾಚಿ), ದಾನವ, ಗಂಧರ್ವ, ಇಂದ್ರ, ಅಗ್ನಿ, ಯಮ, ಕುಬೇರ, ವರುಣ, ವಾಯು, ಸೂರ್ಯ, ಚಂದ್ರ, ನಕ್ಷತ್ರ, ಗೋ, ಸತ್ಯ, ವೈಕುಂಠ, ಕೈಲಾಸವೇ ಮೊದಲಾದ '21' ಲೋಕಗಳ ಬಳಿಕ 'ಶೂನ್ಯ' ಲೋಕವೆಂಬ ಲೋಕದಲ್ಲಿ ಸೂರ್ಯ-ಚಂದ್ರರಿಲ್ಲ. ಪುಣ್ಯಜೀವಿಗಳ ಪುಣ್ಯದ ಬೆಳಕಿನಿಂದ ಮಾತ್ರವೇ ಈ ಸ್ಥಾನವನ್ನು ದಾಟಿ 'ಸ್ವಾನಂದ ಲೋಕ' ಕ್ಕೆ ಸಾಗಬೇಕು. ಶೂನ್ಯದ ನಂತರ ಭ್ರಾಮರಿಕ ಶಕ್ತಿಸ್ಥಾನವಿದೆ. ಆಧಾರ ಶಕ್ತಿ ದೇವತೆಯು ಸರ್ವಶಕ್ತಿಮಯಿ. ಆಕೆಯ ಒಂದು ನಿಶ್ವಾಸ ಮಾತ್ರದಿಂದಲೇ ಪರ್ವತಗಳು ತರಗೆಲೆಗಳಂತೆ ಅಲುಗಾಡುತ್ತವೆ.ಈ ಲೋಕವು ಐದು ಸಹಸ್ರ ಯೋಜನೆಗಳಷ್ಟು ವಿಸ್ತಾರವಾದುದು. ರತ್ನಖಚಿತವಾದ ಸುವರ್ಣಭೂಮಿಯಲ್ಲಿ ಹತ್ತು ದಿಕ್ಕುಗಳನ್ನು ಬೆಳಗುತ್ತಾ ಶ್ರೀ ವಿನಾಯಕನು ಸಮಷ್ಟಿ ವ್ಯಷ್ಟಿ ರೂಪ ಜಗದಾತ್ಮಕವಾಗಿ ಇಲ್ಲಿ ನೆಲೆಸಿದ್ದಾನೆ.

ಶ್ರೀಮನ್ನಾರಾಯಣನು ಅನ್ನಮಯ ಕೋಶಕ್ಕೂ, ಶಿವನು ಪ್ರಾಣಮಯ ಕೋಶಕ್ಕೂ, ಪರಾಶಕ್ತಿಯು ಮನೋಮಯ ಕೋಶಕ್ಕೂ, ಸೂರ್ಯನು ವಿಜ್ಞಾನಮಯ ಕೋಶಕ್ಕೂ ಒಡೆಯರಾದರೆ, ಶ್ರೀ ಗಣಪತಿಯು ಆನಂದಮಯ ಕೋಶಕ್ಕೆ ಅಧಿಪತಿಯಾಗಿದ್ದಾನೆ. ಆನಂದ, ಪರಮಾನಂದ, ಬ್ರಹ್ಮಾನಂದಗಳನ್ನು ಬಯಸುವವರು ಗಣಪತಿಯನ್ನು ಉಪಾಸಿಸಬೇಕೆಂದು ತಿಳಿದುಕೊಳ್ಳಬಹುದು. ಶ್ರೀಗಣಪತಿಯ ವಾಸ ಸ್ಥಳವೇ 'ಆನಂದ ಭವನ' 'ಸ್ವಾನಂದ ಭವನ' ಎನ್ನಲ್ಪಡುತ್ತದೆ. ಈತನು ಸ್ವಾನಂದ ಮತ್ತು ಆನಂದ ಎಂಬ ಎರಡು ಸ್ಥಿತಿಗಳಿಗೂ ಅಧಿದೇವತೆಯಾದ್ದರಿಂದ ಈತನಿಗೆ ಸ್ವಾನಂದೇಶ ಎಂಬ ಹೆಸರುಂಟು.

ಈ ಲೋಕದ ತುಂಬೆಲ್ಲಾ ಇಕ್ಷುಸಾರ (ಕಬ್ಬಿನ ರಸದ ಸಮುದ್ರ). ಅದರ ಮಧ್ಯೆ ಸಹಸ್ರ ದಳಗಳ ಶ್ವೇತ ಕಮಲದ ಕರ್ಣಿಕೆಯಲ್ಲಿ ರತ್ನಖಚಿತವಾದ ಸುವರ್ಣ ಮಂಚವು ಶೋಭಿಸುತ್ತದೆ. ಆ ಮಂಚದ ಮೇಲೆ ಬಾಲಸ್ವರೂಪಿಯೂ, ದಿವ್ಯಾಲಂಕಾರಭೂಷಿತನೂ, ಹಿಮಕರ್ಪೂರಕೋಮಲಶರೀರವುಳ್ಳ ರಕ್ತವರ್ಣದ ಪೀತಾಂಬರವನ್ನು ಧರಿಸಿದ ಕಸ್ತೂರಿ ತಿಲಕವೇ ಮೊದಲಾದ ಸುಗಂಧ ದ್ರವ್ಯಾರ್ಚಿತನೂ, ಅರ್ಧಚಂದ್ರ, ಕಿರೀಟ ಮತ್ತು ಮಣಿ ಮಾಣಿಕ್ಯಾದಿ ಹೊನ್ನಾಭರಣ ಧರಿಸಿದ, ಅನಂತ ಕೋಟಿ ಸೂರ್ಯಪ್ರಕಾಶದ ತ್ರಿನೇತ್ರಧಾರಿಯಾದ, ಶಯನಭಂಗಿಯಲ್ಲಿ ಇರುವ (ಯೋಗನಿದ್ರಾರೂಢನಾದ) ಶ್ರೀ ವಿನಾಯಕಸ್ವಾಮಿಯ ದರ್ಶನವು ಪರಮ ಪಾವನೆ ಗಂಗೆಯಂತೆ ತನ್ನ ಭಕ್ತರ ಸಕಲ ಪಾಪಗಳನ್ನು ಸ್ಮರಣೆ ಮಾತ್ರದಿಂದ ಪರಿಹರಿಸುವನಾಗಿ ಅಲ್ಲಿ ವ್ಯಕ್ತನಾಗಿರುವನು, ವಿರಾಜಿಸುತ್ತಿರುವನು. ಸರ್ವ ಸಿದ್ಧಿಗಳಿಗೂ ಕಾರಣರಾದ ಸಿದ್ಧಿ-ಬುದ್ಧಿ ದೇವಿಯರಿಂದ ಪಾದಸೇವನೆಗೊಳ್ಳುತ್ತಾ, ಅಣಿಮಾ-ಗರಿಮಾ ದೇವಿಯರು ಶ್ವೇತಚಾಮರಸೇವೆಗೈಯುತ್ತಾ, ಜ್ವಾಲಿನಿ-ತೇಜಿನಿ ದೇವಿಯರೀರ್ವರೂ ದೇವದೇವನ ಎರಡೂ ಪಾರ್ಶ್ವಗಳಲ್ಲಿಯೂ ಪುಷ್ಪಾರ್ಚನೆಗೈಯುತ್ತಾ ಛತ್ರಿಯನ್ನು ಹಿಡಿದು ಶೋಭಿಸುತ್ತಿರುವರು. ಮತ್ತು ಮಹಿಮ-ಪ್ರತಿಮೆಯರು ದೇವನ ದೃಷ್ಟಿಗೋಚರವಾಗಿ ಸಮೀಪದಲ್ಲೇ ರತ್ನಖಚಿತವಾದ ಸುವರ್ಣ ಜಲಪಾತ್ರೆಯನ್ನು, ಗಂಡೂಷ ಪಾತ್ರೆಯನ್ನು ಹಿಡಿದು ನಿಂತಿರುವರು. ಸಾಮವೇದ ಪುರುಷರು ಬಂದು, ನಿಂತು, ಶ್ರೀ ಗಣೇಶನ ಮಹಿಮಾ ಗುಣಗಾನವನ್ನು ಮಾಡುತ್ತಿರುತ್ತಾರೆ. ಎಲ್ಲಾ ಶಾಸ್ತ್ರಗಳು, ಇತಿಹಾಸ ಪುರಾಣಗಳು ಮೂರ್ತಿವತ್ತಾಗಿ ಬಂದು, ಶ್ರೀ ಗಣೇಶನ ದಿವ್ಯ ಮಹಿಮೆಯನ್ನು ಕೊಂಡಾಡುತ್ತಿರುತ್ತವೆ.ಈ ಎಲ್ಲಾ ರಸಮಯ ಸನ್ನಿವೇಶಗಳನ್ನೊಳಗೊಂಡ 'ಸ್ವಾನಂದ' ಲೋಕವನ್ನು ಶ್ರೀ ಗಣೇಶನ ಅನುಗ್ರಹದೊಡನೆ ಮೂರ್ತರೂಪದಲ್ಲಿ ಸಾಂಪ್ರದಾಯಿಕ ಹೊಯ್ಸಳ ಶೈಲಿಯಲ್ಲಿ 'ಸಿಂಹದ್ವಾರ' ದ ಒಡಗೂಡಿದ ದೇವಾಲಯವು ಬೆಂಗಳೂರಿಗೆ ಅನತಿ ದೂರದಲ್ಲಿರುವ ಕನಕಪುರ ರಸ್ತೆಯ ಅಗರ ತಾತಗುಣಿ ಗ್ರಾಮದ ಪ್ರಶಾಂತ ವಾತಾವರಣದ 'ಶ್ರೀ ಸ್ವಾನಂದಾಶ್ರಮ' ದ ಆವರಣದಲ್ಲಿ ನಿರ್ಮಿಸುವ ಪ್ರಯತ್ನವು ಗಣೇಶ ಭಕ್ತಾಭಿಮಾನಿಗಳ ಸಹಕಾರ ದೊಡನೆ ಸೋಂದಾ ಸ್ವರ್ಣವಲ್ಲಿ ಮಠದ ಶ್ರೀಶ್ರೀ ಮದ್ ಗಂಗಾಧರೇಂದ್ರ ಸರಸ್ವತಿ ಮಹಾಸ್ವಾಮಿಗಳ ಮಾರ್ಗದರ್ಶನದಲ್ಲಿ ಲೋಕಾರ್ಪಣೆಗೊಂಡು ವಿನಾಯಕ ಸದ್ಭಕ್ತಿ ತಾಣವಾಗಿದೆ.

## ರಾಶಿ ಭವಿಷ್ಯ



ಜಯಶ್ರೀ.ಬಿ.ಆರ್
ಖ್ಯಾತ ಜ್ಯೋತಿಷಿ
ದೂರವಾಣಿ-9964739507
www.jyotishyavaastu.com

**ಮೇಷ:** ಮಕ್ಕಳಿಂದ ಅನುಕೂಲ, ಆರೋಗ್ಯದಲ್ಲಿ ಏರುಪೇರು, ಕಾನೂನುಬಾಹಿರ ಚಟುವಟಿಕೆಗಳು, ದೇವತಾ ಕಾರ್ಯಗಳಿಗೆ ಅಡೆತಡೆ.

**ವೃಷಭ:** ಸಂಗಾತಿಯಿಂದ ನೋವು, ಆಕಸ್ಮಿಕ ಘಟನೆ, ನಷ್ಟ, ಯಂತ್ರೋಪಕರಣಗಳಿಂದ ಪೆಟ್ಟು.

**ಮಿಥುನ:** ಆರೋಗ್ಯದಲ್ಲಿ ವ್ಯತ್ಯಾಸ, ಸ್ನೇಹಿತರಿಂದ ಸಂಕಷ್ಟ, ಪಾಲುದಾರಿಕೆಯಲ್ಲಿ ನಷ್ಟ, ಸಂಗಾತಿಯಿಂದ ನೋವು.

**ಕಟಕ:** ಆರ್ಥಿಕ ನಷ್ಟ, ಸ್ವಯಂಕೃತ ಅಪರಾಧದಿಂದ ನೋವು, ಅವಕಾಶಗಳು ತಪ್ಪುವುದು, ಅಧಿಕಾರಿಗಳಿಂದ ಸಮಸ್ಯೆ.

**ಸಿಂಹ:** ಕೆಲಸ ಕಾರ್ಯಗಳಲ್ಲಿ ಜಯ, ಅನಿರೀಕ್ಷಿತ ಪ್ರಯಾಣ, ಸ್ಪರ್ಧಾತ್ಮಕ ಚಟುವಟಿಕೆಗಳಲ್ಲಿ ಯಶಸ್ಸು, ಭೂ ವ್ಯವಹಾರಗಳಿಂದ ಧನಾಗಮನ.

**ಕನ್ಯಾ:** ಆಕಸ್ಮಿಕ ಅಪಘಾತ ಎಚ್ಚರಿಕೆ, ಬಂಧು ಬಾಂಧವರಿಂದ ನಷ್ಟ, ಕೋರ್ಟ್ ಮೆಟ್ಟಿಲೇರುವ ಸಂದರ್ಭ.

**ತುಲಾ:** ಸಂಗಾತಿಯಿಂದ ನೋವು, ಪಾಲುದಾರಿಕೆಯಲ್ಲಿ ಲಾಭ, ಕೆಲಸದ ನಿಮಿತ್ತ ಪ್ರಯಾಣ.

**ವೃಶ್ಚಿಕ:** ಉದ್ಯೋಗದಿಂದ ಧನಾಗಮನ, ಅಧಿಕಾರಿಗಳಿಂದ ಪ್ರಶಂಸೆ, ಗೌರವಕ್ಕೆ ಧಕ್ಕೆ, ವ್ಯವಹಾರದಲ್ಲಿ ಸಮಸ್ಯೆ.

**ಧನಸ್ಸು:** ಪ್ರೀತಿ-ಪ್ರೇಮ ವಿಷಯದಲ್ಲಿ ಜಯ, ಮಕ್ಕಳಿಂದ ಅನುಕೂಲ, ದೇವತಾ ಕಾರ್ಯಗಳಲ್ಲಿ ತೊಡಗುವಿರಿ, ತಂದೆಯಿಂದ ಅನುಕೂಲ.

**ಮಕರ:** ಕೋರ್ಟ್ ಮೆಟ್ಟಿಲೇರುವ ಸಂದರ್ಭ, ವೇಗದ ಚಾಲನೆಯಿಂದ ಸಮಸ್ಯೆ, ನಿದ್ರಾಭಂಗ, ಉನ್ನತ ಅಧಿಕಾರಿಗಳಿಂದ ಸಮಸ್ಯೆ.

**ಕುಂಭ:** ಸಂಗಾತಿಯಿಂದ ಅನುಕೂಲ, ಪಾಲುದಾರಿಕೆಯಲ್ಲಿ ಲಾಭ, ಉದ್ಯೋಗ ಲಾಭ.

**ಮೀನ:** ಮಕ್ಕಳಿಂದ ಧನಾಗಮನ, ಪ್ರಯಾಣದಲ್ಲಿ ಅಡೆತಡೆ, ಆರೋಗ್ಯದಲ್ಲಿ ವ್ಯತ್ಯಾಸ, ಮನೆಯ ವಾತಾವರಣದಲ್ಲಿ ಆತಂಕ.

## ಜಾವಾದಿಂದ 350 ಅಲ್ಫಾ2 ಎಂಜಿನ್‌ನ ನಿಯೊ 42 ಎಫ್ ಜೆ ಬಿಡುಗಡೆ



ಭಾರತದಲ್ಲಿ ಕ್ಲಾಸಿಕ್ ವಿಭಾಗ ಪರಿಚಯಿಸುವಲ್ಲಿ ಮೊದಲ ವಾಹನ ತಯಾರಿಕಾ ಕಂಪನಿ ಎನ್ನುವ ಹೆಗ್ಗಳಿಕೆಯ ಜಾವಾ ಯೆಜ್ಡಿ ಮೋಟರ್ಸೈಕಲ್ಸ್, ಜಾವಾ 42 ಲೈಫ್ ಸರಣಿಯ ಸಂಪೂರ್ಣ ಹೊಸದಾದ ಮೋಟರ್ಸೈಕಲ್ ಜಾವಾ 42 ಎಫ್ಜೆ (ಎಚಿತಿಚಿ 42 ಈಎ) ಅನ್ನು ದೇಶಿ ಮಾರುಕಟ್ಟೆಗೆ ಹೆಮ್ಮೆಯಿಂದ ಪರಿಚಯಿಸಿದೆ. 42 ಮತ್ತು 42 ಬಾಬರ್ನ ಯಶಸ್ಸಿನ ಆಧಾರದ ಮೇಲೆ ಜಾವಾ 42 ಎಫ್ಜೆ ಪರಿಚಯಿಸುತ್ತಿರುವುದು, ?42 ಲೈಫ್? ಥೀಮ್ನಾಗಿ ಅತ್ಯಾಕರ್ಷಕ ಹೊಸ ಅಧ್ಯಾಯ ಆರಂಭಿಸಿದೆ. ಇದು ಉತ್ತಮ ವಿನ್ಯಾಸ ಮತ್ತು ಸರಿಸಾಟಿಯಿಲ್ಲದ ಸವಾರಿ ಅನುಭವ ಬದ್ಧತೆಯ ಸಂಭ್ರಮಾಚರಿಸುತ್ತದೆ.

ಈ ಮೋಟರ್ಸೈಕಲ್‌ನ ಹೆಸರನ್ನು ಜಾವಾದ ದಾರ್ಶನಿಕ ಸಂಸ್ಥಾಪಕ ಫ್ರಾಂಟಿಸೆಕ್ ಜೇನೆಕ್ ಅವರಿಂದ ಪ್ರೇರಿತವಾಗಿದೆ. ಇದು ಇಂದಿನ ಮೋಟರ್ಸೈಕಲ್ ಸವಾರಿ ಉತ್ಸಾಹಿಗಳಿಗೆ ಗಮನಸೆಳೆಯುವ, ಸದೃಢ ಸ್ವರೂಪದ ಆಧುನಿಕ ಸವಾರಿ ಅನುಭವ ನೀಡುವ ಉದ್ದೇಶ ಒಳಗೊಂಡಿದೆ. 42 ಲೈಫ್ ಸರಣಿಗೆ ಈ ಹೊಸ ಸೇರ್ಪಡೆಯೊಂದಿಗೆ, ಜಾವಾ 2024 ರಲ್ಲಿ ಈ ವಿಭಾಗದಲ್ಲಿ ಹೊಸ ಮಾನದಂಡ ನಿಗದಿಪಡಿಸಲು ವಿಶಿಷ್ಟ ವಿನ್ಯಾಸ, ಸಾಮರ್ಥ್ಯ, ಉಪಸ್ಥಿತಿ ಮತ್ತು ಅತ್ಯಾಧುನಿಕ ತಂತ್ರಜ್ಞಾನ ಸಂಯೋಜಿಸುವ ನಿಟ್ಟಿನಲ್ಲಿ ದೊಡ್ಡ ದಾಪುಗಾಲು ಹಾಕುತ್ತಿದೆ.ಮೋಟರ್ಸೈಕಲ್ ಎಂಜಿನಿಯರಿಂಗ್ಗೆ ಸಂಬಂಧಿಸಿದಂತೆ 2024 ಜಾವಾ 42 ನಮ್ಮ ವಿನ್ಯಾಸ ಮುಖ್ಯವಾಗಿರುವ ವಿಧಾನವನ್ನು ಸಾಕಾರಗೊಳಿಸುತ್ತಿದೆ? ಎಂದು ಜಾವಾ ಯೆಜ್ಡಿ ಮೋಟರ್ಸೈಕಲ್ನ ಸಹ-ಸಂಸ್ಥಾಪಕ ಅನುಪಮ್ ಥರೇಜಾ ಅವರು ಹೇಳಿದ್ದಾರೆ.ನಾವು ಈ ಬೈಕ್ನ ವಿನ್ಯಾಸ ರೂಪಿಸಿ ತಯಾರಿಸಲು ಅವಸರ ಮಾಡದೆ ಸಾಕಷ್ಟು ಸಮಯ ತೆಗೆದುಕೊಂಡಿದ್ದೇವೆ. 'ಬೆಲೆ-ಕಾರ್ಯಕ್ಷಮತೆ' ಅಳತೆಗೋಲಿಗೆ ಸಂಬಂಧಿಸಿದ ಸ್ಥಾಪಿತ ನಂಬಿಕೆಗಳನ್ನು ನಾವು ಹುಸಿ ಮಾಡಿದ್ದೇವೆ. ತೀಕ್ಷ್ಣ ಕಾರ್ಯಕ್ಷಮತೆ, ಉಜ್ವಲ ಸ್ವರೂಪ ಮತ್ತು ನಿಖರ ಎಂಜಿನಿಯರಿಂಗ್ನ ಉತ್ತಮ ಮಿಶ್ರಣವನ್ನು ನಾವಿಲ್ಲಿ ಸಾಧಿಸಿದ್ದೇವೆ. ಭಾರತದಲ್ಲಿ ನಿಯೊ-ಕ್ಲಾಸಿಕ್ನ ಪ್ರವರ್ತಕರಾಗಿ, 42 ಎಫ್ಜೆ ಇದು ನಮ್ಮ ಸವಾಲು ಸ್ವೀಕರಿಸಿದ ಉತ್ಸಾಹ ಹಾಗೂ ಸಂಪೂರ್ಣ ಹೊಸ ವಿಧಾನ ಅಳವಡಿಸಿಕೊಂಡಿರುವುದಕ್ಕೆ ನಿದರ್ಶನವಾಗಿದೆ? ಎಂದು ಹೇಳಿದ್ದಾರೆ.

'42 ಲೈಫ್' ಸರಣಿಯ ವಿಸ್ತರಣೆಯೊಂದಿಗೆ ಜಾವಾ ಮೋಟರ್ಸೈಕಲ್, ಜಾಣ ಸವಾರರನ್ನು ಆಕರ್ಷಿಸಲು ವಿವಿಧ ಬಗೆಯ ಮೋಟರ್ಸೈಕಲ್ಗಳಲ್ಲಿ ವಿನ್ಯಾಸ, ಬೆಲೆ ಮತ್ತು ಕಾರ್ಯಕ್ಷಮತೆಯಲ್ಲಿ ಆದರ್ಶ ಸಮತೋಲನ ಕಾಯ್ದುಕೊಂಡಿದೆ. ಇದು ಕೇವಲ ಮೋಟರ್ಸೈಕಲ್ಗಿಂತ ಹೆಚ್ಚಿನದಾಗಿದೆ. ಇದು ನಿಯೊ-ಕ್ಲಾಸಿಕ್ ವರ್ಗದ ಮರುವ್ಯಾಖ್ಯಾನವಾಗಿದೆ.

# ರೈಲು ಅಪಘಾತದಿಂದ ಪಾರಾದ ಸಿಎಂ ಚಂದ್ರಬಾಬು ನಾಯ್ಡು!



**ಹೈದರಾಬಾದ್:** ವಿಜಯವಾಡ ಭೇಟಿ ವೇಳೆ ಕೂದಲೆಳೆ ಅಂತರದಲ್ಲಿ ರೈಲು ಅಪಘಾತದಿಂದ ಸಿಎಂ ಚಂದ್ರಬಾಬು ನಾಯ್ಡು ಪಾರಾಗಿದ್ದಾರೆ. ಆಂಧ್ರಪ್ರದೇಶದ ಸಿಎಂ ಚಂದ್ರಬಾಬು ನಾಯ್ಡು ಮತ್ತು ಅವರ ತಂಡವು ರೈಲ್ವೇ ಹಳಿಯೊಂದರ ಕೆಳಗೆ ಜಲಾವೃತಗೊಂಡಿರುವ ಹೊಳೆಯನ್ನು ವೀಕ್ಷಿಸಲು ನಡೆದುಕೊಂಡು ಹೋಗುತ್ತಿದ್ದಾಗ ವೇಗವಾಗಿ ರೈಲ್ವೆ ಹಳಿಯ ಮೇಲೆ ರೈಲು ಬಂದಿದೆ. ಆ ವೇಳೆ ಈ ಘಟನೆ ಸಂಭವಿಸಿದೆ.

ಇದ್ದಕ್ಕಿದ್ದಂತೆ, ಒಂದು ರೈಲು ವಿರುದ್ಧ ದಿಕ್ಕಿನಿಂದ ಸಿಎಂ ಚಂದ್ರಬಾಬು ನಾಯ್ಡು ಅವರನ್ನು ಸಮೀಪಿಸಿತು. ಆಗ ಅವರ ಜೊತೆಗಿದ್ದ ಅಧಿಕಾರಿಗಳು ಮತ್ತು ಭದ್ರತಾ ಸಿಬ್ಬಂದಿ ರೈಲು ಮಾರ್ಗದಿಂದ ತ್ವರಿತವಾಗಿ ಹಿಂದೆ ಸರಿದಿದ್ದರಿಂದ ದುರಂತವೊಂದು ತಪ್ಪಿದಂತಾಗಿದೆ. ರೈಲು ಹಾದುಹೋದ ನಂತರ, ಆ ತಂಡವು ತಮ್ಮ ತಪಾಸಣೆಯನ್ನು ಮುಂದುವರೆಸಿತು.

ಸಿಎಂ ಚಂದ್ರಬಾಬು ನಾಯ್ಡು ಅವರು ಕಳೆದ ಕೆಲವು ದಿನಗಳಿಂದ ವಿಜಯವಾಡದಲ್ಲಿಯೇ ಉಳಿದುಕೊಂಡಿದ್ದು, ನಗರ ಮತ್ತು ಇತರ ಸುತ್ತಮುತ್ತಲಿನ ಪ್ರದೇಶಗಳಲ್ಲಿ ರಕ್ಷಣಾ ಕಾರ್ಯಾಚರಣೆಗಳು ಮತ್ತು ಪರಿಹಾರ ಪ್ರಯತ್ನಗಳು ಮುಂದುವರಿದಿವೆ.

# ಪಾನ್ ಸವಿಯಲು ಕಾಶಿಗೆ ಬನ್ನಿ



**ಸಿಂಗಾಪುರ:** ಪಾನ್ನ ಸ್ವಾದವನ್ನು ಸವಿಯಲು ಬಯಸುವಿರಾದರೆ ಕಾಶಿ(ವಾರಣಾಸಿ)ಗೆ ಬನ್ನಿ ಎಂದು ಪ್ರಧಾನಿ ನರೇಂದ್ರ ಮೋದಿ ಗುರುವಾರ ಜಾಗತಿಕ ಹೂಡಿಕೆದಾರರನ್ನು ಆಹ್ವಾನಿಸಿದ್ದಾರೆ. ಸಿಂಗಾಪುರದಲ್ಲಿ ಉದ್ಯಮಿಗಳ ಸಮಾವೇಶ ವನ್ನುದ್ದೇಶಿಸಿ ಮಾತನಾಡಿದ ಅವರು 'ಭಾರತದಲ್ಲಿ ಪಾನ್ ಬಗ್ಗೆ ನಡೆಯುವ ಚರ್ಚೆ ವಾರಣಾಸಿಯ ವಿನಹ ಅಪೂರ್ಣವಾಗುತ್ತದೆ. ನಾನು ಆ ಕ್ಷೇತ್ರದ ಸಂಸದ. ನಿಮಗೆ ಪಾನ್ನ ಸ್ವಾದವನ್ನು ಸವಿಯಬೇಕಿದ್ದರೆ ನೀವು ಕಾಶಿಯಲ್ಲಿ ಹೂಡಿಕೆ ಮಾಡಬೇಕು' ಎಂದರು.

ಹೂಡಿಕೆಯನ್ನು ಉತ್ತೇಜಿಸಲು 'ಭಾರತದಲ್ಲಿ ಹೂಡಿಕೆ' ಕಚೇರಿಗಳನ್ನು ವಿದೇಶಗಳಲ್ಲಿ ತೆರೆಯಲಾಗುವುದು. ಒಂದು ಕಚೇರಿ ಸಿಂಗಾಪುರದಲ್ಲೂ ಕಾರ್ಯಾರಂಭ ಮಾಡಲಿದೆ. ಇದು ಸಿಂಗಾಪುರದ ಹೂಡಿಕೆದಾರರಿಗೆ ವಿವಿಧ ಕ್ಷೇತ್ರಗಳಲ್ಲಿ ಮಾಹಿತಿ ನೀಡುವ ಕೇಂದ್ರವಾಗಲಿದೆ ಎಂದು ಮೋದಿ ಹೇಳಿದ್ದಾರೆ. ಸಿಂಗಾಪುರದ ವ್ಯಾಪಾರ ಮುಖಂಡರು ಮತ್ತು ಸಿಇಒಗಳನ್ನು ಭೇಟಿ ಮಾಡಿದ ಮೋದಿ ಹೂಡಿಕೆ ಮತ್ತು ನಾವೀನ್ಯತೆಯನ್ನು ಉತ್ತೇಜಿಸುವಲ್ಲಿ ಭಾರತದಲ್ಲಿ ನಡೆಯುತ್ತಿರುವ ಸುಧಾರಣೆಗಳನ್ನು ವಿವರಿಸಿದರು ಎಂದು ವಿದೇಶಾಂಗ ಇಲಾಖೆ 'ಎಕ್ಸ್'ನಲ್ಲಿ ಪೋಸ್ಟ್ ಮಾಡಿದೆ.

# ಮೋದಿ ಬೈಡನ್, ದೂರವಾಣಿ ಮಾತುಕತೆ




**ವಾಷಿಂಗ್ಟನ್:** ಕಳೆದ ವಾರ ಭಾರತದ ಪ್ರಧಾನಿ ಮೋದಿ ಅವ ರೊಂದಿಗೆ ದೂರವಾಣಿಯಲ್ಲಿ ಮಾತನಾಡಿದ್ದ ಅಮೆರಿಕ ಅಧ್ಯಕ್ಷ ಜೋ ಬೈಡನ್, ಬಾಂಗ್ಲಾದೇಶದ ಜನರ ಸುರಕ್ಷೆ ಮತ್ತು ಅಲ್ಲಿನ ಪ್ರಜಾಪ್ರಭುತ್ವದ ಭವಿಷ್ಯದ ಬಗ್ಗೆ ಕಳವಳ ವ್ಯಕ್ತಪಡಿಸಿದ್ದರೆಂದು ಶ್ವೇತಭವನ ಗುರುವಾರ ತಿಳಿಸಿದೆ.

ಮೋದಿ ಹಾಗೂ ಬೈಡೆನ್ ತಮ್ಮ ಮಾತುಕತೆಯಲ್ಲಿ ಬಾಂಗ್ಲಾದೇಶದ ಬಗ್ಗೆ ತಮ್ಮ ಕಳವಳ ಗಳನ್ನು ಹಂಚಿಕೊಂಡಿದ್ದಾರೆ ಎಂದಿದೆ. ಉಭಯ ನಾಯಕರ ನಡುವಿನ ದೂರವಾಣಿ ಸಂಭಾಷಣೆ ಬಗ್ಗೆ ಆ.26ರಂದು ಟ್ವೀಟ್ ಮಾಡಿದ್ದ ಶ್ವೇತಭವನ ಬಾಂಗ್ಲಾ ಬಗ್ಗೆ ಉಲ್ಲೇಖಿಸಿರಲಿಲ್ಲ. ಆದರೆ ಪ್ರಧಾನಿ ಮೋದಿ ಕಚೇರಿ ಈ ಮಾಹಿತಿ ಹಂಚಿಕೊಂಡಿತ್ತು.

# ಸಿಂಗಾಪುರದಲ್ಲಿ ತಿರುವಳ್ಳುವರ್ ಸಾಂಸ್ಕೃತಿಕ ಕೇಂದ್ರ ಸ್ಥಾಪನೆ: ನರೇಂದ್ರ ಮೋದಿ ಘೋಷಣೆ



**ಸಿಂಗಾಪುರ:** ತಮಿಳು ಭಾಷೆ, ನಾಗರಿಕತೆ ಮತ್ತು ಸಂಸ್ಕೃತಿಯನ್ನು ಉತ್ತೇಜಿಸುವ ಮತ್ತು ನಿರ್ವಹಿಸುವ ಉದ್ದೇಶದಿಂದ ಸಿಂಗಾಪುರದಲ್ಲಿ ತಿರುವಳ್ಳುವರ್ ಸಾಂಸ್ಕೃತಿಕ ಕೇಂದ್ರವನ್ನು ಸ್ಥಾಪಿಸುವುದಾಗಿ ಪ್ರಧಾನಿ ನರೇಂದ್ರ ಮೋದಿ ಗುರುವಾರ ಹೇಳಿದ್ದಾರೆ.

ಭಾರತದ ಪ್ರಥಮ ತಿರುವಳ್ಳುವರ್ ಸಾಂಸ್ಕೃತಿಕ ಕೇಂದ್ರ ಸಿಂಗಾಪುರದಲ್ಲಿ ಆರಂಭಗೊಳ್ಳಲಿದೆ. ಮಹಾನ್ ಸಂತ ತಿರುವಳ್ಳುವರ್ ಅತೀ ಪುರಾತನ ಭಾಷೆಯಲ್ಲಿ ಪ್ರಪಂಚಕ್ಕೆ ಮಾರ್ಗದರ್ಶಿ ಚಿಂತನೆಗಳನ್ನು ನೀಡಿದ್ದಾರೆ. ಅವರು ಸುಮಾರು 2 ಸಾವಿರ ವರ್ಷಗಳ ಹಿಂದೆ ಬರೆದ 'ತಿರುಕ್ಕುರಲ್'ನಲ್ಲಿ ಉಲ್ಲೇಖಿಸಿರುವ ಚಿಂತನೆಗಳು ಈಗಿನ ಕಾಲಕ್ಕೂ ಪ್ರಸ್ತುತವೆನಿಸುತ್ತದೆ ಎಂದು ಮೋದಿ ಹೇಳಿದ್ದಾರೆ. ಸಿಂಗಾಪುರದ ಪ್ರಧಾನಿ ಲಾರೆನ್ಸ್ ವೋಂಗ್ ಜತೆಗಿನ ಸಭೆಯಲ್ಲಿ ದ್ವಿಪಕ್ಷೀಯ ಸಂಬಂಧಗಳನ್ನು ಬಲಪಡಿಸುವ ಕುರಿತು ಚರ್ಚೆ ನಡೆಸಲಾಯಿತು. ಡಿಜಿಟಲ್ ತಂತ್ರಜ್ಞಾನ, ಸೆಮಿಕಂಡಕ್ಟರ್ ಗಳು, ಕೌಶಲ್ಯ ಅಭಿವೃದ್ಧಿ ಮತ್ತು ಆರೋಗ್ಯ ರಕ್ಷಣೆ ಕ್ಷೇತ್ರಗಳಲ್ಲಿ ಸಹಕಾರ ಹೆಚ್ಚಿಸಲು ಉಭಯ ಮುಖಂಡರು ಸಮ್ಮತಿಸಿದರು ಮತ್ತು ಈ ಕ್ಷೇತ್ರಗಳಲ್ಲಿ 4 ಒಪ್ಪಂದಗಳಿಗೆ ಸಹಿ ಹಾಕಲಾಗಿದೆ. ಸುಧಾರಿತ ಉತ್ಪಾದನೆ, ಸಂಪರ್ಕ, ಡಿಜಿಟಲೀಕರಣ, ಆರೋಗ್ಯ, ರಕ್ಷಣೆಯ ಕ್ಷೇತ್ರಗಳನ್ನು ಒಳಗೊಂಡ ದ್ವಿಪಕ್ಷೀಯ ಸಂಬಂಧದ ವಿವಿಧ ಅಂಶಗಳನ್ನು ಅವರು ವ್ಯಾಪಕವಾಗಿ ಪರಿಶೀಲಿಸಿದರು. ಎರಡೂ ದೇಶಗಳ ನಡುವೆ ವ್ಯಾಪಾರ ಮತ್ತು ಹೂಡಿಕೆಗಳ ಹರಿವನ್ನು ಮತ್ತಷ್ಟು ವಿಸ್ತರಿಸಲು ಉಭಯ ಮುಖಂಡರು ನಿರ್ಧರಿಸಿದ್ದಾರೆ ಎಂದು ಭಾರತದ ವಿದೇಶಾಂಗ ಇಲಾಖೆಯ ಮೂಲಗಳು ಹೇಳಿವೆ.

# ಕ್ರಿಕೆಟಿಗ ರವೀಂದ್ರ ಜಡೇಜಾ ಬಿಜೆಪಿಗೆ ಸೇರ್ಪಡೆ

**ನವದೆಹಲಿ:** ಈ ವರ್ಷ ಭಾರತ ಟಿ20 ವಿಶ್ವಕಪ್ ಜಯಿಸಿದ ನಂತರ ಟಿ20 ಅಂತಾರಾಷ್ಟ್ರೀಯ ಪಂದ್ಯಗಳಿಂದ ನಿವೃತ್ತಿ ಹೊಂದಿದ ಕ್ರಿಕೆಟಿಗ ರವೀಂದ್ರ ಜಡೇಜಾ ಬಿಜೆಪಿ ಸೇರುವ ಮೂಲಕ ರಾಜಕೀಯ ಪಯಣ ಆರಂಭಿಸಿದ್ದಾರೆ.

ರವೀಂದ್ರ ಜಡೇಜಾ ಬಿಜೆಪಿ ಸೇರಿರುವ ಬಗ್ಗೆ ಅವರ ಪತ್ನಿ, ಗುಜರಾತ್ ಬಿಜೆಪಿ ಶಾಸಕಿ ರಿವಾಬಾ ಜಡೇಜಾ ಘೋಷಣೆ ಮಾಡಿದ್ದಾರೆ.

ಗುರುವಾರ ಎಕ್ಸ್‌ನಲ್ಲಿನ ಪೋಸ್ಟ್‌ನಲ್ಲಿ ರಿವಾಬಾ ಜಡೇಜಾ ಅವರು ಬಿಜೆಪಿ ಸದಸ್ಯರಾಗಿರುವ ರವೀಂದ್ರ ಜಡೇಜಾ ಅವರ ಕಾರ್ಡ್ನ ಫೋಟೋಗಳನ್ನು ಹಂಚಿಕೊಂಡಿದ್ದಾರೆ. ರಿವಾಬಾ ಜಡೇಜಾ 2019 ರಲ್ಲಿ ಬಿಜೆಪಿಗೆ ಸೇರ್ಪಡೆಗೊಂಡರು ಮತ್ತು 2022 ರಲ್ಲಿ ಜಾಮ್ನಗರ ಉತ್ತರ ಕ್ಷೇತ್ರದಿಂದ ಗುಜರಾತ್ ವಿಧಾನಸಭಾ ಚುನಾವಣೆಯಲ್ಲಿ ಸ್ಪರ್ಧಿಸಿದ್ದರು. ರವೀಂದ್ರ ಜಡೇಜಾ ಈ ಸಂದರ್ಭ ಪತ್ನಿಯ ಪರವಾಗಿ ಪ್ರಚಾರ ಮಾಡಿದ್ದರು. ಮತ್ತು ರಿವಾಬಾ ಅವರು ಕ್ಷೇತ್ರದಿಂದ 50,000 ಮತಗಳ ಅಂತರದಿಂದ ಗೆದ್ದಿದ್ದರು.



# ಪಾಕ್ ಜೊತೆಗಿನ 1971ರ ವಿವಾದಗಳ ಇತ್ಯರ್ಥಕ್ಕೆ ಬಾಂಗ್ಲಾ ಸಿದ್ಧ: ಸಚಿವ ನಹೀದ್



**ಢಾಕಾ:** ಪ್ರಜಾಸತ್ತಾತ್ಮಕ ದಕ್ಷಿಣ ಏಷ್ಯಾವನ್ನು ಖಾತರಿಪಡಿಸುವ ಸಲುವಾಗಿ ಪಾಕಿಸ್ತಾನದ ಜತೆಗಿನ 1971ರ ವಿಮೋಚನೆಯ ಯುದ್ಧಕ್ಕೆ ಸಂಬಂಧಿಸಿದ ವಿವಾದಗಳನ್ನು ಇತ್ಯರ್ಥಪಡಿಸಿ, ಉಭಯ ದೇಶಗಳ ನಡುವಿನ ಸಂಬಂಧವನ್ನು ಬಲಗೊಳಿಸಲು ಬಾಂಗ್ಲಾದೇಶ ಸಿದ್ಧ ಎಂದು ಮಧ್ಯಂತರ ಸರ್ಕಾರದ ಪ್ರಸಾರ ಮತ್ತು ಐಟಿ ಖಾತೆ ಸಚಿವ ನಹೀದ್ ಇಸ್ಲಾಂ ಪ್ರಕಟಿಸಿದ್ದಾರೆ.

ಢಾಕಾದಲ್ಲಿರುವ ಪಾಕಿಸ್ತಾನಿ ರಾಯಭಾರಿ ಜತೆ ನಡೆಸಿದ ಸಭೆಯ ಬಳಿಕ ಸಚಿವರು ಈ ಹೇಳಿಕೆ ನೀಡಿದ್ದಾರೆ.

ಮಾಜಿ ಪ್ರಧಾನಿ ಶೇಕ್ ಹಸೀನಾ ಅಧಿಕಾರಾವಧಿಯಲ್ಲಿ, ಅದರಲ್ಲೂ ಮುಖ್ಯವಾಗಿ ಬಾಂಗ್ಲಾದೇಶ ಜಮಾಅತೆ ಇಸ್ಲಾಮಿ ಮುಖಂಡರನ್ನು 1971ರ ಯುದ್ಧಾಪರಾಧದ ಕಾರಣಕ್ಕಾಗಿ ಜೈಲಿಗೆ ತಳ್ಳಿದ ಬಳಿಕ ಉಭಯ ದೇಶಗಳ ನಡುವಿನ ಸಂಬಂಧ ತೀರಾ ಹಳಸಿತ್ತು. ಕಳೆದ ತಿಂಗಳು ಹಸೀನಾ ಪದಚ್ಯುತಿಗೆ ಕಾರಣವಾದ ವಿದ್ಯಾರ್ಥಿ ಚಳವಳಿಯ ಮುಖಂಡರಲ್ಲಿ ಒಬ್ಬರಾದ ನಹೀದ್ ಇಸ್ಲಾಮ್ ಅವರು ಮುಹಮ್ಮದ್ ಯೂನುಸ್ ನೇತೃತ್ವದ ಸರ್ಕಾರದ ಹಿರಿಯ ಮುಖಂಡರು ಹಾಗೂ ಪಾಕಿಸ್ತಾನದ ಹೈಕಮಿಷನ್ ಅಧಿಕಾರಿ ಸೈಯ್ಯದ್ ಅಹ್ಮದ್ ಮಅರೂಫ್ ಜತೆಗೆ ನಡೆಸಿದ ಸರಣಿ ಸಭೆಯ ಬಳಿಕ ಈ ಹೇಳಿಕೆ ನೀಡಿದ್ದಾರೆ.

1971ರ ಪ್ರಶ್ನೆಗಳನ್ನು ಬಗೆಹರಿಸಲು ಪಾಕಿಸ್ತಾನ ಬಯಸಿದೆ ಎಂದು ಸೆಪ್ಟೆಂಬರ್ 1ರಂದು ನಹೀದ್ ಇಸ್ಲಾಂ ಜತೆಗೆ ಸಭೆ ನಡೆಸುವ ವೇಳೆ ಮಅರೂಫ್ ಸ್ಪಷ್ಟಪಡಿಸಿದ್ದರು. ಈ ವಿಷಯವನ್ನು ಚರ್ಚಿಸಲು ಹಿಂದಿನ ಸರ್ಕಾರ ಅವಕಾಶ ನೀಡಿರಲಿಲ್ಲ ಮತ್ತು 1971ರ ಸಮಸ್ಯೆಯನ್ನು ಜೀವಂತವಾಗಿಯೇ ಇರಿಸಿತು ಎಂದು ಅವರು ಆಪಾದಿಸಿದ್ದರು.

# ಜಾರ್ಜಿಯಾ: ಹೈಸ್ಕೂಲ್ ವಿದ್ಯಾರ್ಥಿಯಿಂದ ಗುಂಡಿನ ದಾಳಿ; ನಾಲ್ವರು ಸಾವು




**ಜಾರ್ಜಿಯಾ:** ಹೈಸ್ಕೂಲ್‌ನಲ್ಲಿ ವಿದ್ಯಾರ್ಥಿಯೋರ್ವ ಗುಂಡಿನ ದಾಳಿ ನಡೆಸಿದ್ದು ಘಟನೆಯಲ್ಲಿ ನಾಲ್ವರು ಮೃತಪಟ್ಟಿದ್ದು, 9 ಮಂದಿ ಗಾಯಗೊಂಡಿರುವ ಘಟನೆ ಅಮೆರಿಕದ ಜಾರ್ಜಿಯಾದಲ್ಲಿ ನಡೆದಿದೆ.

ಗುಂಡು ಹಾರಿಸಿದ ವಿದ್ಯಾರ್ಥಿಯನ್ನು ಜಾರ್ಜಿಯಾದ ವಿಂಡರ್ನಲ್ಲಿರುವ ಅಪಾಲಾಚಿ ಹೈಸ್ಕೂಲ್ನ ವಿದ್ಯಾರ್ಥಿ 14 ವರ್ಷದ ಕೋಲ್ಟ್ ಕ್ರೇ ಎಂದು ಗುರುತಿಸಲಾಗಿದೆ.

ಸದ್ಯ ವಿದ್ಯಾರ್ಥಿಯನ್ನು ಬಂಧಿಸಿರೋ ಪೊಲೀಸರು ವಿಚಾರಣೆ ನಡೆಸುತ್ತಿದ್ದಾರೆ.

ಮೃತರಲ್ಲಿ ಇಬ್ಬರು ವಿದ್ಯಾರ್ಥಿಗಳು ಮತ್ತು ಇಬ್ಬರು ಶಿಕ್ಷಕರು ಸೇರಿದ್ದಾರೆ. ಈ ಕುರಿತು ತನಿಖೆ ನಡೆಸುತ್ತಿರುವ ತನಿಖಾಧಿಕಾರಿಗಳು, ವಿದ್ಯಾರ್ಥಿಯೊಬ್ಬ ಗುಂಡಿನ ದಾಳಿ ನಡೆಸಲು ಪ್ರಚೋದನೆ ನೀಡಿದ್ದು ಯಾರು ಎನ್ನುವುದನ್ನು ಪತ್ತೆ ಮಾಡುವುದಾಗಿ ಪೊಲೀಸರು ತಿಳಿಸಿದ್ದಾರೆ.

# ಗಾಝಾದಲ್ಲಿ ಮೊದಲ ಹಂತದ ಪೋಲಿಯೊ ಲಸಿಕೆ ಅಭಿಯಾನ ಯಶಸ್ವಿ



**ಗಾಝಾ:** ಯುದ್ಧಪೀಡಿತ ಗಾಝಾದಲ್ಲಿ ದೊಡ್ಡ ಪ್ರಮಾಣದಲ್ಲಿ ಪೋಲಿಯೊ ಲಸಿಕೆ ಅಭಿಯಾನ ಆರಂಭವಾಗಿದೆ. ಅದರ ಮೊದಲ ಹಂತವು ಯಶಸ್ವಿಯಾಗಿ ಮುಕ್ತಾಯಗೊಂಡಿದ್ದು, ಫೆಲೆಸ್ತೀನ್ ಪ್ರದೇಶದ ಮಧ್ಯಭಾಗದಲ್ಲಿರುವ ಸುಮಾರು 2 ಲಕ್ಷ ಮಕ್ಕಳಿಗೆ ಮೊದಲ ಡೋಸ್ ಅನ್ನು ನೀಡಲಾಗಿದೆ ಎಂದು ವಿಶ್ವ ಆರೋಗ್ಯ ಸಂಸ್ಥೆ ಹೇಳಿಕೊಂಡಿದೆ.

ನಿತ್ಯ ನಡೆಯುತ್ತಿರುವ ಯುದ್ಧದಿಂದಾಗಿ ಸುಮಾರ 2.4 ಮಿಲಿಯನ್ ನಾಗರಿಕರು ತಮ್ಮ ಮನೆಗಳನ್ನು ಬಿಟ್ಟು ಪಲಾಯನ ಮಾಡಿದ್ದು, ನಿರಾಶ್ರಿತರ ಕೇಂದ್ರಗಳಲ್ಲಿ ಆಶ್ರಯವನ್ನು ಪಡೆದುಕೊಂಡಿದ್ದಾರೆ.

25 ವರ್ಷಗಳ ಬಳಿಕ ಗಾಝಾದಲ್ಲಿ ಮೊದಲ ಪೋಲಿಯೊ ಪ್ರಕರಣ ಪತ್ತೆಯಾದ ಬೆನ್ನಲ್ಲೇ ಪೋಲಿಯೊ ಲಸಿಕೆ ಅಭಿಯಾನವನ್ನು ಆರಂಭಿಸಲಾಗಿದೆ. ಸುಮಾರು 11 ತಿಂಗಳ ಯುದ್ಧದಿಂದ ಧ್ವಂಸಗೊಂಡಿರುವ ಗಾಝಾದಲ್ಲಿ 6.4 ಲಕ್ಷಕ್ಕೂ ಹೆಚ್ಚು ಮಕ್ಕಳಿಗೆ ಸಂಪೂರ್ಣವಾಗಿ ಲಸಿಕೆ ಹಾಕುವ ಗುರಿಯನ್ನು ಈ ಅಭಿಯಾನ ಹೊಂದಿದೆ. ಸೆಂಟ್ರಲ್ ಗಾಝಾದಲ್ಲಿ ಸೆ.1 ರಿಂದ 3ರವರೆಗೆ ನಡೆಸಿದ ಮೊದಲ ಹಂತದ ಅಭಿಯಾನದಲ್ಲಿ 10 ವರ್ಷದೊಳಗಿನ 1.87 ಲಕ್ಷಕ್ಕೂ ಹೆಚ್ಚಿನ ಮಕ್ಕಳನ್ನು ತಲುಪಲಾಗಿದೆ ಎಂದು ಡಬ್ಲ್ಯುಎಚ್ಒ ಹೇಳಿಕೆಯಲ್ಲಿ ತಿಳಿಸಿದೆ.

ಈ ಕುರಿತು ಎಕ್ಸ್ ನಲ್ಲಿ ಬರೆದುಕೊಂಡಿರುವ ಡಬ್ಲ್ಯುಎಚ್ಒ ಮುಖ್ಯಸ್ಥ ಟೆಡ್ರೊಸ್ ಅಧಾನೊಮ್ ಘೆಬ್ರೆಯೆಸಸ್, ಗಾಝಾ ಪಟ್ಟಿಯಲ್ಲಿನ ಭೀಕರ ಪರಿಸ್ಥಿತಿಗಳ ಹೊರತಾಗಿಯೂ ಅಭಿಯಾನವನ್ನು ಯಶಸ್ವಿಗೊಳಿಸಿದ ಎಲ್ಲಾ ಕುಟುಂಬಗಳು, ಆರೋಗ್ಯ ಕಾರ್ಯಕರ್ತರಿಗೆ ಅಭಿನಂದನೆ ಸಲ್ಲಿಸುತ್ತೇನೆ, ಇದಲ್ಲದೆ ಗಾಝಾದಲ್ಲಿ ಯುದ್ಧ ವಿರಾಮದ ಕರೆಯನ್ನು ಪುನರುಚ್ಚರಿಸುವುದಾಗಿ ಹೇಳಿದ್ದಾರೆ.

# ಪಂಜಾಬ್ : ಸರ್ಕಾರದ ಸಾಲದ ಹೊರೆ ಇಳಿಸಲು ಜನ ಸಾಮಾನ್ಯರಿಗೆ ಬರೆ!

**ನವದೆಹಲಿ:** ಆಮ್ ಆದ್ಮಿ ಪಕ್ಷದ ಸಿಎಂ ಭಗವಂತ್ ಮಾನ್ ನೇತೃತ್ವದ ಪಂಜಾಬ್ ರಾಜ್ಯ ಸರ್ಕಾರ ತನ್ನ ಸಾಲದ ಹೊರೆ ಕಡಿಮೆ ಮಾಡಲು ಕೆಲ ಕಠಿಣ ಕ್ರಮಗಳನ್ನು ಕೈಗೊಂಡಿದೆ. ರಾಜ್ಯ ಸರ್ಕಾರ ಪೆಟ್ರೋಲ್ ಮತ್ತು ಡೀಸೆಲ್ ಮೇಲಿನ ಮೌಲ್ಯವರ್ಧಿತ ತೆರಿಗೆಯನ್ನು ಕ್ರಮವಾಗಿ 61 ಪೈಸೆ 92



ಪೈಸೆ ಹೆಚ್ಚಿಸುವ ನಿರ್ಣಯ ಸಚಿವ ಸಂಪುಟ ಸಭೆಯಲ್ಲಿ ಕೈಗೊಂಡಿದೆ.ಆ ಮೂಲಕ ಜನಸಾಮಾನ್ಯರಿಗೆ ಬರೆ ಎಳೆದಿದೆ ಟೀಕೆಗಳು ವ್ಯಕ್ತವಾಗುತ್ತಿದೆ.ಈ ಹಿಂದಿನ ಕಾಂಗ್ರೆಸ್ ಸರ್ಕಾರ ಜಾರಿಗೆ ತಂದಿದ್ದು ಸಬ್ಸಿಡಿ ಸಹಿತ ವಿದ್ಯುತ್ ದರ ರೂ.3 ಯೋಜನೆಯನ್ನು ಇದೀಗ ಕಡಿತಗೊಳಿಸಿದೆ. ಕೇಂದ್ರವು ಪಂಜಾಬ್ಗೆ ರೂ.10,000 ಕೋಟಿ ರೂಪಾಯಿ ಅನುದಾನ ಈ ಬಾರಿ ಸ್ಥಗಿತಗೊಳಿಸಿದ ಕಾರಣ ರಾಜ್ಯದ ಆರ್ಥಿಕತೆ ಸುಧಾರಿಸಲು ಈ ಕ್ರಮ ತೆಗೆದುಕೊಳ್ಳಲಾಗಿದೆ ಎಂದು ಸರ್ಕಾರ ಪ್ರತಿಪಾದಿಸಿದೆ. ಕೇಂದ್ರಾಡಳಿತ ಪ್ರದೇಶವಾದ ಚಂಡೀಗಢದಲ್ಲಿ ಪ್ರತಿ ಲೀಟರ್ ಪೆಟ್ರೋಲ್ ಡೀಸೆಲ್ ಬೆಲೆ ಕ್ರಮವಾಗಿ 94.24 ಮತ್ತು 82.40 ರೂಪಾಯಿದ್ದು, ಪ್ರಸ್ತುತ ಮೊಹಾಲಿಯಲ್ಲಿ ಪೆಟ್ರೋಲ್ ಬೆಲೆ ಲೀ. 97.01 ಹಾಗೂ ಡೀಸೆಲ್ ಗೆ 87.21 ರೂಪಾಯಿ ಇದೆ. ಈಗಾಗಲೇ ಚಂಡೀಗಢಕ್ಕಿಂತ ಪಂಜಾಬ್ನಲ್ಲಿ ಇಂಧನ ದುಬಾರಿಯಾಗಿದ್ದು, ಜನ ಸರ್ಕಾರದ ವಿರುದ್ಧ ಆಕ್ರೋಶ ಹೊರ ಹಾಕುತ್ತಿದ್ದಾರೆ. ಕಳೆದೆರಡು ವರ್ಷಗಳಲ್ಲಿ 3ನೇ ಬಾರಿಗೆ ಇಂಧನ ಬೆಲೆಯನ್ನು ಆಪ್ ರಾಜ್ಯ ಸರ್ಕಾರ ಹೆಚ್ಚಿಸಿದೆ.

# ಶೇಖ್ ಹಸೀನಾ ಭಾರತದಲ್ಲಿ ಸುಮ್ಮನಿದ್ದರೆ ಒಳಿತು: ಯೂನಸ್

**ದೆಹಲಿ:** ಭಾರತದಲ್ಲಿರುವ ಶೇಖ್ ಹಸೀನಾ ಅಲ್ಲಿ ಕುಳಿತುಕೊಂಡು ರಾಜಕೀಯ ಹೇಳಿಕೆಗಳನ್ನು ನೀಡುವುದು ಉಭಯ ದೇಶಗಳಿಗೂ ಅನಾನುಕೂಲತೆ ಉಂಟು ಮಾಡುತ್ತದೆ ಎಂದು ಬಾಂಗ್ಲಾದೇಶದ ಮಧ್ಯಂತರ ಸರ್ಕಾರದ ಮುಖ್ಯಸ್ಥರಾಗಿರುವ ಮೊಹಮ್ಮದ್ ಯೂನಸ್ ಹೇಳಿದ್ದಾರೆ. ಪಿಟಿಐಗೆ ನೀಡಿರುವ ಸಂದರ್ಶನದಲ್ಲಿ ಮಾತನಾಡಿರುವ ಮೊಹಮ್ಮದ್ ಯೂನಸ್, ಹಸೀನಾ ಹೇಳಿಕೆ ಇದು ಉಭಯ ದೇಶಗಳ ನಡುವಿನ ಮೈತ್ರಿಗೆ ವಿರುದ್ಧವಾದ ಲಕ್ಷಣವಾಗಿದೆ, ಆದ್ದರಿಂದ ಬಾಂಗ್ಲಾದೇಶ ಅವರ ಗಡಿಪಾರಿಗೆ ಮನವಿ ಸಲ್ಲಿಸುವವರೆಗೂ ಶೇಖ್ ಹಸೀನಾ ಭಾರತದಲ್ಲಿ ಸುಮ್ಮನಿರಬೇಕು ಎಂದು ಹೇಳಿದ್ದಾರೆ. ಬಾಂಗ್ಲಾದೇಶ (ಸರ್ಕಾರ) ಆಕೆಯನ್ನು ಹಿಂತಿರುಗಿಸುವುದಕ್ಕೆ ಮನವಿ ಸಲ್ಲಿಸುವವರೆಗೂ ಭಾರತವು ಆಕೆಯನ್ನು ತನ್ನಲ್ಲಿಯೇ ಉಳಿಸಿಕೊಳ್ಳಲು ಬಯಸಿದರೆ, ಆಕೆ ಮೌನವಾಗಿರಬೇಕಾಗುತ್ತದೆ ಎಂದು ಅವರು ಹೇಳಿದ್ದಾರೆ. ಬಾಂಗ್ಲಾ, ಭಾರತದೊಂದಿಗಿನ ಬಲವಾದ ಬಾಂಧವ್ಯ ಮೌಲ್ಯಯುತವಾದದ್ದು ಎಂದು ಗೌರವಿಸುತ್ತದೆ. ಭಾರತ ಅವಾಮಿ ಲೀಗ್ ಹೊರತುಪಡಿಸಿ ಉಳಿದೆಲ್ಲ ರಾಜಕೀಯ ಪಕ್ಷಗಳನ್ನು ಇಸ್ಲಾಮಿಸ್ಟ್ ಎಂದು ಬಿಂಬಿಸುವ ಮತ್ತು ಶೇಖ್ ಹಸೀನಾ ಇಲ್ಲದೆ ದೇಶವು ಅಫ್ಘಾನಿಸ್ತಾನವಾಗಿ ಬದಲಾಗುತ್ತದೆ ಎಂಬ ನಿರೂಪಣೆಯನ್ನು ಮೀರಿ ನಡೆಯಬೇಕಾಗಿದೆ ಎಂದು ಹೇಳಿದ್ದಾರೆ.

# ಜಸ್ಟಿನ್ ಸರಕಾರಕ್ಕೆ ಸಂಕಷ್ಟ

**ಒಟ್ಟಾವಾ:** ಖಲಿಸ್ತಾನಿ ಪ್ರತ್ಯೇಕತಾವಾದಿಗಳ ಬೆನ್ನಿಗೆ ನಿಂತಿದ್ದ ಕೆನಡಾ ಪ್ರಧಾನಿ ಜಸ್ಟಿನ್ ಟ್ರಾಡೋಗೆ ದಿಢೀರ್ ರಾಜಕೀಯ ಬಿಕ್ಕಟ್ಟು ಎದುರಾಗಿದೆ. ಅವರ ಲಿಬರಲ್ ಸರಕಾರಕ್ಕೆ ಬೆಂಬಲ ನೀಡಿದ್ದ ನ್ಯೂ ಡೆಮಾಕ್ರಟಿಕ್ ಪಕ್ಷ (ಎನ್ಡಿಪಿ) ತನ್ನ ಬೆಂಬಲ ಹಿಂಪಡೆದಿದ್ದು, ಇದೀಗ ಟ್ರಾಡೋ ತಮ್ಮ ಸರಕಾರ ಉಳಿಸಿಕೊಳ್ಳಲು ವಿಶ್ವಾಸಮತ ಸಾಬೀತುಪಡಿಸಬೇಕಾದ ಸಂದರ್ಭ ಬಂದಿದೆ.

# ಅಪಾಯಕಾರಿ 39 ವೈರಸ್ ಪತ್ತೆ

**ಚೀನ:** ತುಪ್ಪಳವುಳ್ಳ ಜೀವಿಗಳ ಮೇಲೆ ನಡೆದ ಅಧ್ಯಯನವೊಂದರಲ್ಲಿ ತುಪ್ಪಳವುಳ್ಳ ಪ್ರಾಣಿಗಳ ಸಾಕಣೆ ಕೇಂದ್ರಗಳಲ್ಲಿನ ಪ್ರಾಣಿಗಳಲ್ಲಿ ಹರಡುತ್ತಿರುವ 125 ಬಗೆಯ ವೈರಸ್‌ಗಳನ್ನು ಗುರುತಿಸಲಾಗಿದ್ದು, ಈ ಕೇಂದ್ರಗಳು ಸಂಭಾವ್ಯ ವೈರಸ್ ಪ್ರಸರಣದ ಮೂಲವಾಗಬಹುದು ಎಂದು ಅಂದಾಜಿಸಲಾಗಿದೆ. ಚೀನ ಮೂಲದ ಸಂಶೋಧಕರು ಮತ್ತು ವೈರಾಣು ತಜ್ಞ ಎಡ್ವರ್ಡ್ ಹೋಮ್ಸ್ ಚೀನದ ತುಪ್ಪಳವುಳ್ಳ ಪ್ರಾಣಿ ಗಳ ಸಾಕಣೆ ಕೇಂದ್ರಗಳಲ್ಲಿ ಜಂಟಿಯಾಗಿ ಕೈಗೊಂಡಿದ್ದ ಅಧ್ಯಯನದಲ್ಲಿ 36 ಅಪರಿ ಚಿತ ವೈರಸ್ಗಳೊಂದಿಗೆ, ಮಾನವರಿಗೂ ಸೋಂಕು ಹರಡಬಲ್ಲ 39 ಅಪಾಯಕಾರಿ ವೈರಸ್ ಗುರುತಿಸಿದೆ. ನೇಚರ್ ಜರ್ನಲ್ನಲ್ಲಿ ಈ ಸಂಶೋಧನೆ ವರದಿ ಪ್ರಕಟ ವಾಗಿದೆ. 2021ರಿಂದ 2024ರ ಅವಧಿ ಯಲ್ಲಿ ರೋಗಗಳಿಗೆ ತುತ್ತಾಗಿ ಸಾವನ್ನಪ್ಪಿದ್ದ ಮಿಂಕ್ಗಳು, ರಕೂನ್ ಡಾಗ್ಗಳು, ಮೊಲಗಳು, ನರಿಗಳು ಸೇರಿ 461 ಪ್ರಾಣಿಗಳನ್ನು ಅಧ್ಯಯನಕ್ಕೆ ಒಳಪಡಿಸ ಲಾಗಿತ್ತು. ಬಾವಲಿಗಳಲ್ಲಿ ಕಂಡುಬರುತ್ತಿದ್ದ ''ಹೆಚ್ಕೆಯು5 ವೈರಸ್ ಇದೇ ಮೊದಲ ಬಾರಿಗೆ ಕ್ರಾಸ್ ಸ್ಪೀಶಿಷ್ ಸೋಂಕಿನ ಮೂಲಕ ಮಿಂಕ್ ಪ್ರಾಣಿಗಳಲ್ಲಿ ಕಂಡುಬಂದಿದ್ದು, ಮುಂದೊಂದು ದಿನ ಮಾನವರಿಗೂ ಸೋಂಕು ಹಬ್ಬುವ ಸಾಧ್ಯತೆಯಿದೆ ಎಂದು ತಿಳಿದುಬಂದಿದೆ.






# ಮೂರು ಪಟ್ಟು ಹೆಚ್ಚಾದ ನೆಲದಲ್ಲಿ ದೈತ್ಯ ಕುಳಿ

**ಸೈಬೀರಿಯಾ:** ಸೈಬೀರಿಯಾದ ಅತ್ಯಂತ ಶೀತ ಮತ್ತು ಕಠಿಣ ಪರಿಸರದಲ್ಲಿ ನೆಲದಲ್ಲಿ ದೈತ್ಯ ಕುಳಿ ಇದೆ. ಇದನ್ನು ಬಟಗೈಕ ಎಂದು ಕರೆಯಲಾಗುತ್ತದೆ. ಸ್ಥಳೀಯ ಜನರು ಇದನ್ನು 'ನರಕದ ಹೆಬ್ಬಾಗಿಲು' ಎಂದೂ ಕರೆಯುತ್ತಾರೆ. ಈ ಕುಳಿ ಪರ್ಮಾಫ್ರಾಸ್ಟ್ ಪ್ರದೇಶದಲ್ಲಿದೆ. ಪರ್ಮಾಫ್ರಾಸ್ಟ್ ಶಾಶ್ವತವಾಗಿ ಹೆಪ್ಪುಗಟ್ಟಿದ ನೆಲದ ಪ್ರದೇಶವಾಗಿದೆ. ಹವಾಮಾನ ಬದಲಾವಣೆಯಿಂದಾಗಿ ಇಲ್ಲಿ ಹಿಮ ಕರಗಲಾರಂಭಿಸಿದೆ. ಅದರ ನಂತರ ಈ ಹೊಂಡದ ಚಿತ್ರವು ಮೊದಲ ಬಾರಿಗೆ ಬೆಳಕಿಗೆ ಬಂದಿದೆ. ಆದರೆ ಈ ಕುಳಿ ಯಾವಾಗಲೂ ಅಷ್ಟು ದೊಡ್ಡದಾಗಿರಲಿಲ್ಲ. ವಿಜ್ಞಾನಿಗಳ ಪ್ರಕಾರ, ಈ ಕುಳಿ 30 ವರ್ಷಗಳಲ್ಲಿ ಮೂರು ಪಟ್ಟು ಹೆಚ್ಚಾಗಿದೆ. ಒಂದು ವರದಿಯ ಪ್ರಕಾರ, ಬಟಗೈಕಾ ವಾಸ್ತವವಾಗಿ ಕುಳಿಯಲ್ಲ ಆದರೆ ಇದು ಪರ್ಮಾಫ್ರಾಸ್ಟ್ನ ಒಂದು ಭಾಗವಾಗಿದೆ, ಇದು ವೇಗವಾಗಿ ಕರಗುತ್ತಿದೆ. ಇದನ್ನು ರೆಟ್ರೊಗ್ರೆಸಿವ್ ಥಾವ್ ಸ್ಲಂಪ್ ಎಂದು ಕರೆಯಲಾಗುತ್ತದೆ. ಆದಾಗ್ಯೂ, ಅದರ ಗಾತ್ರವು ಹೆಚ್ಚುತ್ತಿರುವ ವಿಜ್ಞಾನಿಗಳನ್ನು ಆಶ್ಚರ್ಯಗೊಳಿಸಿದೆ. ಈಗ ಅದು 200 ಎಕರೆಯಲ್ಲಿ ಹರಡಿಕೊಂಡಿದೆ ಮತ್ತು 300 ಅಡಿ ಆಳವಾಗಿದೆ. ಹಿಮ ಕರಗಿದ ನಂತರ ನೀರಿನ ಹರಿವಿನಿಂದಾಗಿ ಅದರ ಗಾತ್ರ ಹೆಚ್ಚುತ್ತಿದೆ. ಇದು ಎಷ್ಟು ದೊಡ್ಡದಾಗಿದೆ ಎಂದರೆ ಈಗ ಅದು ಬಾಹ್ಯಾಕಾಶದಿಂದ ಕೂಡ ಗೋಚರಿಸುತ್ತದೆ. ಆದರೆ, ಆರಂಭದಲ್ಲಿ ಅದು ಒಂದೇ ತುಣುಕಾಗಿ ಮಾತ್ರ ಗೋಚರಿಸುತ್ತಿತ್ತು. ಇದು 1960 ರ ಉಪಗ್ರಹ ಚಿತ್ರಣದಲ್ಲಿ ಅಷ್ಟೇನೂ ಗೋಚರಿಸಲಿಲ್ಲ. ಇದರ ಹೆಚ್ಚಳದಿಂದ ಸುತ್ತಮುತ್ತಲಿನ ಪ್ರದೇಶದಲ್ಲೂ ಭೂಮಿ ಕಡಿಮೆಯಾಗುತ್ತಿದೆ. ಅಲ್ಲದೆ, ಭೂಕುಸಿತದ ಅಪಾಯವೂ ಹೆಚ್ಚುತ್ತಿದೆ.

# ಕಮಲಾ ಹ್ಯಾರಿಸ್‌ಗೆ ಬೆಂಬಲ: ಪುಟಿನ್





**ನ್ಯೂಯಾರ್ಕ್:** ನವೆಂಬರ್ 5 ರಂದು ಅಮೆರಿಕದಲ್ಲಿ ಅಧ್ಯಕ್ಷೀಯ ಚುನಾವಣೆ ನಡೆಯಲಿದೆ. ಕಮಲಾ ಹ್ಯಾರಿಸ್ ಮತ್ತು ಡೊನಾಲ್ಡ್ ಟ್ರಂಪ್ ನಡುವೆ ತೀವ್ರ ಪೈಪೋಟಿ ಏರ್ಪಟ್ಟಿದೆ. ಮತದಾರರನ್ನು ಓಲೈಸಲು ಅಮೆರಿಕದಲ್ಲೂ ಪ್ರಚಾರ ಜೋರಾಗಿದ್ದು, ಈ ಹೊತ್ತಿನಲ್ಲಿ ಒಂದು ಸುದ್ದಿ ಭಾರೀ ಚರ್ಚೆಯಾಗುತ್ತಿದೆ.

ಅಧ್ಯಕ್ಷೀಯ ಚುನಾವಣೆಯಲ್ಲಿ ಕಮಲಾ ಹ್ಯಾರಿಸ್ ಅವರನ್ನು ಬೆಂಬಲಿಸುವುದಾಗಿ ರಷ್ಯಾ ಅಧ್ಯಕ್ಷ ವ್ಲಾಡಿಮಿರ್ ಪುಟಿನ್ ಗುರುವಾರ ಹೇಳಿದ್ದಾರೆ. ಅಧ್ಯಕ್ಷ ಜೋ ಬೈಡೆನ್ ಅವರು ಕಮಲಾ ಹ್ಯಾರಿಸ್ ಅವರನ್ನು ಬೆಂಬಲಿಸುವಂತೆ ಮತದಾರರಿಗೆ ಶಿಫಾರಸು ಮಾಡಿದ್ದಾರೆ. ನಾವು ಕೂಡ ಅವರನ್ನು ಬೆಂಬಲಿಸುತ್ತೇವೆ ಎಂದು ಪುಟಿನ್ ತಮಾಷೆಯಾಗಿ ಹೇಳಿದರು.

ಕಮಲಾ ಹ್ಯಾರಿಸ್ ನಗುವುದು ಒಳ್ಳೆಯ ಸಂಕೇತ ಎಂದು ಪುಟಿನ್ ವ್ಯಂಗ್ಯವಾಡಿದ್ದಾರೆ. ಬಹುಶಃ ಇದರರ್ಥ ಅವರು ರಷ್ಯಾ ವಿರುದ್ಧದ ನಿರ್ಬಂಧಗಳನ್ನು ತಪ್ಪಿಸುತ್ತಾರೆ ಎಂದು ಹೇಳಿದರು.

ಡೊನಾಲ್ಡ್ ಟ್ರಂಪ್ ಅವರು ಅಧ್ಯಕ್ಷರಾಗಿದ್ದ ಅವಧಿಯಲ್ಲಿ ರಷ್ಯಾದ ಮೇಲೆ ಗರಿಷ್ಠ ನಿರ್ಬಂಧಗಳನ್ನು ವಿಧಿಸಿದ್ದಾರೆ. ಆದಾಗ್ಯೂ, ಅಂತಿಮವಾಗಿ ಚುನಾವಣೆಯ ನಿರ್ಧಾರವು ಅಮೆರಿಕಾದ ಜನರ ಕೈಯಲ್ಲಿದೆ ಮತ್ತು ನಾವು ಆ ನಿರ್ಧಾರವನ್ನು ಗೌರವಿಸುತ್ತೇವೆ ಎಂದು ಹೇಳಿದರು.

Postal Registration No.KA/BGW-1823/2019-2021, Posted at Patrika Channel, RMS Bhavan, Bengaluru PSO, Mysore Road, Bengaluru- 560020, RNI No.KARKAN/2002/08054

# ಇಂಡಸ್ಟ್ರಿಯಲ್ಲಿ ಲೈಂಗಿಕ ಕಿರುಕುಳ ಮೀರಿ ಹಲವು ಸಮಸ್ಯೆಗಳಿವೆ...



ಮಲಯಾಳಂ ಹೇಮಾ ಕಮಿಟಿಯಂತೆ ಸ್ಯಾಂಡಲ್‌ವುಡ್‌ನಲ್ಲೂ ಮಹಿಳೆಯರ ಸುರಕ್ಷತೆಗೆ ಕಮಿಟಿಯಾಗಬೇಕು ಎಂದು 'ಫೈರ್ ಸಂಸ್ಥೆ' ಸಿಎಂಗೆ ಮನವಿ ಸಲ್ಲಿಸಿದ ಬಳಿಕ ನಟಿ ಶೃತಿ ಹರಿಹರನ್ ಮಾಧ್ಯಮಗಳಿಗೆ ಪ್ರತಿಕ್ರಿಯೆ ನೀಡಿದ್ದಾರೆ. ಇಂಡಸ್ಟ್ರಿಯಲ್ಲಿ ಲೈಂಗಿಕ ಕಿರುಕುಳ ಮೀರಿ ಹಲವು ಸಮಸ್ಯೆಗಳಿವೆ ಎಂದು ಮಾತನಾಡಿದ್ದಾರೆ.

ಕೇರಳದ ಹೇಮಾ ಕಮಿಟಿ ಹಾಗೇ ನಮ್ಮ ಕನ್ನಡ ಚಿತ್ರರಂಗಕ್ಕೂ ಒಂದು ಕಮಿಟಿ ಬೇಕು. ಮಹಿಳೆಯರು ಸುರಕ್ಷಿತವಾಗಿ ಕೆಲಸ ಮಾಡುವಂತೆ ಆಗಬೇಕು ಎಂದು ಸಿಎಂಗೆ ಮನವಿ ಮಾಡಿರೋದಾಗಿ ಶೃತಿ ಹರಿಹರನ್ ತಿಳಿಸಿದ್ದಾರೆ. ಇದರ ಬಗ್ಗೆ ಇನ್ನಷ್ಟು ಚರ್ಚೆಯಾಗಬೇಕು ಮತ್ತೊಮ್ಮೆ ಸದ್ಯದಲ್ಲೇ ಸಭೆ ಮಾಡೋಣ ಎಂದು ಸಿಎಂ ತಿಳಿಸಿದರು ಎಂದು ನಟಿ ಮಾಹಿತಿ ನೀಡಿದ್ದಾರೆ. 'ಫೈರ್ ಸಂಸ್ಥೆ' ಈ ಹಿಂದೆಯೇ ಶುರುವಾಗಿತ್ತು. ಇಲ್ಲಿ ನ್ಯಾಯದ ಪ್ರಶ್ನೆ ಬರೋದಿಲ್ಲ ಎಂದು ತಾವು ಈ ಹಿಂದೆ ಆರೋಪ ಮಾಡಿದ್ದ ಮೀಟೂ ವಿಚಾರಕ್ಕೆ ಶೃತಿ ಪ್ರತಿಕ್ರಿಯೆ ನೀಡಿದರು. ಬಳಿಕ ಫೈರ್ ನಿಯೋಗದ ಮೂಲಕ ಗಂಡಾಗಲಿ ಅಥವಾ ಮಹಿಳೆಯರಾಗಲಿ ಯಾರೇ ಆಗಲಿ ತಮ್ಮ ಸಮಸ್ಯೆಗಳನ್ನು ಹೇಳಿಕೊಳ್ಳಬಹುದು. ಇದು ಒಂದೇ ಅಲ್ಲ, ಇಂಡಸ್ಟ್ರಿಯಲ್ಲಿ ಲೈಂಗಿಕ ಕಿರುಕುಳ ಮೀರಿ ಹಲವು ಸಮಸ್ಯೆಗಳಿವೆ. ಇದರ ಕಡಿವಾಣಕ್ಕೆ ಸರ್ಕಾರದ ಬೆಂಬಲ ಕೂಡ ಇರುತ್ತದೆ ಎಂದಿದ್ದಾರೆ ಶೃತಿ ಹರಿಹರನ್. ಮಲಯಾಳಂನಲ್ಲಿ ಹೇಮಾ ಕಮಿಟಿ ರಚನೆ ಆದಂತೆ ಕನ್ನಡ ಚಿತ್ರರಂಗದಲ್ಲೂ ಆಗುತ್ತೆ ಎನ್ನುವ ಭರವಸೆಯಿದೆ. ಚಿತ್ರರಂಗದಲ್ಲಿ ಕೆಲಸ ಮಾಡುವವರಿಗೆ ಕೆಲ ಸೌಲಭ್ಯಗಳನ್ನು ಕೊಡಬೇಕಾಗುತ್ತದೆ. ಕೆಲಸದ ಸ್ಥಳದಲ್ಲಿ ವಾಶ್ ರೂಮ್, ವಾಹನದ ವ್ಯವಸ್ಥೆ ಬೇಕಾಗುತ್ತದೆ ಇದು ಕೇವಲ ನಾಯಕಿಯರಿಗೆ ಅಷ್ಟೇ ಅಲ್ಲ. ಜ್ಯೂನಿಯರ್ ಆರ್ಟಿಸ್ಟ್, ಡ್ಯಾನ್ಸರ್‌ಗೆ ಹೀಗೆ ಕೆಲಸ ಮಾಡುವವರಿಗೆ ಸಮಾನತೆ ಇರಬೇಕು ಎಂದು ನಟಿ ಮಾತನಾಡಿದ್ದಾರೆ.

ಸ್ಯಾಂಡಲ್‌ವುಡ್ ನಟರಾದ ಸುದೀಪ್, ರಮ್ಯಾ, ಶ್ರದ್ಧಾ ಶ್ರೀನಾಥ್, ಆಶಿಕಾ ರಂಗನಾಥ್ ಸೇರಿದಂತೆ 140ಕ್ಕೂ ಹೆಚ್ಚು ಕಲಾವಿದರು, ತಂತ್ರಜ್ಞರು ಮತ್ತು ಸಾಹಿತಿಗಳು ಇದಕ್ಕೆ ಬೆಂಬಲ ಸೂಚಿಸಿರುವ ಬಗ್ಗೆ ನಟಿ ಮೆಚ್ಚುಗೆ ವ್ಯಕ್ತಪಡಿಸಿದ್ದಾರೆ. ಸೀನಿಯರ್ ಕಲಾವಿದರರಾದ ಅವರು ಹೊಸ ಕಮಿಟಿ ಮಾಡಲು ಬೆಂಬಲ ಸೂಚಿಸಿರುವುದಕ್ಕೆ ನಮಗೂ ಒಂದು ಶಕ್ತಿ ಸಿಕ್ಕಂತೆ ಆಗಿದೆ ಎಂದು ಶೃತಿ ಮಾತನಾಡಿದ್ದಾರೆ.





# ಕೃತಿ ಶೆಟ್ಟಿಗೆ ಬಿಗ್ ಆಫರ್- ಬಾಲಿವುಡ್‌ನತ್ತ 'ಉಪ್ಪೇನ' ನಟಿ

ಕುಡ್ಲದ ಸುಂದರಿ ಕೃತಿ ಶೆಟ್ಟಿ ತೆಲುಗು, ತಮಿಳು, ಮಲಯಾಳಂ ಬಳಿಕ ಬಾಲಿವುಡ್‌ನತ್ತ ಮುಖ ಮಾಡಿದ್ದಾರೆ. ಸ್ಟಾರ್ ನಟ ವರುಣ್ ಧವನ್‌ಗೆ ಕೃತಿ ಹೀರೋಯಿನ್ ಆಗಿ ಆಯ್ಕೆ ಆಗಿದ್ದಾರೆ ಎನ್ನಲಾದ ಸುದ್ದಿಯೊಂದು ಸೋಶಿಯಲ್ ಮೀಡಿಯಾದಲ್ಲಿ ಹರಿದಾಡುತ್ತಿದೆ. 'ಉಪ್ಪೇನ' ಸಿನಿಮಾ ಮೂಲಕ ಸಕ್ಸಸ್ ಕಂಡಿದ್ದ ನಟಿ ಸೌತ್ ಸಿನಿಮಾಗಳಲ್ಲಿ ಬ್ಯುಸಿಯಾಗಿದ್ದಾರೆ. ಇದರ ನಡುವೆ ವರುಣ್ ಧವನ್ ಹೊಸ ಚಿತ್ರದಲ್ಲಿ ಕೃತಿ ನಾಯಕಿ ಎಂಬ ಸುದ್ದಿ ಬಿಟೌನ್‌ನಲ್ಲಿ ಹರಿದಾಡುತ್ತಿದೆ. ಅದಕ್ಕೆ ಪೂರಕವೆಂಬಂತೆ ಮುಂಬೈನಲ್ಲಿ ನಟಿ ಕಾಣಿಸಿಕೊಂಡಿರೋದು ವರುಣ್ ಜೊತೆಗಿನ ಸಿನಿಮಾ ಸುದ್ದಿಗೆ



ಪುಷ್ಟಿ ನೀಡಿದಂತೆ ಆಗಿದೆ. ಶ್ರೀಲೀಲಾ ಬದಲು ಕೃತಿಗೆ ಚಿತ್ರತಂಡ ಮಣೆ ಹಾಕಿದೆ ಎನ್ನಲಾಗಿದೆ. ಡೇವಿಡ್ ಧವನ್ ನಿರ್ದೇಶನದ ಸಿನಿಮಾಗೆ ಕೃತಿ ನಾಯಕಿನಾ? ಎಂಬ ಸುದ್ದಿ ಚಿತ್ರತಂಡದ ಕಡೆಯಿಂದ ಸ್ಪಷ್ಟನೆ ಸಿಗುವವರೆಗೂ ಕಾಯಬೇಕಿದೆ. ಇನ್ನೂ 'ಉಪ್ಪೇನ' ಬೆಡಗಿಗೆ ಹಿಂದಿ ಸಿನಿಮಾ ಹೊಸದಲ್ಲ. ಈ ಹಿಂದೆ ಹೃತಿಕ್ ರೋಷನ್ ನಟನೆಯ 'ಸೂಪರ್ 30' ಸಿನಿಮಾದಲ್ಲಿ ಸಣ್ಣ ಪಾತ್ರದಲ್ಲಿ ನಟಿ ಕಾಣಿಸಿಕೊಂಡಿದ್ದರು. ಆದಾದ ನಂತರ ಪೂರ್ಣ ಪ್ರಮಾಣದ ನಾಯಕಿಯಾಗಿ 'ಉಪ್ಪೇನ' ಚಿತ್ರದಲ್ಲಿ ಕೃತಿ ಲಾಂಚ್ ಆದರು.

# ಜ್ಯೂ.ಎನ್‌ಟಿಆರ್ ಜೊತೆ ಸೊಂಟ ಬಳುಕಿಸಿದ ಜಾನ್ವಿ ಕಪೂರ್

ಜ್ಯೂ.ಎನ್‌ಟಿಆರ್ ನಟನೆಯ 'ದೇವರ' ಸಿನಿಮಾದ ಸಾಂಗ್ ರಿಲೀಸ್ ಆಗಿ ಸೋಶಿಯಲ್ ಮೀಡಿಯಾದಲ್ಲಿ ಸದ್ದು ಮಾಡುತ್ತಿದೆ. ತಾರಕ್ ರಾಮ್ ಜೊತೆಯಾಗಿ ಜಾನ್ವಿ ಕಪೂರ್ ಸೊಂಟ ಬಳುಕಿಸಿರುವ ರೀತಿ ಕಂಡು ಅಭಿಮಾನಿಗಳು ಫಿದಾ ಆಗಿದ್ದಾರೆ.

'ದೇವರ' ಸಿನಿಮಾದ ಮತ್ತೊಂದು ಸಾಂಗ್ ಬಿಡುಗಡೆಯಾಗಿದೆ. 'ದಾವೂದಿ' ಎಂಬ ಸಾಂಗ್‌ಗೆ ಮಸ್ತ್ ಆಗಿರೋ ಹಾಡಿಗೆ ಜಬರ್‌ದಸ್ತ್ ಆಗಿ ತಾರಕ್ ಮತ್ತು ಜಾನ್ವಿ ಡ್ಯಾನ್ಸ್ ಮಾಡಿದ್ದಾರೆ. ಮಿಲಿಯನ್‌ಗಟ್ಟಲೇ ವಿವ್ಸ್ ಪಡೆದು ಸಾಂಗ್‌ಗೆ ಅದ್ಭುತ ರೆಸ್ಪಾನ್ಸ್ ಸಿಕ್ಕಿದೆ. ಇಬ್ಬರ ಡ್ಯಾನ್ಸ್ ಧಮಾಕಾ ನೋಡಿ ಅಭಿಮಾನಿಗಳಿಗೆ ಸಿನಿಮಾ ಮೇಲಿನ ನಿರೀಕ್ಷೆ ಹೆಚ್ಚಿಸಿದೆ. ಇನ್ನೂ ಇತ್ತೀಚೆಗೆ 'ದೇವರ' ಸಿನಿಮಾದ ರೊಮ್ಯಾಂಟಿಕ್ ಸಾಂಗ್‌ವೊಂದು ರಿಲೀಸ್ ಸಿಕ್ಕಾಪಟ್ಟೆ ಸದ್ದು ಮಾಡಿತ್ತು. ಥೈಲ್ಯಾಂಡ್ ಕಾಡಿನ ಸುಂದರ ಜಾಗವೊಂದರಲ್ಲಿ ದೇವರ ಸಾಂಗ್ ಅನ್ನು ಶೂಟ್ ಮಾಡಲಾಗಿದೆ. ಕನ್ನಡ ವರ್ಷನ್‌ನಲ್ಲಿ ಮೂಡಿ ಬಂದಿರುವ 'ಸ್ವಾತಿಮುತ್ತೇ ಸಿಕ್ಕಂಗೈತೆ' ಹುಡುಗನ ಹುರುಪು ಹಾಡಿನಲ್ಲಿ, ಸಖತ್ ಹಾಟ್ ಆಗಿ ತಾರಕ್ ಜೊತೆ ಜಾನ್ವಿ ಕುಣಿದು ಕುಪ್ಪಳಿಸಿದ್ದರು. ಈ ಹಾಡಿಗೆ ಅಭಿಮಾನಿಗಳಿಂದ ಉತ್ತಮ ರೆಸ್ಪಾನ್ಸ್ ಸಿಕ್ಕಿತ್ತು. ಈ ಚಿತ್ರದಲ್ಲಿ ಜ್ಯೂ.ಎನ್ ಟಿಆರ್ ಡಬಲ್ ರೋಲ್‌ನಲ್ಲಿ ನಟಿಸಿದ್ದಾರೆ. ಅವರ ಜೊತೆಗೆ ಜಾನ್ವಿ ಕಪೂರ್, ಸೈಫ್ ಅಲಿ ಖಾನ್ ಸೇರಿದಂತೆ ಅನೇಕರು ನಟಿಸಿದ್ದಾರೆ. 'ಆರ್‌ಆರ್‌ಆರ್' ಸಿನಿಮಾದ ಸಕ್ಸಸ್ ಬಳಿಕ ಬರುತ್ತಿರುವ 'ದೇವರ' ಚಿತ್ರ ನೋಡಲು ಅಭಿಮಾನಿಗಳು ಕಾಯುತ್ತಿದ್ದಾರೆ. ಇದೇ ಸೆ.27ಕ್ಕೆ ಬಹುಭಾಷೆಗಳಲ್ಲಿ ಸಿನಿಮಾ ರಿಲೀಸ್ ಆಗಲಿದೆ.

ನೂತನ ನಾಯಕನ ನೇಮಕ

# ಟಿ20 ಸರಣಿಯಿಂದ ಬಟ್ಲರ್ ಔಟ್

ಟಿ20 ಹಾಗೂ ಏಕದಿನ ಸರಣಿಯಲ್ಲಿ ಇಂಗ್ಲೆಂಡ್ ಹಾಗೂ ಆಸ್ಟ್ರೇಲಿಯಾ ತಂಡಗಳು ಇದೇ ತಿಂಗಳ 11 ರಿಂದ ಮುಖಾಮುಖಿಯಾಗಲಿವೆ. ಮೊದಲಿಗೆ ಉಭಯ ತಂಡಗಳ ನಡುವೆ ಟಿ20 ಸರಣಿ ನಡೆಯಲ್ಲಿದ್ದು, ಆ ಬಳಿಕ ಏಕದಿನ ಸರಣಿ ಪ್ರಾರಂಭವಾಗಲಿದೆ. ಇದೀಗ ಮೂರು ಪಂದ್ಯಗಳ ಟಿ20 ಸರಣಿಗೆ ಇಂಗ್ಲೆಂಡ್ ತಂಡವನ್ನು ಪ್ರಕಟಿಸಿದೆ.

ಈ ಸರಣಿಗೂ ಮುನ್ನ ಇಂಗ್ಲೆಂಡ್ ತಂಡ ದೊಡ್ಡ ಹಿನ್ನಡೆ ಅನುಭವಿಸಿದ್ದು, ಇಂಗ್ಲೆಂಡ್ ತಂಡದ ಹಾಲಿ ನಾಯಕ ಜೋಸ್ ಬಟ್ಲರ್ ಗಾಯದ ಸಮಸ್ಯೆಯಿಂದ ಈ ಸರಣಿಯಿಂದ ಹೊರಗುಳಿದಿದ್ದಾರೆ. ಬಟ್ಲರ್ ಬಲಗಾಲಿನ ಗಾಯದಿಂದಾಗಿ ತಂಡದಿಂದ ಹೊರಗುಳಿದಿದ್ದು, ಅವರ ಜಾಗದಲ್ಲಿ ಸರ್ರೆ ಆಲ್ ರೌಂಡರ್ ಜೇಮಿ ಓವರ್ಟನ್ ಅವರನ್ನು ತಂಡಕ್ಕೆ ಸೇರಿಸಿಕೊಳ್ಳಲಾಗಿದೆ.

ಬಟ್ಲರ್ ಅನುಪಸ್ಥಿತಿಯಲ್ಲಿ ಫಿಲ್ ಸಾಲ್ಟ್ ಅವರನ್ನು ತಂಡದ ನಾಯಕರನ್ನಾಗಿ ಮಾಡಲಾಗಿದ್ದು, ಉಭಯ ತಂಡಗಳ ನಡುವಿನ ಮೊದಲ ಟಿ20 ಪಂದ್ಯ ಇದೇ ಸೆಪ್ಟೆಂಬರ್ 11 ರಂದು ನಡೆಯಲಿದೆ. ಇದೀಗ ಗಾಯದಿಂದಾಗಿ ಟಿ20 ಸರಣಿಯಿಂದ



ಹೊರಬಿದ್ದಿರುವ ಜೋಸ್ ಬಟ್ಲರ್, ಈ ತಿಂಗಳ ಅಂತ್ಯದಲ್ಲಿ ನಡೆಯಲಿರುವ ಏಕದಿನ ಸರಣಿಯಲ್ಲಿ ಆಡುವುದು ಕೂಡ ಅನುಮಾನ ಎನ್ನಲಾಗುತ್ತಿದೆ.

ಟಿ20 ಸರಣಿಯ ನಂತರ ಆಸ್ಟ್ರೇಲಿಯಾ ಮತ್ತು ಇಂಗ್ಲೆಂಡ್ ನಡುವೆ 5 ಪಂದ್ಯಗಳ ಏಕದಿನ ಸರಣಿ ನಡೆಯಲಿದೆ. ಏಕದಿನ ಸರಣಿಗೂ ಇಂಗ್ಲೆಂಡ್ ತಂಡವನ್ನು ಪ್ರಕಟಿಸಿದೆ. ಏಕದಿನ ಸರಣಿಯಲ್ಲಿ ಬಟ್ಲರ್ ಆಡುವುದು ಅನುಮಾನವಾಗಿರುವುದರಿಂದ ಅವರ ಸ್ಥಾನದಲ್ಲಿ ಬ್ಯಾಟ್ಸ್‌ಮನ್ ಜೋರ್ಡಾನ್ ಕಾಕ್ಸ್ ಅವರನ್ನು ಆಯ್ಕೆ ಮಾಡಲಾಗಿದೆ. 5 ಪಂದ್ಯಗಳ ಏಕದಿನ ಸರಣಿಯ ಮೊದಲ ಪಂದ್ಯ ಸೆಪ್ಟೆಂಬರ್ 19 ರಿಂದ ಟ್ರೆಂಟ್ ಬ್ರಿಡ್ಜ್‌ನಲ್ಲಿ ನಡೆಯಲಿದೆ.

ಟಿ20 ಸರಣಿಗೆ ಇಂಗ್ಲೆಂಡ್ ತಂಡ: ಫಿಲ್ ಸಾಲ್ಟ್ (ನಾಯಕ) ಜೋಫ್ರಾ ಆರ್ಚರ್, ಜಾಕೋಬ್ ಬೆಥೆಲ್, ಬ್ರೈಡನ್ ಕಾರ್ಸೆ, ಜೋರ್ಡಾನ್ ಕಾಕ್ಸ್, ಸ್ಯಾಮ್ ಕರನ್, ಜೋಶ್ ಹಲ್, ವಿಲ್ ಜಾಕ್ವ್ಸ್, ಲಿಯಾಮ್ ಲಿವಿಂಗ್‌ಸ್ಟೋನ್, ಸಾಕಿಬ್ ಮಹಮೂದ್, ಡಾನ್ ಮೌಸ್ಲಿ, ಜೇಮೀ ಓವರ್‌ಟನ್, ಆದಿಲ್ ರಶೀದ್, ರೀಸ್ ಟೋಪ್ಲಿ, ಜಾನ್ ಟರ್ನರ್. ಏಕದಿನ ಸರಣಿಗೆ ಇಂಗ್ಲೆಂಡ್ ತಂಡ: ಜೋಸ್ ಬಟ್ಲರ್ (ನಾಯಕ), ಜೋಫ್ರಾ ಆರ್ಚರ್, ಗಸ್ ಅಟ್ಕಿನ್ಸನ್, ಜಾಕೋಬ್ ಬೆಥೆಲ್, ಹ್ಯಾರಿ ಬ್ರೂಕ್, ಬ್ರೈಡನ್ ಕಾರ್ಸೆ, ಜೋರ್ಡಾನ್ ಕಾಕ್ಸ್, ಬೆನ್ ಡಕೆಟ್, ಜೋಶ್ ಹಲ್, ವಿಲ್ ಜಾಕ್ಸ್, ಮ್ಯಾಥ್ಯೂ ಪಾಟ್ಸ್, ಆದಿಲ್ ರಶೀದ್, ಫಿಲ್ ಸಾಲ್ಟ್, ಜೇಮೀ ಸ್ಮಿತ್, ರೀಸ್ ಟೋಪ್ಲಿ, ಜಾನ್ ಟರ್ನರ್.

# ನಿಷೇಧಕ್ಕೊಳಗಾಗಿ ದಂಡ ತೆತ್ತರೂ ಬುದ್ಧಿ ಕಲಿಯದ ಹರ್ಷಿತ್ ರಾಣಾ

ದೇಶದ ಪ್ರಮುಖ ದೇಶೀ ಟೂರ್ನಿ ದುಲೀಪ್ ಟ್ರೋಫಿ ಇಂದಿನಿಂದ ಆರಂಭವಾಗಿದೆ. ಮೊದಲ ದಿನವೇ 2 ಪಂದ್ಯಗಳು ನಡೆಯುತ್ತಿದ್ದು, ಮೊದಲ ಪಂದ್ಯದಲ್ಲಿ ಭಾರತ ಎ ತಂಡ ಭಾರತ ಬಿ ತಂಡವನ್ನು ಬೆಂಗಳೂರಿನ ಎಂ ಚಿನ್ನಸ್ವಾಮಿ ಸ್ಟೇಡಿಯಂನಲ್ಲಿ ಎದುರಿಸುತ್ತಿದ್ದರೆ, ಎರಡನೇ ಪಂದ್ಯದಲ್ಲಿ ಭಾರತ ಸಿ ತಂಡ, ಭಾರತ ಡಿ ತಂಡವನ್ನು ಅನಂತಪುರದ ರೂರಲ್ ಡೆವಲಪ್‌ಮೆಂಟ್ ಟ್ರಸ್ಟ್ ಸ್ಟೇಡಿಯಂನಲ್ಲಿ ಎದುರಿಸುತ್ತಿದೆ.

ಇನ್ನು ಭಾರತ ಸಿ ಹಾಗೂ ಭಾರತ ಡಿ ತಂಡಗಳ ನಡುವೆ ನಡೆಯುತ್ತಿರುವ ಈ ಪಂದ್ಯದಲ್ಲಿ ಟಾಸ್ ಸೋತು ಮೊದಲು ಬ್ಯಾಟಿಂಗ್ ಮಾಡಿದ ಭಾರತ ಡಿ ಮೊದಲ ಇನ್ನಿಂಗ್ಸ್‌ನಲ್ಲಿ 164 ರನ್‌ಗಳಿಗೆ ಆಲೌಟ್ ಆಗಿದೆ. ಇತ್ತ ತನ್ನ ಮೊದಲ ಇನ್ನಿಂಗ್ಸ್ ಆರಂಭಿಸಿರುವ ಭಾರತ ಸಿ ತಂಡದ ಆರಂಭವೂ ವಿಶೇಷವೇನೂ ಆಗಿರಲಿಲ್ಲ. 14 ರನ್ ಗಳಿಸುವಷ್ಟರಲ್ಲಿ ತಂಡದ 2 ವಿಕೆಟ್‌ಗಳು ಪತನಗೊಂಡವು. ಸಾಯಿ ಸುದರ್ಶನ್ 7 ರನ್ ಮತ್ತು ನಾಯಕ ರುತುರಾಜ್ ಗಾಯಕ್ವಾಡ್ 19 ಎಸೆತಗಳಲ್ಲಿ 5 ರನ್ ಗಳಿಸಿದರು.



**ಫ್ಲೈಯಿಂಗ್ ಕಿಸ್**

**ಇದೇ ಭಾರತ ಸಿ ತಂಡದ ನಾಯಕ ರುತುರಾಜ್ ಗಾಯಕ್ವಾಡ್ ಅವರು ಹರ್ಷಿತ್ ರಾಣಾ ಎಸೆತದಲ್ಲಿ ಶ್ರೀಕರ್ ಭರತ್‌ಗೆ ಕ್ಯಾಚಿತ್ತು ನಿರ್ಗಮಿಸಿದರು. ವೇಗಿ ರಾಣಾ, ಮೊದಲು ಸಾಯಿ ಸುದರ್ಶನ್ ನಂತರ ರುತುರಾಜ್ ಅವರನ್ನು ಔಟ್ ಮಾಡುವಲ್ಲಿ ಯಶಸ್ವಿಯಾದರು. ರುತುರಾಜ್ ವಿಕೆಟ್ ಪಡೆದ ನಂತರ, ಹರ್ಷಿತ್ ರಾಣಾ ಮೈದಾನದಲ್ಲಿಯೇ ಫ್ಲೈಯಿಂಗ್ ಕಿಸ್ ನೀಡುವ ಮೂಲಕ ವಿಕೆಟ್ ಅನ್ನು ಸಂಭ್ರಮಿಸಿದರು. ಅವರ ಸಂಭ್ರಮಾಚರಣೆ ಈ ವಿಡಿಯೋ ಸಾಮಾಜಿಕ ಜಾಲತಾಣದಲ್ಲಿ ವೈರಲ್ ಆಗುತ್ತಿದೆ.**

## ಐಪಿಎಲ್‌ನಲ್ಲಿ ದಂಡ

**ವಾಸ್ತವವಾಗಿ ಇದೇ ರೀತಿಯ ಸಂಭ್ರಮಾಚರಣೆಯಿಂದಾಗಿ ಹರ್ಷಿತ್ ರಾಣಾ ದಂಡವನ್ನು ಪಾವತಿಸಿದಲ್ಲದೆ, ಒಂದು ಪಂದ್ಯದಿಂದ ನಿಷೇಧಕ್ಕೂ ಒಳಗಾಗಿದ್ದರು. 2024 ರ ಐಪಿಎಲ್ ಸಮಯದಲ್ಲಿ, ಹರ್ಷಿತ್ ರಾಣಾ ಅವರು ಸನ್ ರೈಸರ್ಸ್ ಹೈದರಾಬಾದ್ ತಂಡದ ಆರಂಭಿಕ ಬ್ಯಾಟರ್ ಮಯಾಂಕ್ ಅಗರ್ವಾಲ್‌ಗೆ ಪೆವಿಲಿಯನ್ ಹಾದಿ ತೋರಿಸಿದ್ದರು. ಇದಾದ ಬಳಿಕ ಫ್ಲೈಯಿಂಗ್ ಕಿಸ್ ನೀಡಿ ಸಂಭ್ರಮಿಸಿದ್ದರು. ಈ ತಪ್ಪಿಗಾಗಿ, ರಾಣಾಗೆ ಪಂದ್ಯದ ಶುಲ್ಕದ ಶೇಕಡಾ 60 ರಷ್ಟು ದಂಡ ವಿಧಿಸಲಾಯಿತು. ಆ ನಂತರವೂ ತನ್ನ ತಪ್ಪನ್ನು ಸರಿಪಡಿಸಿಕೊಳ್ಳದ ರಾಣಾ ಡೆಲ್ಲಿ ಕ್ಯಾಪಿಟಲ್ಸ್ ವಿರುದ್ಧದ ಪಂದ್ಯದಲ್ಲೂ ಅದೇ ರೀತಿಯ ಸಂಭ್ರಮಾಚರಣೆಯನ್ನು ಪುನರಾವರ್ತಿಸಿದರು. ಹೀಗಾಗಿ ಮತ್ತೊಮ್ಮೆ ಶಿಕ್ಷೆಗೆ ಒಳಗಾಗಿದ್ದ ರಾಣಾ, ಒಂದು ಪಂದ್ಯಕ್ಕೆ ನಿಷೇಧಕ್ಕೊಳಗಾಗಿದಲ್ಲದೆ, 100 ಪ್ರತಿಶತ ಪಂದ್ಯ ಶುಲ್ಕವನ್ನು ದಂಡವಾಗಿ ಪಾವತಿಸಿದ್ದರು. ಆ ನಂತರ ತನ್ನ ತಪ್ಪನ್ನು ಸರಿಪಡಿಸಿಕೊಂಡಿದ್ದ ರಾಣಾ, ಇದೀಗ ಮತ್ತೊಮ್ಮೆ ಅದೇ ರೀತಿಯ ತಪ್ಪನ್ನು ಮಾಡಿದ್ದಾರೆ. ಹೀಗಾಗಿ ರಾಣಾ ಅವರ ಈ ನಡೆಯನ್ನು ಬಿಸಿಸಿಐ ಗಂಭೀರವಾಗಿ ಪರಿಗಣಿಸಿದರೆ ಅವರು ಮತ್ತೊಮ್ಮೆ ಶಿಕ್ಷೆಗೆ ಒಳಗಾಗುವ ಸಾಧ್ಯತೆಗಳಿವೆ.**

# ಸ್ನೇಹಿ ಗಣಪ ಮಾಡುವ ಕಾರ್ಯಾಗಾರ



**ಬೆಂಗಳೂರು:** ಮಹಾಲಕ್ಷ್ಮಿ ಎಜುಕೇಶನ್ ಟ್ರಸ್ಟ್ ಹಾಗೂ ನಿಸರ್ಗ ಫೌಂಡೇಶನ್, ಬಿ ಪ್ಯಾಕ್ ಮತ್ತು ಶ್ರೀ ಮಂಜುನಾಥ ಟ್ರಸ್ಟ್ ವತಿಯಿಂದ ಪರಿಸರ ಸ್ನೇಹಿ ಗಣಪ ಮಾಡುವ ಕಾರ್ಯಗಾರವನ್ನು ಸ್ಥಳೀಯ ಶಾಸಕರಾದ ಕೆ ಗೋಪಾಲಯ್ಯ ಅವರು ಸಂಹಿತಾ ಶಾಲಾ ಆವರಣದಲ್ಲಿ ಉದ್ಘಾಟಿಸಿದರು.

ನಂತರ ಮಾತನಾಡಿದ ಅವರು ನಾವು ಗಣೇಶೋತ್ಸವವನ್ನು ಭಕ್ತಿಯಿಂದ, ಉತ್ಸಾಹದಿಂದ ಮತ್ತು ಸಂಭ್ರಮದಿಂದ ಆಚರಿಸುತ್ತೇವೆ. ಗಣಪನ ಮೂರ್ತಿಯನ್ನು ಸಂಭ್ರಮದಿಂದ ಮನೆಗಳಿಗೆ ತರಲಾಗುತ್ತದೆ. ಆದರೆ ಈ ಸಂಭ್ರಮದ ಆಚರಣೆಯ ಹಿಂದೆ ಪರಿಸರದ ಮೇಲೆ ಬೀರುವ ದುಷ್ಪರಿಣಾಮವನ್ನು ನಾವು ಗಮನಿಸಲು ವಿಫಲರಾಗುತ್ತೇವೆ. ಪ್ಲಾಸ್ಟರ್ ಆಫ್ ಪ್ಯಾರಿಸ್ (ಪಿಒಪಿ) ನಿಂದ ಮಾಡಲಾದ ಗಣಪನ ಮೂರ್ತಿಗಳು ಜಲಮಾಲಿನ್ಯ ಉಂಟು ಮಾಡುತ್ತವೆ, ಈ ಪಿಒಪಿ ಮೂರ್ತಿಗಳು ನೀರಿನಲ್ಲಿ ಕರಗದೆ, ಪರಿಸರವನ್ನು ಹಾಳು ಮಾಡುತ್ತಿವೆ ಎಂದರು

ಈ ಹಿನ್ನೆಲೆಯಲ್ಲಿ, ಮಣ್ಣಿನ ಗಣಪನ ಮಹತ್ವ ಹೆಚ್ಚಾಗಿದೆ. ಮಣ್ಣಿನಿಂದ ತಯಾರಿಸಲಾದ



ಮೂರ್ತಿಗಳು ಸಂಪೂರ್ಣವಾಗಿ ಪರಿಸರ ಸ್ನೇಹಿಯಾಗಿ, ಜಲಾಶಯಗಳಿಗೆ ಹರಿದು ಹೋಗುವಾಗ ಅದು ನೀರನ್ನು ಮಾಲಿನ್ಯಗೊಳ್ಳದಂತೆ ತಡೆಗಟ್ಟುತ್ತದೆ. ಇದಲ್ಲದೆ, ಮಣ್ಣಿನ ಮೂರ್ತಿಗಳನ್ನು ತಯಾರಿಸಲು ಹೆಚ್ಚಿನ ಕೌಶಲ್ಯ ಮತ್ತು ನೈಪುಣ್ಯತೆ ಬೇಕಾಗುತ್ತದೆ, ಇದರಿಂದ ಮಕ್ಕಳಿಗೆ ಕರಕುಶಲತೆ ಹೆಚ್ಚಾಗುತ್ತದೆ.

ಮಣ್ಣಿನ ಗಣಪನ ಉಪಯೋಗವು ನಮ್ಮ ಪರಂಪರೆಗೂ ಕೂಡ ಸಂಬಂಧಿಸಿದೆ. ಹಿಂದಿನ ಕಾಲದಲ್ಲಿ, ನಮ್ಮ ಪೂರ್ವಿಕರು ಮಣ್ಣು ಮತ್ತು ನೈಸರ್ಗಿಕ ಪದಾರ್ಥಗಳಿಂದ ಗಣಪನ ಮೂರ್ತಿಯನ್ನು ತಯಾರಿಸುತ್ತಿದ್ದರು. ಇದು ನಮ್ಮ ಸಂಪ್ರದಾಯ,ನಾವು ಇಂತಹ ಮಣ್ಣಿನ ಗಣಪನನ್ನು ನಮ್ಮ ಮನೆಗಳಲ್ಲಿ ಪ್ರತಿಷ್ಠಾಪಿಸುವ ಮೂಲಕ, ಪರಿಸರವನ್ನು ರಕ್ಷಿಸುವ ಕಡೆ ಹೆಜ್ಜೆ ಹಾಕೋಣ. ಇದೇ ನನ್ನ ವಿನಂತಿ – ಈ ಬಾರಿಯ ಗಣೇಶೋತ್ಸವವನ್ನು ನಾವೆಲ್ಲರೂ ಪರಿಸರ ಸ್ನೇಹಿಯಾಗಿ ಆಚರಿಸೋಣ ಎಂದು ಶಾಲಾ ಮಕ್ಕಳಿಗೆ ತಿಳಿ ಹೇಳಿದರು.

ಇದೇ ಸಂದರ್ಭದಲ್ಲಿ ಶಿಕ್ಷಕರ ದಿನಾಚರಣೆಯ ಪ್ರಯುಕ್ತ ಡಾ।। ಸರ್ವಪಲ್ಲಿ ರಾಧಾಕೃಷ್ಣ ರವರ ಭಾವಚಿತ್ರಕ್ಕೆ ಪುಷ್ಪ ನಮನ ಸಲ್ಲಿಸಿ, ಎಲ್ಲ ಶಿಕ್ಷಕರಿಗೆ ಶುಭ ಹಾರೈಸಿದರು. ಇದರ ಸವಿನೆನಪಿಗಾಗಿ ಗಿಡ ನೆಡಲಾಯಿತು. ಈ ಸಂದರ್ಭದಲ್ಲಿ ಮಾಜಿ ಶಾಸಕರಾದ ನೆಲ ನರೇಂದ್ರಬಾಬು, ಮಾಜಿ ಉಪ ಮಹಾಪೌರರಾದ ಶ್ರೀಮತಿ ಹೇಮಲತಾ ಗೋಪಾಲಯ್ಯ, ಮಹಾಲಕ್ಷ್ಮಿ ಎಜುಕೇಶನಲ್ ಟ್ರಸ್ಟ್ ನ ಅಧ್ಯಕ್ಷರಾದ ಜಯರಾಮ್, ಮಂಡಲದ ಅಧ್ಯಕ್ಷರಾದ ರಾಘವೇಂದ್ರ ಶೆಟ್ಟಿ, ನಿಸರ್ಗ ಜಗದೀಶ್, ಅವಿನ್ ಆರಾಧ್ಯ, ಶಿವಾನಂದ ಮೂರ್ತಿ, ಚಂದ್ರಕಲಾ ಜಗದೀಶ್, ಮಂಜುನಾಥ್ ಶಾಲೆಯ ಶಿಕ್ಷಕರು ಮತ್ತು ಪ್ರಾಂಶುಪಾಲರು ಉಪಸ್ಥಿತರಿದ್ದರು.

# ಗಣೇಶ ಚತುರ್ಥಿ; ನಾಳೆ ಪ್ರಾಣಿವಧೆ, ಮಾಂಸ ಮಾರಾಟ ನಿಷೇಧ

**ಬೆಂಗಳೂರು:** ಗಣೇಶ ಚತುರ್ಥಿ ಹಬ್ಬದ ಪ್ರಯುಕ್ತ ಪ್ರಾಣಿವಧೆ ಹಾಗೂ ಮಾಂಸ ಮಾರಾಟ ನಿಷೇಧಿಸಿದೆ ಎಂದು ಬಿಬಿಎಂಪಿ ಆದೇಶ ಹೊರಡಿಸಿದೆ. ಅಲ್ಲದೇ ನಿಯಮ ಉಲ್ಲಂಘಿಸಿದವರ ವಿರುದ್ಧ ಸೂಕ್ತ ಕ್ರಮ ಕೈಗೊಳ್ಳುವುದಾಗಿ ಎಚ್ಚರಿಕೆ ನೀಡಿದೆ.



ನಾಳೆ ಗಣೇಶ ಚತುರ್ಥಿ ಹಬ್ಬದ ದಿನವಾಗಿದ್ದರಿಂದ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ವ್ಯಾಪ್ತಿಯ ಕಸಾಯಿಖಾನೆಯಲ್ಲಿ ಪ್ರಾಣಿವಧೆ, ಮಾರಾಟ ಮಳಿಗೆಗಳಲ್ಲಿ ಮಾಂಸ ಮಾರುವಂತಿಲ್ಲ. ಈ ಕುರಿತು ಬಿಬಿಎಂಪಿ ಜಂಟಿ ನಿರ್ದೇಶಕರು (ಪಶುಪಾಲನೆ) ಸುತ್ತೋಲೆ ಹೊರಡಿಸಿದ್ದಾರೆ. ನಿಯಮ ಮೀರಿದಲ್ಲಿ ಕ್ರಮದ ಎಚ್ಚರಿಕೆ ಕೂಡ ನೀಡಲಾಗಿದೆ.

ಇನ್ನು ನಗರದಾದ್ಯಂತ ಗಣೇಶ ಉತ್ಸವವನ್ನು ಆಯೋಜಿಸುವವರಿಗೆ ಈಗಾಗಲೇ ಬಿಬಿಎಂಪಿ ಕಡ್ಡಾಯವಾಗಿ ಪಾಲಿಸುವಂತೆ ಕೆಲ ನಿಯಮಗಳ ಪಟ್ಟಿ ಪ್ರಕಟಿಸಿತ್ತು. ನಗರದ ವಿವಿಧೆಡೆ ಗಣೇಶ ಮೂರ್ತಿಗಳನ್ನು ಪ್ರತಿಷ್ಠಾಪಿಸಲಾಗುತ್ತಿದ್ದು, ರಸ್ತೆಗಳಲ್ಲಿ ಯಾವುದೇ ಅಹಿತಕರ ಘಟನೆಗಳು ನಡೆಯದಂತೆ ನೋಡಿಕೊಳ್ಳಬೇಕು. ಅಹಿತಕರ ಘಟನೆ ನಡೆದರೆ ಗಣೇಶ ಉತ್ಸವದ ಆಯೋಜಕರನ್ನೇ ಹೊಣೆ ಮಾಡುವ ಬಗ್ಗೆ ಬಿಬಿಎಂಪಿ ಎಚ್ಚರಿಕೆ ನೀಡಿತ್ತು.

Printed, Published & Owned by N.Venugopal Krishna, Printed at DASHAPRAMATHI MUDRANALAYA, No.433/1, Chikkavitalenahalli Village, Thagachagere Post, Kasaba Hobli, Channapatna Taluk, Ramanagar District, Pin-562160. Published at No.15, Ground Floor, 12th Block, 5th Main, Kumara Park (West), Behind BDA Head Office, Bengaluru-560020. Editor: N.Venugopal Krishna, Mobile No.+91 94835 89085, email: sanjemugilu@gmail.com